ಸಂಪುಟ: 05 ಸಂಚಿಕೆ: 135 ಪುಟಗಳು: 08 ಸೋಮವಾರ 28 ಜುಲೈ 2025

www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

RNI No. KARKAN/2021/80833

9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಕಷ್ಟ ಬಂದಾಗ ಕೈಕೊಡುವ ಸಂಬಂಧಗಳನ್ನು ನಂಬುದಕಿಂತ ಕಷ್ಟದಲ್ಲಿ ಸಂಕಷ್ಟದಲ್ಲಿ ದೇವರಾಗಿ ಬಂದು ಕೈಹಿಡಿಯುವ ಹೃದಯವನ್ನು ನಂಬಿದ್ರೆ, ನಿಜವಾದ ದೇವರು ನಿಮ್ಮಗೆ ಕಾಣುತ್ತಾನೆ.

## ರಾಜ್ಯದಲ್ಲಿ ಗೊಬ್ಬರ ಅಭಾವ ಬಿಜೆಪಿ ಹೋರಾಟ: ವಿಜಯೇಂದ್ರ

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ರೈತರಿಗೆ ಸಕಾಲದಲ್ಲಿ ಗೊಬ್ಬರ ವಿತರಿಸದೆ ಸಂಕಷ್ಟ ಸೃಷ್ಟಿ ಮಾಡಿರುವ ಸರ್ಕಾರದ ನೀತಿಯನ್ನು ಖಂಡಿಸಿ ಪ್ರತಿಪಕ್ಷ ಬಿಜೆಪಿ ಬೆಂಗಳೂರು ಹೊರತು ಪಡಿಸಿ ನಾಳೆಯಿಂದ ರಾಜ್ಯಾದ್ಯಂತ ಪ್ರತಿಭಟನೆಗೆ ಧುಮುಕಲಿದೆ. ಬೆಂಗಳೂರು ಹೊರತುಪಡಿಸಿ ಜಿಲ್ಲಾ ಹಾಗೂ ತಾಲ್ಲೂಕು ಕೇಂದ್ರಗಳಲ್ಲಿ ರಸಗೊಬ್ಬರವನ್ನು ಪೂರೈಕೆ ಮಾಡದೆ ಅಭಾವ ಸೃಷ್ಟಿಸಿರುವ ಸರ್ಕಾರದ ವಿರುದ್ಧ ಪ್ರತಿಭಟನೆ ನಡೆಸಲಿದ್ದೇವೆ. ಬಿಜೆಪಿಯ ರೈತ ಮೋರ್ಚಾದಿಂದ ಎರಡು ಹಂತಗಳಲ್ಲಿ ರಾಜ್ಯಾದ್ಯಂತ ಹೋರಾಟ ಮಾಡುತ್ತೇವೆ ಎಂದು ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಹೇಳಿದ್ದಾರೆ.

ರಾಜ್ಯದಲ್ಲಿ ರಸಗೊಬ್ಬರ ಕಳ್ಳ ದಂಧೆ ನಡೆಯುತ್ತಿದೆ. ರಸಗೊಬ್ಬರ ಅಭಾವ, ನಕಲಿ ಕೃಷಿ ಬೀಜಗಳಿಗೆ ಸರ್ಕಾರವೇ ಹೊಣೆ ಎಂದು ಆರೋಪಿಸಿದರು. ನಕಲಿ ಬಿತ್ತನೆ ಬೀಜ, ರಸಗೊಬ್ಬರ ಅಭಾವ, ಯಾರು ಕಳ್ಳಸಾಗಣೆ ಮಾಡುತ್ತಿದ್ದಾರೆ ಇದನ್ನು ಪತ್ತೆ ಹಚ್ಚಿ ಸರ್ಕಾರ ಕ್ರಮ ತೆಗೆದುಕೊಳ್ಳಬೇಕು. ರಸಗೊಬ್ಬರ ಕಳ್ಳದಂಧೆಗೆ ಬ್ರೋಕರ್‌ಗಳು ಕಾರಣ. ಇವರಿಗೆ ಸಹಕಾರ ಕೊಡುವ ಕೆಲಸ ಸರ್ಕಾರದಲ್ಲಿ ನಡೆಯುತ್ತಿದೆ ಎಂದು ಗಂಭೀರ ಆರೋಪ ಮಾಡಿದರು.

## ಪಂಚ ಗ್ಯಾರಂಟಿಗಳ ನಡುವೆಯೂ ಕಳೆದ 1 ವರ್ಷದಲ್ಲಿ 981 ರೈತರ ಆತ್ಮಹತ್ಯೆ

• ಉದಯವಾಹಿನಿ, ಬೆಂಗಳೂರು

ಉಚಿತ ವಿದ್ಯುತ್, ಶೂನ್ಯ ಬಡ್ಡಿ ದರದಲ್ಲಿ ಬೆಳೆ ಸಾಲ, ಕೃಷಿ, ತೋಟಗಾರಿಕೆ, ರೇಷ್ಮೆ ಹಾಗೂ ಪಶುಪಾಲನೆ ಇಲಾಖೆಗಳ ಮೂಲಕ ಸಹಾಯಧನ, ರಿಯಾಯ್ತಿ ನೀಡುವ ಹಲವು ಯೋಜನೆಗಳು ಜಾರಿಯಲ್ಲಿದ್ದರೂ ರಾಜ್ಯದಲ್ಲಿ ರೈತರ ಆತಹತ್ಯೆ ಪ್ರಕರಣಗಳು ನಿಂತಿಲ್ಲ. ಅಲ್ಲದೆ, ರಾಜ್ಯ ಸರ್ಕಾರ ಪಂಚ ಗ್ಯಾರಂಟಿ ಯೋಜನೆಗಳನ್ನು ಅನುಷ್ಠಾನಕ್ಕೆ ತಂದು ಜನರ ನೆರವಿಗೆ ಧಾವಿಸಿದೆ. ಆದರೂ ಕಳೆದೊಂದು ವರ್ಷದ ಅವಧಿಯಲ್ಲೇ ರಾಜ್ಯದಲ್ಲಿ 981 ರೈತರು ಆತಹತ್ಯೆ ಮಾಡಿಕೊಂಡಿದ್ದಾರೆ. ಸಾಲದ ಬಾಧೆ, ಬೆಳೆನಷ್ಟ ಮೊದಲಾದ ಕಾರಣಗಳಿಗೆ ರೈತರು ಆತಹತ್ಯೆ ಮಾಡಿಕೊಂಡಿದ್ದಾರೆ. ಲಭ್ಯವಿರುವ ಮಾಹಿತಿ ಪ್ರಕಾರ 2024ರ ಏಪ್ರಿಲ್ ಒಂದರಿಂದ ಮೇ 25ರವರೆಗೆ ರಾಜ್ಯದಲ್ಲಿ 981ರೈತರ ಆತಹತ್ಯೆ ಪ್ರಕರಣಗಳು ವರದಿಯಾಗಿವೆ. ಈ ಪೈಕಿ ಸರ್ಕಾರದಿಂದ 807 ಪ್ರಕರಣಗಳಲ್ಲಿ ಮೃತ ರೈತರ ಕುಟುಂಬಗಳಿಗೆ ಪರಿಹಾರ ಒದಗಿಸಲಾಗಿದೆ.

## ಚುನಾವಣಾ ಅಕ್ರಮಗಳ ಬಗ್ಗೆ ಸಂಸತ್ತಿನಲ್ಲಿ ಚರ್ಚೆ : ಮಲ್ಲಿಕಾರ್ಜುನ ಖರ್ಗೆ

• ಉದಯವಾಹಿನಿ, ಬೆಂಗಳೂರು

ಚುನಾವಣಾ ಅಕ್ರಮಗಳ ಬಗ್ಗೆ ಸಂಸತ್ತಿನಲ್ಲಿ ಚರ್ಚೆ ನಡೆಸಲಾಗುವುದು ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚುನಾವಣಾ ಅಕ್ರಮಗಳ ಬಗ್ಗೆ ಈಗಾಗಲೇ ಚರ್ಚೆಗಳಾಗುತ್ತಿವೆ. ಅದರ ಕುರಿತು ಲೋಕಸಭೆ ಹಾಗೂ ರಾಜ್ಯಸಭೆಯಲ್ಲಿ ಚರ್ಚೆ ನಡೆಸುವುದಾಗಿ ತಿಳಿಸಿದರು. ಇದೇವೇಳೆ ರಾಜ್ಯದಲ್ಲಿನ ನಿಗಮ ಮಂಡಳಿಗಳ ನೇಮಕಾತಿಯ ಬಗ್ಗೆ ಪ್ರತಿಕ್ರಿಯಿಸಿದ ಖರ್ಗೆ ಅವರು ಈ ಕುರಿತು ನನ್ನನ್ನು ಕೇಳಬೇಡಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಬಳಿ ಕೇಳಿ ಎಂದು ಹೇಳಿದ್ದಾರೆ.

**ಭಾರಿ ಚರ್ಚೆ:** ಚುನಾವಣಾ ಅಕ್ರಮಗಳ ಬಗ್ಗೆ ರಾಹುಲ್ ಗಾಂಧಿ ನೀಡಿರುವ ಹೇಳಿಕೆ ದೇಶಾದ್ಯಂತ ಭಾರೀ ಸಂಚಲನ ಮೂಡಿಸಿದೆ. ಅದರಲ್ಲೂ ಕರ್ನಾಟಕದಲ್ಲಿನ ಲೋಕಸಭಾ ಕ್ಷೇತ್ರವೊಂದರ ಕುರಿತು ಕಾಂಗ್ರೆಸ್ ಪಕ್ಷದಿಂದ ವ್ಯಾಪಕ ಅಧ್ಯಯನ ನಡೆಸಲಾಗಿದೆ. ಅಲ್ಪಸಂಖ್ಯಾತರ ಪ್ರದೇಶಗಳಲ್ಲಿ ಮತದಾರರ ಪಟ್ಟಿಯಲ್ಲಿ ಕಡಿತವಾಗಿದೆ. ಇನ್ನೂ ಕೆಲವು ಕಡೆ ಅನಗತ್ಯವಾಗಿ ಹೆಚ್ಚುವರಿ ಸೇರ್ಪಡೆಗಳಾಗಿವೆ ಎಂಬ ಆರೋಪಗಳಿವೆ.

ಮತದಾರರ ಸೇರ್ಪಡೆ ಹಾಗೂ ತೆಗೆದು ಹಾಕುವಿಕೆಯ ಅಕ್ರಮಗಳ ಮೂಲಕವೇ ಬಿಜೆಪಿ ಹೆಚ್ಚು ಕ್ಷೇತ್ರಗಳಲ್ಲಿ ಗೆಲುವು ಸಾಧಿಸಿದೆ ಎಂಬ ಆರೋಪಗಳು ವ್ಯಾಪಕವಾಗುತ್ತಿವೆ. ಕರ್ನಾಟಕದ ಕ್ಷೇತ್ರವೊಂದರ ಅಧ್ಯಯನವನ್ನೊಳಗೊಂಡಂತೆ ದೇಶಾದ್ಯಂತ ನಡೆದಿರುವ ಅಕ್ರಮಗಳನ್ನು ಸಂಸತ್‌ನಲ್ಲಿ ಪ್ರಸ್ತಾಪಿಸುವ ಮೂಲಕ ಲೋಕಸಭೆ ಚುನಾವಣೆಯ ಫಲಿತಾಂಶದ ಬಗ್ಗೆ ವಿಶ್ಲೇಷಣೆ ನಡೆಸಲು ಕಾಂಗ್ರೆಸ್ ಮುಂದಾಗಿದೆ.

## ಡ್ರಗ್ಸ್ ಫ್ಯಾಕ್ಟರಿ ಪತ್ತೆ, ಕೋಟ್ಯಂತರ ರೂ. ಬೆಲೆಯ ಮಾದಕ ವಸ್ತು ವಶ

• ಉದಯವಾಹಿನಿ, ಬೆಂಗಳೂರು

ಸಿಂಥೆಟಿಕ್ ಡ್ರಗ್ಸ್ ಎಂಡಿಎಂಎ ತಯಾರಿಕಾ ಘಟಕ ಸಾಂಸ್ಕೃತಿಕ ರಾಜಧಾನಿ ಮೈಸೂರಿನಲ್ಲಿ ಪತ್ತೆಯಾಗಿದ್ದು, ಕೋಟ್ಯಂತರ ರೂ. ಬೆಲೆಯ ಮಾದಕ ವಸ್ತುಗಳನ್ನು ಜಪ್ತಿ ಮಾಡಲಾಗಿದೆ. ಕೋಟ್ಯಂತರ ರೂ. ಮೌಲ್ಯದ ಎಂಡಿಎಂಎ ಹಾಗೂ ಅದರ ತಯಾರಿಕೆಗೆ ಬಳಕೆ ಮಾಡಲು ಸಂಗ್ರಹಿಸಿಟ್ಟಿದ್ದ ಕಚ್ಚಾ ಸರಕುಗಳನ್ನು ಮೈಸೂರು ಪೊಲೀಸರ ಸಹಯೋಗದಲ್ಲಿ ಮಹಾರಾಷ್ಟ್ರ ಪೊಲೀಸರು ಪತ್ತೆ ಹಚ್ಚಿದ್ದಾರೆ. ಕರ್ನಾಟಕವನ್ನು ಮಾದಕ ವ್ಯಸನ ಮುಕ್ತ ರಾಜ್ಯ ಮಾಡುವುದಾಗಿ ಪಣತೊಟ್ಟು ರಾಜ್ಯ ಪೊಲೀಸರು 2020ರಿಂದಲೂ ಸಮಾರೋಪಾದಿಯ ಕಾರ್ಯಾಚರಣೆ ನಡೆಸುತ್ತಿದ್ದಾರೆ.

ಮಾದಕ ವಸ್ತುಗಳ ಸರಬರಾಜು ಹಾಗೂ ಮಾರಾಟದ ಮೇಲೆ ರಾಜ್ಯ ಪೊಲೀಸರು ತೀವ್ರ ನಿಗಾ ಇರಿಸಿದ್ದಾರೆ. ಪದೇಪದೇ ಕಾರ್ಯ ನಡೆಸಿ, ಆರೋಪಿಗಳನ್ನು ಬಂಧಿಸಿ ಮಾದಕ ವಸ್ತುಗಳನ್ನು ಜಪ್ತಿ ಮಾಡುತ್ತಿರುತ್ತಾರೆ. ಈ ನಡುವೆಯೂ ಸಿದ್ದರಾಮಯ್ಯ ಅವರ ತವರೂರು ಮೈಸೂರಿನಲ್ಲಿ ಸಿಂಥೆಟಿಕ್‌ಡ್ರಗ್ ತಯಾರಿಕಾ ಘಟಕ ಪತ್ತೆಯಾಗಿರುವುದು ಮತ್ತು ಇಲ್ಲಿಂದ ಮಹಾರಾಷ್ಟ್ರ ಸೇರಿದಂತೆ ವಿವಿಧ ರಾಜ್ಯಗಳಿಗೆ ಎಂಡಿಎಂಎ ಸರಬರಾಜು ಮಾಡುತ್ತಿರುವುದು ಬೆಚ್ಚಿಬೀಳುವಂತೆ ಮಾಡಿದೆ.

ಮೈಸೂರಿನ ರಿಂಗ್‌ರಸ್ತೆಯಲ್ಲಿ ಎಂಡಿಎಂಎ ತಯಾರಿಕಾ ಘಟಕವನ್ನು ಮಹಾರಾಷ್ಟ್ರದ ಪೊಲೀಸರು ಪತ್ತೆ ಹಚ್ಚಿ ದಾಳಿ ನಡೆಸಿ ಆರು ಮಂದಿ ಆರೋಪಿಗಳನ್ನು ಬಂಧಿಸಿದ್ದಾರೆ. ಮಹಾರಾಷ್ಟ್ರದಲ್ಲಿ ಬಂಧಿತ ಡ್ರಗ್ ಪೆಡ್ಲರ್ ಒಬ್ಬ ತಮಗೆ ಮೈಸೂರಿನಿಂದ ಎಂಡಿಎಂಎ ಸರಬರಾಜು ಆಗುತ್ತಿರುವುದಾಗಿ ಮಾಹಿತಿ ನೀಡಿದ್ದಾನೆ. ಅದನ್ನು ಆಧರಿಸಿ ಮೈಸೂರಿಗೆ ಆಗಮಿಸಿದ ಮಹಾರಾಷ್ಟ್ರ ಪೊಲೀಸರು ಸ್ಥಳೀಯ ಪೊಲೀಸರ ಸಹಾಯದಿಂದ ಕಾರ್ಯಾಚರಣೆ ನಡೆಸಿದಾಗ ತಯಾರಿಕಾ ಅಡ್ಡೆ ಪತ್ತೆಯಾಗಿದೆ.


ದೇವಾಲಯದ ಮೆಟ್ಟಿಲುಗಳ ಮೇಲೆ ವಿದ್ಯುತ್ ಅವಘಡ ಸಂಭವಿಸಿರುವ ವದಂತಿ

# ಹೇ ಹರಿಯೇ.. ಸಾವು ಸರಿಯೇ...!



**ಪ್ರಧಾನಿ ಮೋದಿ ಸಂತಾಪ**

ಕಾಲ್ತುಳಿತದಲ್ಲಿ ಜೀವಹಾನಿ ಸಂಭವಿಸಿರುವುದು ತೀವ್ರ ದುಃಖ ತಂದಿದೆ ಎಂದು ಪ್ರಧಾನಿ ಮೋದಿ ಸಂತಾಪ ವ್ಯಕ್ತಪಡಿಸಿದ್ದಾರೆ.ತಮ್ಮ ಪ್ರೀತಿಪಾತ್ರರನ್ನು ಕಳೆದುಕೊಂಡವರಿಗೆ ಸಂತಾಪ ಸೂಚಿಸುತ್ತೇನೆ. ಗಾಯಾಳುಗಳು ಬೇಗ ಗುಣಮುಖರಾಗಲಿ. ಸ್ಥಳೀಯ ಆಡಳಿತವು ಸಂತ್ರಸ್ತರಿಗೆ ಸಹಾಯ ಮಾಡುತ್ತಿದೆ ಎಂದು ಪ್ರಧಾನಿ ಮೋದಿ ಎಕ್ಸ್ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ.



- ಹರಿದ್ವಾರ ಘೋರ ದುರಂತ
- ಹರಿದ್ವಾರ ಮಾನಸ ದೇವಿ
- ದೇವಸ್ಥಾನದಲ್ಲಿ ಕಾಲ್ತುಳಿತ :
- ಕನಿಷ್ಠ ಆರು ಮಂದಿ ಮೃತ್ಯು
- 6 ಮಂದಿ ಸಾವು, ಹಲವರಿಗೆ ಗಂಭೀರ ಗಾಯ!

**6 ಮಂದಿ ಸಾವು, 35ಕ್ಕೂ ಹೆಚ್ಚು ಜನರಿಗೆ ಗಾಯ**

ಇನ್ನೂ ಕೆಲವರಿಗೆ ವಿದ್ಯುತ್ ಆಘಾತದ ಗುಮಾನಿಯಿಂದ ಉಂಟಾದ ಗಾಬರಿಯೇ ಈ ದುರಂತಕ್ಕೆ ಕಾರಣವಾಯಿತು ಎಂದು ಪ್ರಾಥಮಿಕವಾಗಿ ತಿಳಿದುಬಂದಿದೆ ಎಂದು ಹರಿದ್ವಾರ ಎಸ್‌ಎಸ್‌ಪಿ ಪರಮೇಂದ್ರ ಸಿಂಗ್ ಡೋಬಾಲ್ ಮಾಹಿತಿ ನೀಡಿದ್ದಾರೆ. ಈ ಘಟನೆಯಲ್ಲಿ 35ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದು, ಆರು ಮಂದಿ ಸಾವನಪ್ಪಿದ್ದಾರೆ ಎಂದು ತಿಳಿಸಿದ್ದಾರೆ. ಗರ್ವಾಲ್ ವಿಭಾಗದ ಆಯುಕ್ತ ವಿನಯ್ ಶಂಕರ್ ಪಾಂಡೆ ಈ ಘಟನೆಯನ್ನು ದೃಢಪಡಿಸಿದ್ದು, ಹರಿದ್ವಾರದ ಮಾನಸ ದೇವಿ ದೇವಸ್ಥಾನದಲ್ಲಿ ಭಾರೀ ಜನಸಮೂಹ ಜಮಾಯಿಸಿದ ನಂತರ ಕಾಲ್ತುಳಿತ ಸಂಭವಿಸಿದ್ದು, ಆರು ಜನರು ಸಾವನ್ನಪ್ಪಿದ್ದಾರೆ. ನಾನು ಘಟನಾ ಸ್ಥಳಕ್ಕೆ ತೆರಳುತ್ತಿದ್ದೇನೆ, ವಿವರವಾದ ವರದಿಯನ್ನು ನಿರೀಕ್ಷಿಸಲಾಗುತ್ತಿದೆ ಎಂದು ಎಎನ್‌ಐಗೆ ತಿಳಿಸಿದ್ದಾರೆ.

• ಉದಯವಾಹಿನಿ, ಉತ್ತರಾಖಂಡ

ಹರಿದ್ವಾರ ಧಾರ್ಮಿಕ ನಗರಿ ಹರಿದ್ವಾರದಲ್ಲಿರುವ ಮಾನಸಾ ದೇವಿ ದೇವಸ್ಥಾನದ ಬಳಿ ಭಾನುವಾರ ಬೆಳಗ್ಗೆ ಕಾಲ್ತುಳಿತ ಸಂಭವಿಸಿದೆ. ಘಟನೆಯಲ್ಲಿ 6 ಜನರು ಸಾವನ್ನಪ್ಪಿದ್ದು, 29 ಮಂದಿ ಗಾಯಗೊಂಡಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಘಟನೆಯ ಮಾಹಿತಿ ತಿಳಿದು ಸ್ಥಳಕ್ಕೆ ಧಾವಿಸಿದ ಪೊಲೀಸರು ಹಾಗೂ ಇತರ ತಂಡಗಳು ರಕ್ಷಣಾ ಕಾರ್ಯಾಚರಣೆ ಕೈಗೊಂಡಿದ್ದಾರೆ. ವೈದ್ಯಕೀಯ ತಂಡಗಳು ಮತ್ತು ಆಂಬ್ಯುಲೆನ್ಸ್‌ಗಳು ತಕ್ಷಣ ಸ್ಥಳಕ್ಕೆ ತಲುಪಿದ್ದು, ಗಾಯಾಳುಗಳನ್ನು ಚಿಕಿತ್ಸೆಗಾಗಿ ಹತ್ತಿರದ ಆಸ್ಪತ್ರೆಗಳಿಗೆ ಸಾಗಿಸಲಾಗಿದೆ. ಶ್ರಾವಣ ಮಾಸದ ಹಿನ್ನೆಲೆಯಲ್ಲಿ ಸಾವಿರಾರು ಭಕ್ತರು ಸೇರಿದ್ದರಿಂದ ದೇವಾಲಯದ ಆವರಣದಲ್ಲಿ ಜನದಟ್ಟಣೆ ಹೆಚ್ಚಾಗಿತ್ತು ಎಂದು ಪ್ರತ್ಯಕ್ಷದರ್ಶಿಗಳು ತಿಳಿಸಿದ್ದಾರೆ.

**ವಿದ್ಯುತ್ ಅವಘಡದ ವದಂತಿ ಹಿನ್ನೆಲೆ ಘಟನೆ :** ಘಟನೆ ಬಗ್ಗೆ ಮಾಹಿತಿ ನೀಡಿರುವ ಹರಿದ್ವಾರ ಎಸ್‌ಎಸ್‌ಪಿ ಪ್ರಮೇಂದ್ರ ಸಿಂಗ್ ದೋಬಾಲ್, ಕಾಲ್ತುಳಿತದಲ್ಲಿ ಹಲವರು ಗಾಯಗೊಂಡಿದ್ದಾರೆ ಎಂಬ ಬಗ್ಗೆ ನಮಗೆ ಮಾಹಿತಿ ಬಂತು. ಘಟನೆ ನಡೆದ ತಕ್ಷಣ ಪೊಲೀಸರು ಕ್ರಮ ಕೈಗೊಂಡರು. ಗಾಯಗೊಂಡ ಸುಮಾರು 35 ಜನರನ್ನು ಆಸ್ಪತ್ರೆಗೆ ರವಾನಿಸಲಾಯಿತು, ಆದರೆ ಅವರಲ್ಲಿ 6 ಮಂದಿ ಸಾವನ್ನಪ್ಪಿದ್ದಾರೆ ಎಂದು ದೃಢಪಟ್ಟಿದೆ. ಉಳಿದವರು ಚಿಕಿತ್ಸೆ ಪಡೆಯುತ್ತಿದ್ದಾರೆ. ಪ್ರಾಥಮಿಕವಾಗಿ, ದೇವಾಲಯದ ಮೆಟ್ಟಿಲುಗಳ ಮೇಲೆ ವಿದ್ಯುತ್ ಅವಘಡ ಸಂಭವಿಸಿರುವ ವದಂತಿ ಹಿನ್ನೆಲೆಯಲ್ಲಿ ಕಾಲ್ತುಳಿತ ಸಂಭವಿಸಿದೆ. ಭಯಭೀತರಾದ ಭಕ್ತರು ಒಬ್ಬರ ಮೇಲೊಬ್ಬರು ಬಿದ್ದು ಘಟನೆ ನಡೆದಿದೆ. ಈ ಬಗ್ಗೆ ನಾವು ಹೆಚ್ಚಿನ ತನಿಖೆ ನಡೆಸುತ್ತಿದ್ದೇವೆ ಎಂದು ತಿಳಿಸಿದ್ದಾರೆ.



1 ಹರಿದ್ವಾರದ ಮಾನಸ ದೇವಿ ದೇವಸ್ಥಾನದಲ್ಲಿ ದುರಂತ

2 ಘಟನಾ ಸ್ಥಳಕ್ಕೆ ಭೇಟಿ ಕೊಟ್ಟ ಪೊಲೀಸ್ ಅಧಿಕಾರಿಗಳು

3 ಕೇಂದ್ರ ಸರ್ಕಾರದ ನಡೆ ಬಗ್ಗೆ ಸಿದ್ದರಾಮಯ್ಯ ಗರಂ...!

**ಶ್ರಾವಣ ಮಾಸದ ಪೂಜೆಗೆ ತೆರಳಿದ್ದ ವೇಳೆ ಕಾಲ್ತುಳಿತ**

**ಮಾಹಿತಿ ಪ್ರಕಾರ ಶ್ರಾವಣ ಮಾಸದ ಪವಿತ್ರ ಸಂದರ್ಭದಲ್ಲಿ ಮಾನಸದೇವಿ ದೇವಾಲಯಕ್ಕೆ ದರ್ಶನಕ್ಕಾಗಿ ದೂರದೂರದಿಂದ ಸಾವಿರಾರು ಭಕ್ತರು ಆಗಮಿಸಿದ್ದರು. ಬೆಳಿಗ್ಗೆ ದರ್ಶನದ ಸಮಯದಲ್ಲಿ, ದೇವಾಲಯದ ಮೆಟ್ಟಿಲು ಮಾರ್ಗದಲ್ಲಿ ಭಕ್ತರ ಒತ್ತಡ ಇದ್ದಕ್ಕಿದ್ದಂತೆ ಹೆಚ್ಚಾದಾಗ, ಜನರು ಜಾರಿ ಬಿದ್ದಿದ್ದಾರೆ ಮತ್ತು ಕೆಲವರು ಇತರರ ಮೇಲೆ ಬಿದ್ದಿದ್ದು, ಇದರಿಂದ ಕಾಲ್ತುಳಿತ ಸಂಭವಿಸಿದೆ. ಇದರಲ್ಲಿ ಈಗಾಗಲೇ 6 ಜನರು ಸಾವನಪ್ಪಿದ್ದಾರೆ, ಇನ್ನೂ ಹಲವರು ಗಂಭೀರವಾಗಿ ಗಾಯಗೊಂಡಿದ್ದರು ಆಸ್ಪತ್ರೆಗೆ ಚಿಕಿತ್ಸೆಗಾಗಿ ದಾಖಲಿಸಲಾಗಿದೆ.**

**ಮ್ಯಾಜಿಸ್ಟೀರಿಯಲ್ ತನಿಖೆಗೆ ಆದೇಶ:** ಘಟನೆಯ ಬಗ್ಗೆ ಮ್ಯಾಜಿಸ್ಟೀರಿಯಲ್ ತನಿಖೆಗೆ ಆದೇಶಿಸಲಾಗಿದೆ ಹಾಗೂ ವದಂತಿ ಹರಡುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಉತ್ತರಾಖಂಡ ಮುಖ್ಯಮಂತ್ರಿ ಪುಷ್ಕರ್ ಸಿಂಗ್ ಧಾಮಿ ಹೇಳಿದ್ದಾರೆ. ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಮೃತರ ಕುಟುಂಬಗಳಿಗೆ 2 ಲಕ್ಷ ರೂ. ಮತ್ತು ಗಾಯಗೊಂಡವರಿಗೆ 50,000 ರೂ.ಗಳ ನೆರವು ಘೋಷಿಸಿದ್ದಾರೆ.ಇದಕ್ಕೂ ಮುನ್ನ ಘಟನೆ ಬಗ್ಗೆ ಪ್ರತಿಕ್ರಿಯಿಸಿದ್ದ ಸಿಎಂ ಪುಷ್ಕರ್ ಸಿಂಗ್ ಧಾಮಿ, ಕಾಲ್ತುಳಿತ ದುರಂತಕ್ಕೆ ದುಃಖ ವ್ಯಕ್ತಪಡಿಸಿದ್ದರು. ಸ್ಥಳೀಯ ಆಡಳಿತದೊಂದಿಗೆ ಸಂಪರ್ಕದಲ್ಲಿದ್ದೇನೆ. ಹಾಗೂ ಪರಿಸ್ಥಿತಿಯನ್ನು ಸೂಕ್ಷ್ಮವಾಗಿ ಗಮನಿಸಲಾಗುತ್ತಿದೆ ಎಂದು ತಿಳಿಸಿದ್ದಾರೆ. ಹರಿದ್ವಾರದ ಮಾನಸಾ ದೇವಿ ದೇವಸ್ಥಾನಕ್ಕೆ ಹೋಗುವ ಮಾರ್ಗದಲ್ಲಿ ಸಂಭವಿಸಿದ ಕಾಲ್ತುಳಿತದ ಸುದ್ದಿ ಕೇಳಿ ತುಂಬಾ ದುಃಖವಾಯಿತು.

ಸ್ಥಳೀಯ ಪೊಲೀಸರು ಮತ್ತು ಇತರ ರಕ್ಷಣಾ ತಂಡಗಳು ಸ್ಥಳಕ್ಕೆ ತಲುಪಿದ್ದು, ಪರಿಹಾರ ಮತ್ತು ರಕ್ಷಣಾ ಕಾರ್ಯಾಚರಣೆಯಲ್ಲಿ ತೊಡಗಿವೆ. ಈ ಬಗ್ಗೆ ನಾನು ಸ್ಥಳೀಯ ಆಡಳಿತದೊಂದಿಗೆ ನಿರಂತರ ಸಂಪರ್ಕದಲ್ಲಿದ್ದೇನೆ. ಪರಿಸ್ಥಿತಿಯನ್ನು ಸೂಕ್ಷ್ಮವಾಗಿ ಗಮನಿಸಲಾಗುತ್ತಿದೆ.

ಎಲ್ಲಾ ಭಕ್ತರ ಸುರಕ್ಷತೆ ಮತ್ತು ಯೋಗಕ್ಷೇಮಕ್ಕಾಗಿ ನಾನು ಮಾತೃ ದೇವಿಯನ್ನು ಪ್ರಾರ್ಥಿಸುತ್ತೇನೆ ಸಿಎಂ ಧಾಮಿ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ. 23ರಂದು ನಡೆದ ಜಲಾಭಿಷೇಕ ಮಹೋತ್ಸವದ ಬಳಿಕ ಕ್ಷೇತ್ರಕ್ಕೆ ಲಕ್ಷಾಂತರ ಕನ್ವಾರಿಯರು ಮತ್ತು ಇತರ ಭಕ್ತರು ಹರಿದ್ವಾರಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುತ್ತಿದ್ದಾರೆ. ಅಲ್ಲದೆ, ವಾರಾಂತ್ಯದ ಹಿನ್ನೆಲೆಯಲ್ಲಿ, ಹರಿದ್ವಾರದಲ್ಲಿ ಹೆಚ್ಚಿನ ಜನಸಂದಣಿ ಇತ್ತು ಎಂದು ವರದಿಯಾಗಿದೆ. ಮಾನಸಾ ದೇವಿ ದೇವಸ್ಥಾನದಲ್ಲಿ ಪ್ರತಿದಿನ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುತ್ತಾರೆ.

ಅದರಲ್ಲೂ ಪ್ರತಿ ವರ್ಷ, ಶ್ರಾವಣ ಮಾಸದ ಸಂದರ್ಭದಲ್ಲಿ ಹರಿದ್ವಾರಕ್ಕೆ, ವಿಶೇಷವಾಗಿ ಪವಿತ್ರವಾದ ಹರ್ ಕಿ ಪೌರಿ ಮತ್ತು ಮಾನಸಾ ದೇವಿಯ ದರ್ಶನಕ್ಕಾಗಿ ದೇಶದ ಹಲವೆಡೆಗಳಿಂದ ಹೆಚ್ಚಿನ ಯಾತ್ರಾರ್ಥಿಗಳು ಭೇಟಿ ನೀಡುತ್ತಾರೆ. ಇದರಿಂದಾಗಿ ದೇವಿಯ ದೇವಸ್ಥಾನದಲ್ಲಿ ಸದಾ ಭಕ್ತರ ಜನಸಂದಣಿ ಇರುತ್ತದೆ.



**ತಕ್ಷಣ ರಕ್ಷಣಾ ಕಾರ್ಯಾಚರಣೆ!:** ರಕ್ಷಣಾ ಕಾರ್ಯಾಚರಣೆಘಟನೆಯ ನಂತರ ದೇವಾಲಯದ ಆಡಳಿತ ಮಂಡಳಿ, ಸ್ಥಳೀಯ ಪೊಲೀಸರು, ಮತ್ತು ಉತ್ತರಾಖಂಡದ ಎಸ್‌ಡಿಆರ್‌ಎಫ್ ತಂಡಗಳು ತಕ್ಷಣ ರಕ್ಷಣಾ ಕಾರ್ಯಾಚರಣೆಯಲ್ಲಿ ತೊಡಗಿಕೊಂಡವು. ಗಾಯಾಳುಗಳನ್ನು ಆಂಬುಲೆನ್ಸ್‌ಗಳ ಮೂಲಕ ಆಸ್ಪತ್ರೆಗೆ ಕರೆದೊಯ್ಯಲಾಗಿದ್ದು, ಚಿಕಿತ್ಸೆಯನ್ನು ಒದಗಿಸಲಾಗುತ್ತಿದೆ.

ಘಟನಾ ಸ್ಥಳದಿಂದ ಬಂದ ದೃಶ್ಯಾವಳಿಗಳು ಗಾಯಗೊಂಡ ಭಕ್ತರನ್ನು ಆಸ್ಪತ್ರೆಗೆ ಕರೆದೊಯ್ಯುತ್ತಿರುವ ದೃಶ್ಯವನ್ನು ತೋರಿಸುತ್ತವೆ. ಪರಿಸ್ಥಿತಿಯು ಈಗ ನಿಯಂತ್ರಣದಲ್ಲಿದೆ ಎಂದು ಪೊಲೀಸರು ತಿಳಿಸಿದ್ದಾರೆ, ಆದರೆ ದೇವಾಲಯದ ಆವರಣದಲ್ಲಿ ತಾತ್ಕಾಲಿಕ ಅವ್ಯವಸ್ಥೆ ನೆಲೆಗೊಂಡಿತ್ತು.

## ಕರ್ನಾಟಕ-ಮಹಾರಾಷ್ಟ್ರ ಗಡಿ ವಿಚಾರದಲ್ಲಿ ಮಹಾಜನ್ ವರದಿಯೇ ಅಂತಿಮ

• ಉದಯವಾಹಿನಿ, ಬೆಳಗಾವಿ


ಕರ್ನಾಟಕ-ಮಹಾರಾಷ್ಟ್ರ ಗಡಿ ವಿಚಾರದಲ್ಲಿ ಮಹಾಜನ್ ವರದಿಯೇ ಅಂತಿಮ, ಸುಪ್ರೀಂ ಕೋರ್ಟ್‌ನಲ್ಲಿ ಬಾಕಿ ಇರುವ ಪ್ರಕರಣದ ಬಗ್ಗೆ ಕನ್ನಡಿಗರು ಚಿಂತಿಸುವ ಅಗತ್ಯವಿಲ್ಲ ಎಂದು ಗಡಿ ಉಸ್ತುವಾರಿ ಸಚಿವರೂ ಆಗಿರುವ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪ್ರವಾಸೋದ್ಯಮ ಇಲಾಖೆಯ ಸಚಿವರಾದ ಹೆಚ್. ಕೆ.ಪಾಟೀಲ್ ಅವರು ಹೇಳಿದ್ದಾರೆ.

ಬೆಳಗಾವಿ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಗಡಿ ಭಾಗದ ಕನ್ನಡಪರ ಸಂಘಟನೆಗಳ ಮುಖಂಡರ ಜೊತೆಗೆ ಸಭೆ ನಡೆಸಿದ ಬಳಿಕ ಸಚಿವರು ಸುದ್ದಿಗಾರರೊಂದಿಗೆ ಮಾತನಾಡಿದರು.

ಬೆಳಗಾವಿ ಮತ್ತು ಗಡಿ ಪ್ರದೇಶಗಳಲ್ಲಿ ಜನರು ಶಾಂತಿ ಮತ್ತು ಸಾಮರಸ್ಯದಿಂದ ಬದುಕುತ್ತಿದ್ದಾರೆ. ಆದಾಗ್ಯೂ, ಕೆಲವರು ನ್ಯಾಯಾಂಗ ಹೋರಾಟದ ನೆಪದಲ್ಲಿ ರಾಜಕೀಯ ಲಾಭಕ್ಕಾಗಿ ಈ ವಿಷಯವನ್ನು ಜೀವಂತವಾಗಿಡಲು ಪ್ರಯತ್ನಿಸುತ್ತಿದ್ದಾರೆ. ವಾಸ್ತವದಲ್ಲಿ, ಕಳೆದ 14 ವರ್ಷಗಳಿಂದ ಈ ಪ್ರಕರಣ ನ್ಯಾಯಾಲಯದಲ್ಲಿ ವಿಚಾರಣೆಗೆ ಬಂದಿಲ್ಲ, ಏಕೆಂದರೆ ಇದು ಸಾಂವಿಧಾನಿಕ ಪ್ರಶ್ನೆಯನ್ನು ಒಳಗೊಂಡಿದೆ. ಕನ್ನಡಿಗರು ಇದರ ಬಗ್ಗೆ ಆತಂಕಪಡುವ ಅಗತ್ಯವಿಲ್ಲ ಎಂದು ಹೇಳಿದರು.

ಮಹದಾಯಿ ಯೋಜನೆಗೆ ಗೋವಾದ ವಿರೋಧದ ಕುರಿತು ಮಾತನಾಡಿ, ನ್ಯಾಯಮಂಡಳಿಯು ಈಗಾಗಲೇ ಕರ್ನಾಟಕಕ್ಕೆ 3.9 ಟಿಎಂಸಿ ನೀರನ್ನು ಹಂಚಿಕೆ ಮಾಡಿದೆ. ಅರಣ್ಯ, ಸಕ್ಷಮ ಅಧಿಕಾರಿಗಳಿಂದ ಅನುಮತಿಗಳನ್ನು ಪಡೆಯಲಾಗಿದೆ. ವನ್ಯಜೀವಿ ಮಂಡಳಿಯೂ ಸಹ ಅನುಮತಿ ನೀಡಿದೆ, ಆದರೆ, ಪ್ರಕ್ರಿಯೆಯು ಈಗ ಅನಗತ್ಯವಾಗಿ ವಿಳಂಬವಾಗುತ್ತಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಇದೇ ವೇಳೆ ಪ್ರಧಾನಿ ಮೋದಿ ಮತ್ತು ಕೇಂದ್ರ ಪರಿಸರ ಸಚಿವ ಭೂಪೇಂದ್ರ ಯಾದವ್ ಅವರಿಗೆ ಮನವಿ ಮಾಡಿದ ಪಾಟೀಲ್, ಇದು ಗೊಂದಲ ಸೃಷ್ಟಿಸುವ ಸಮಯವಲ್ಲ. ಮಹಾದಾಯಿ ಸಮಸ್ಯೆಯನ್ನು ಪರಿಹರಿಸಲು ಗೋವಾ ಮತ್ತು ಕರ್ನಾಟಕ ಸಿಎಂಗಳ ಸಭೆಯನ್ನು ಕರೆಯುವುದಾಗಿ ಚುನಾವಣಾ ಪ್ರಚಾರದ ಸಮಯದಲ್ಲಿ ಮೋದಿ ಸ್ವತಃ ಭರವಸೆ ನೀಡಿದ್ದರು.



**ಕನ್ನಡಿಗರು ಚಿಂತಿಸುವ ಅಗತ್ಯವಿಲ್ಲ**

ಪ್ರಧಾನಿ ಮತ್ತು ಬಿಜೆಪಿ ಸಂಸದರು ಈಗೇಕೆ ಮೌನವಾಗಿದ್ದಾರೆ? ಗೋವಾ ಸಿಎಂ ಹೇಳಿಕೊಂಡಿರುವಂತೆ ಕೇಂದ್ರವು ತನ್ನ ನಿಲುವನ್ನು ಸ್ಪಷ್ಟಪಡಿಸಬೇಕು. ಮೌನವು ಒಕ್ಕೂಟ ರಚನೆಗೆ ಹಾನಿ ಮಾಡುತ್ತದೆ ಎಂದು ತಿಳಿಸಿದರು.

ಇದಕ್ಕೂ ಮೊದಲು, ಪಾಟೀಲ್ ಅವರು ಗಡಿ ಪ್ರದೇಶಗಳ ಕನ್ನಡ ಸಂಘಟನೆಗಳ ಪ್ರತಿನಿಧಿಗಳೊಂದಿಗೆ ಮಾತುಕತೆ ನಡೆಸಿದರು, ಕನ್ನಡ ಕಾರ್ಯಕರ್ತರ ವಿರುದ್ಧದ ಪ್ರಕರಣಗಳನ್ನು ಹಿಂತೆಗೆದುಕೊಳ್ಳುವ ಕುರಿತು ಪರಿಶೀಲಿಸಲಾಗುವುದು ಎಂದರು. ಬೆಳಗಾವಿ ಸೇರಿದಂತೆ ಗಡಿ ಪ್ರದೇಶಗಳಲ್ಲಿನ ಕನ್ನಡ ಮಾಧ್ಯಮ ಶಾಲೆಗಳ ಮೂಲಸೌಕರ್ಯ ಮತ್ತು ಗುಣಮಟ್ಟವನ್ನು ಸುಧಾರಿಸಲು, ಶಿಕ್ಷಣ ಸಚಿವರು ಮತ್ತು ಬೆಳಗಾವಿ ನಿಯೋಗದೊಂದಿಗೆ ವಿವರವಾದ ಚರ್ಚೆ ನಡೆಸುವುದಾಗಿ ಪಾಟೀಲ್ ಹೇಳಿದರು. ಈ ಶಾಲೆಗಳ ಸ್ಥಿತಿಯನ್ನು ಅಧ್ಯಯನ ಮಾಡಲು ಮತ್ತು ಸರ್ಕಾರದ ಕ್ರಮಕ್ಕೆ ಅನುಕೂಲವಾಗುವಂತೆ ವರದಿಯನ್ನು ಸಲ್ಲಿಸಲು ಸ್ಥಳೀಯ ಸಮಿತಿಯನ್ನು ರಚಿಸುವಂತೆ ಕನ್ನಡ ಸಂಘಟನೆಗಳನ್ನು ಒತ್ತಾಯಿಸಿದರು. ಪ್ರವಾಸೋದ್ಯಮವನ್ನು ಉತ್ತೇಜಿಸಲು ಬೆಂಗಳೂರಿನ ವಿಧಾನಸೌಧದಂತೆಯೇ ಬೆಳಗಾವಿಯಲ್ಲಿ ಸುವರ್ಣ ವಿಧಾನಸೌಧವನ್ನು ಸಾರ್ವಜನಿಕ ವೀಕ್ಷಣೆಗೆ ತೆರೆಯಲು ಕ್ರಮ ಕೈಗೊಳ್ಳಲಾಗುವುದು ಎಂದು ಇದೇ ವೇಳೆ ಸಚಿವರು ಘೋಷಿಸಿದರು.

## ಕರಾವಳಿಗೆ ಪ್ರತ್ಯೇಕ ಪ್ರವಾಸೋದ್ಯಮ ನೀತಿ ರೂಪಿಸುವುದು ಸರ್ಕಾರದ ಆದ್ಯತೆ

### 2 ದಿನಗಳ ಕುಂದಾಪ್ರ ಕನ್ನಡ ಹಬ್ಬ-2025 ಕಾರ್ಯಕ್ರಮ ಕುಂದಾಪ್ರ ಕನ್ನಡ ಅಧ್ಯಯನ ಪೀಠ ಲೋಕಾರ್ಪಣೆ

• ಉದಯವಾಹಿನಿ, ಬೆಂಗಳೂರು

ಕುಂದಾಪುರ ಕನ್ನಡ ಹಬ್ಬದ ಸಮಾರೋಪ ಸಮಾರಂಭದಲ್ಲಿ ಡಿಸಿಎಂ ಡಿಕೆಶಿ ಭಾಗಿಯಾಗಿ ಖ್ಯಾತ ಸಿನಿಮಾ ನಿರ್ದೇಶಕ ಯೋಗರಾಜ್ ಭಟ್ ಅವರಿಗೆ ಡಿಸಿಎಂ ಡಿ.ಕೆ.ಶಿವಕುಮಾರ್ ಸಮ್ಮುಖದಲ್ಲಿ ಊರ ಗೌರವ ಎನ್ನುವ ವಿಶೇಷ ಪುರಸ್ಕಾರ ನೀಡಿದರು. ಜೊತೆಗೆ ಕರಾವಳಿಗೆ ಪ್ರತ್ಯೇಕ ಪ್ರವಾಸೋದ್ಯಮ ನೀತಿ ರೂಪಿಸುವುದಾಗಿ ಭರವಸೆ ನೀಡಿದರು. ಬೆಂಗಳೂರಿನ ಕುಂದಾಪ್ರ ಕನ್ನಡ ಪ್ರತಿಷ್ಠಾನ (ರಿ.) ಹೊಸಕೆರೆಹಳ್ಳಿ ನೈಸ್ ರೋಡ್ ಜಂಕ್ಷನ್ ಸಮೀಪದ ನಂದಿ ಲಿಂಕ್ ಗ್ರೌಂಡ್‌ನಲ್ಲಿ ಹಮ್ಮಿಕೊಂಡಿರುವ ಎರಡು ದಿನಗಳ ಕುಂದಾಪ್ರ ಕನ್ನಡ ಹಬ್ಬ-2025 ಕಾರ್ಯಕ್ರಮ 'ಕುಂದಾಪ್ರ ಕನ್ನಡ ಅಧ್ಯಯನ ಪೀಠ'ವನ್ನು ಲೋಕಾರ್ಪಣೆ ಮಾಡಿ ಅವರು ಮಾತನಾಡಿದರು.

**ಕುಂದಾಪ್ರ ಕನ್ನಡ ಅಧ್ಯಯನ ಪೀಠ ರಿಲೀಸ್:** ಕುಂದಾಪ್ರ (ಕುಂದಾಪುರ) ಕನ್ನಡ ಕುರಿತು ಇನ್ನಷ್ಟು ಮಾಹಿತಿ ಸಂಗ್ರಹಿಸುವ ಮೂಲಕ 'ಕುಂದಾಪ್ರ ಕನ್ನಡ ಅಧ್ಯಯನ ಪೀಠ'ವನ್ನು ಮತ್ತಷ್ಟು ಬಲಗೊಳಿಸುವ ಪ್ರಯತ್ನ ನಡೆಯಬೇಕು ಎಂದು ಮಾಜಿ ಸಂಸದ, ಕುಂದಾಪ್ರ ಕನ್ನಡ ಅಧ್ಯಯನ ಪೀಠದ ಸದಸ್ಯರೂ ಆಗಿರುವ ಕೆ. ಜಯಪ್ರಕಾಶ್ ಹೆಗ್ಡೆ ಕರೆ ನೀಡಿದರು. ನಾಲ್ಕು ವರ್ಷಗಳ ಹಿಂದೆ ಕುಂದಾಪ್ರ ಕನ್ನಡ ಹಬ್ಬದಲ್ಲಿ ಈ ಅಧ್ಯಯನ ಪೀಠಕ್ಕೆ ಬೇಡಿಕೆ ಇಟ್ಟಿದ್ದರು. ನಂತರ ಅದಕ್ಕೆ ಮಂಗಳೂರು ವಿಶ್ವವಿದ್ಯಾನಿಲಯದ ಸಿಂಡಿಕೇಟ್ ಮಾತ್ರವಲ್ಲದೆ ಸರ್ಕಾರ ಕೂಡ ಒಪ್ಪಿಗೆ ನೀಡಿತು. ಬಳಿಕ ಸಿಎಂ ಆದ ಸಿದ್ದರಾಮಯ್ಯ ಅವರು ಈ ಪೀಠಕ್ಕೆ 1.5 ಕೋಟಿ ರೂ. ಮಂಜೂರು ಮಾಡಿದರು ಎಂದು ಹೆಗ್ಡೆ ತಿಳಿಸಿದರು.



**ಪೀಠಕ್ಕೆ 1.5 ಕೋಟಿ ರೂ. ಮಂಜೂರು**

**ಕುಂದಗನ್ನಡ ಆಯಪ್ ಬಿಡುಗಡೆ:** ರವಿ ಬಸ್ರೂರು ರೂಪಿಸಿರುವ ಕುಂದಗನ್ನಡದ ಸುಮಾರು 9 ಸಾವಿರ ಪದಗಳನ್ನು ಒಳಗೊಂಡ 'ಡಿಜಿಟಲ್ ಶಬ್ದಕೋಶ' ಎಂಬ ಆ್ಯಪ್ ಕೂಡ ಈ ವೇಳೆ ಬಿಡುಗಡೆ ಮಾಡಲಾಯಿತು.

**ಬೆಂಗಳೂರು ಎಲ್ಲರದ್ದು: ಡಿಕೆಶಿ**

**ಬೆಂಗಳೂರು ಕರ್ನಾಟಕದ ಎಲ್ಲಾ ಜನತೆಯ ಹೃದಯಭಾಗವಿದ್ದಂತೆ. ಯಾರಿಗೂ ತಾವು ಪರವೂರಿನವರು ಎಂಬ ಭಾವನೆ ಬೇಡ. ಇದು ನಿಮ್ಮೆಲ್ಲರ ರಾಜ್ಯ ಬೆಂಗಳೂರು ರಾಜ್ಯದ ಕೇಂದ್ರ ಸ್ಥಳವಾಗಿದೆ. ಬೆಂಗಳೂರು ಎಲ್ಲರನ್ನೂ ಒಳಗೊಳ್ಳುತ್ತದೆ. ಯಾರೇ ಬೆಂಗಳೂರಿಗೆ ಬಂದರೂ ವಾಪಾಸ್ಸು ಅವರ ಊರಿಗೆ ಮರಳಿ ಹೋಗುವ ಮನಸ್ಸು ಮಾಡುವುದಿಲ್ಲ. 340 ಕಿ.ಮೀ.ನಷ್ಟು ವ್ಯಾಪಿಸಿರುವ ಕರಾವಳಿ ಪ್ರದೇಶಕ್ಕೆ ಪ್ರತ್ಯೇಕವಾದ ಪ್ರವಾಸೋದ್ಯಮ ನೀತಿಯನ್ನು ಘೋಷಣೆ ಮಾಡಿದ್ದೇವೆ. ಅದು ಜಾರಿಗೆ ಬಂದ ನಂತರ, ವಿಮಾನ ನಿಲ್ದಾಣದ ಸ್ಥಾಪನೆ ಬಗ್ಗೆ ಚರ್ಚಿಸಲಾಗುವುದು ಎಂದು ಭರವಸೆ ನೀಡಿದರು.**

**ಊರ ಗೌರವ ಪುರಸ್ಕಾರ:** ಈ ಸಲದ ಕುಂದಾಪ್ರ ಕನ್ನಡ ಹಬ್ಬದಲ್ಲಿ ಕುಂದಾಪುರ ಮೂಲದ ಸಾಧಕರಾದ ಮಣಿಪಾಲ ಗ್ರೂಪ್ ಆಫ್ ಹಾಸ್ಪಿಟಲ್ಸ್ ಅಧ್ಯಕ್ಷ ಡಾ.ಎಚ್. ಸುದರ್ಶನ ಬಲ್ಲಾಳ್ ಅವರಿಗೆ 'ಊರ ಗೌರವ' ಎಂಬ ವಿಶೇಷ ಪುರಸ್ಕಾರ ನೆರವೇರಿತು. ಕುಂದಾಪುರವು ನನ್ನ ಹೃದಯದಲ್ಲಿ ವಿಶೇಷ ಸ್ಥಾನ ಹೊಂದಿದೆ. ಕುಂದಾಪುರ ಭಾಷೆ ಪ್ರೋತ್ಸಾಹಿಸಿ ಅಂದರೆ ಇನ್ನೊಂದು ಭಾಷೆಯನ್ನು ಕೀಳಾಗಿ ನೋಡಿ ಅಂತ ಅಲ್ಲ, ಬೇರೆ ಭಾಷೆಗಳ ಜೊತೆಗೆ ನಮ್ಮ ಭಾಷೆಗೆ ಹೆಚ್ಚು ಪ್ರೋತ್ಸಾಹ ನೀಡೋಣ ಎಂದು ಡಾ.ಬಲ್ಲಾಳ್ ಹೇಳಿದರು.

ಕುಂದಾಪುರದ ಸಾಹಿತ್ಯ, ಕಲೆ, ಸಂಸ್ಕೃತಿ, ಐಕ್ಯತೆಯನ್ನು ನೋಡಿ ಬಹಳ ಸಂತೋಷವಾಗುತ್ತಿದೆ. ನಾನು ಅನೇಕ ಬಾರಿ ಹೇಳುತ್ತಿರುತ್ತೇನೆ – ನಿಮ್ಮ ಬೇರನ್ನು ಮರೆತರೆ, ಫಲ ಸಿಗುವುದಿಲ್ಲ. ಹಾಗಾಗಿ ನಮ್ಮ ಮೂಲವನ್ನು ಯಾವತ್ತೂ ಮರೆಯಬಾರದು. ಕುಂದಾಪುರದ ನೆಲ, ಭಾಷೆ, ಸಂಸ್ಕೃತಿಯನ್ನು ಉಳಿಸುವ ಪ್ರಯತ್ನ ಕುಂದಾಪ್ರ ಕನ್ನಡ ಹಬ್ಬದ ಮೂಲಕ ನಡೆಯುತ್ತಿದೆ. ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಮೂಲಕ ಐದು ನಗರಪಾಲಿಕೆಗಳಾಗಿ ವಿಂಗಡಿಸಿದಾಗ ಕನ್ನಡಿಗರ ಭೂಮಿಯ ಭಾಗವಾಗುತ್ತಿದೆ, ಅವರು ಅವಕಾಶ ವಂಚಿತರಾಗುತ್ತಿದ್ದಾರೆ ಎಂದು ಹಲವರು ಟೀಕೆ ಮಾಡಿದರು ಎಂದು ಡಿಸಿಎಂ ಡಿಕೆ ಶಿವಕುಮಾರ್ ತಮ್ಮ ಎಕ್ಸ್ ಖಾತೆಯಲ್ಲಿ ಪೋಸ್ಟ್ ಹಂಚಿಕೊಂಡಿದ್ದಾರೆ. ಕರಾವಳಿ ಪ್ರದೇಶದಿಂದ ಜನರು ವಲಸೆ ಹೋಗುವುದನ್ನು ತಡೆಯಲು ಸ್ಥಳೀಯ ಉದ್ಯೋಗಾವಕಾಶಗಳನ್ನು ಸೃಷ್ಟಿಸಬೇಕಿದೆ. ಇಲ್ಲಿನ ಪರಂಪರೆ, ಇತಿಹಾಸವನ್ನು ದೇಶಕ್ಕೆ ಪರಿಚಯಿಸಬೇಕು. ಅದಕ್ಕೆ ನಾವೆಲ್ಲರೂ ಕೈಜೋಡಿಸಬೇಕಿದೆಎಂದರು.

**ಈ ದಿನದ ದರ** ಪೆಟ್ರೋಲ್: 103.50 ₹/L | ಡೀಸೆಲ್ : 90.03 ₹/L | ಬಂಗಾರ: ₹9,993 /Gram(24ct) ₹9,160/Gram(22ct) | ಬೆಳ್ಳಿ: ₹116.00/Gram

# ತಿಂಗಳಿಗೊಮ್ಮೆ ಟ್ಯಾಂಕ್ ಸ್ವಚ್ಛತೆ ಕಡ್ಡಾಯ

## ಚಿಕ್ಕಬಳ್ಳಾಪುರ, ಮಂಚೇನಹಳ್ಳಿ ತಾಲ್ಲೂಕುಗಳಲ್ಲಿ ಜಲಜೀವನ್ ಯೋಜನೆ ಪರಿಶೀಲನೆ

• ಉದಯವಾಹಿನಿ, ಚಿಕ್ಕಬಳ್ಳಾಪುರ

ಗ್ರಾಮೀಣ ಪ್ರದೇಶದಲ್ಲಿ ಜಲ್ ಜೀವನ್ ಮಿಷನ್ ಯೋಜನೆಯಡಿ ನಿರ್ಮಿಸಿರುವ ಓವರ್ ಹೆಡ್ ಟ್ಯಾಂಕ್‌ಗಳನ್ನು ಪ್ರತಿ ತಿಂಗಳಿಗೆ ಒಮ್ಮೆ ಶುಚಿಗೊಳಿಸಬೇಕು. ಶುಚಿಗೊಳಿಸಿರುವ ಬಗ್ಗೆ ಟ್ಯಾಂಕ್ ಮಾಹಿತಿ ಮುದ್ರಿಸಬೇಕು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಡಾ.ನವೀನ್ ಭಟ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಎಂಜಿನಿಯರ್ ಹಾಗೂ ಗುತ್ತಿಗೆದಾರರಿಗೆ ಸೂಚಿಸಿದರು. ಚಿಕ್ಕಬಳ್ಳಾಪುರ, ಮಂಚೇನಹಳ್ಳಿ ತಾಲ್ಲೂಕುಗಳ ವಿವಿಧ ಗ್ರಾಮಗಳಲ್ಲಿ ಜಲಜೀವನ್ ಮಿಷನ್, ನರೇಗಾ ಹಾಗೂ ಸ್ವಚ್ಛ ಭಾರತ್ ಮಿಷನ್ ಗ್ರಾಮೀಣ ಯೋಜನೆಯ ವಿವಿಧ ಕಾಮಗಾರಿಗಳನ್ನು ಪರಿಶೀಲಿಸಿ ಮಾತನಾಡಿದರು.

ಹೊಸದಾಗಿ ನಿರ್ಮಿಸುವ ಟ್ಯಾಂಕ್‌ಗಳ ಕಾಮಗಾರಿ ಗುಣಮಟ್ಟದಿಂದ ಇರಬೇಕು. ಗ್ರಾಮ ಪಂಚಾಯಿತಿಗಳಲ್ಲಿ ಪ್ರತಿ ಮೂರು ತಿಂಗಳಿಗೆ ಒಮ್ಮೆ ಗ್ರಾಮ ನೀರು ಮತ್ತು ನೈರ್ಮಲ್ಯ ಸಮಿತಿಗಳ ಸಭೆ ಕರೆಯಬೇಕು. ಗ್ರಾಮದ ನೀರು ಮತ್ತು ನೈರ್ಮಲ್ಯ ಬಗ್ಗೆ ಚರ್ಚಿಸಿ ಪರಿಹಾರೋಪಾಯಗಳನ್ನು ಕಂಡುಕೊಳ್ಳಬೇಕು ಎಂದು ಸೂಚಿಸಿದರು. ಆ ಮೂಲಕ ಪ್ರತಿ ಕುಟುಂಬಗಳಿಗೆ ಶುದ್ಧ ಕುಡಿಯುವ ನೀರು ಪೂರೈಸಬೇಕು.

ಪ್ರತಿ ಮೂರು ತಿಂಗಳಿಗೆ ಒಮ್ಮೆ ಕಡ್ಡಾಯವಾಗಿ ನೀರು ಪರೀಕ್ಷೆ ಮಾಡಿಸಬೇಕು. ಕೆಟ್ಟು ಹೋಗಿರುವ ಗೇಟ್ ವಾಲ್‌ಗಳನ್ನು ತಕ್ಷಣವೇ ಬದಲಾಯಿಸಬೇಕು. ಇಲ್ಲವೇ ದುರಸ್ತಿಗೊಳಿಸಬೇಕು ಎಂದು ಸೂಚಿಸಿದರು.

ಪೆರೇಸಂದ್ರದ ಡಿಜಿಟಲ್ ಗ್ರಂಥಾಲಯಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಸಿಇಒ, ಅದೇ ಕೇಂದ್ರದಲ್ಲಿ ಮೂಲ ಸೌಲಭ್ಯಗಳನ್ನು ಕಲ್ಪಿಸಬೇಕು. ವಿದ್ಯಾರ್ಥಿಗಳು, ಯುವಕರಿಗೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಅನುಕೂಲ ಆಗುವಂತಹ ಪುಸ್ತಕ ಇರಿಸಬೇಕು ಎಂದು ಪಿಡಿಒಗೆ ಸೂಚಿಸಿದರು.

ಪಟ್ರೇನಹಳ್ಳಿ ಗ್ರಾಮ ಪಂಚಾಯಿತಿಗೆ ಭೇಟಿ ನೀಡಿ ತಾಂಡ್ರಮರದಹಳ್ಳಿ ಗ್ರಾಮದಲ್ಲಿ ಜೆಜೆಎಮ್ ಕಾಮಗಾರಿ ವೀಕ್ಷಿಸಿದರು. ನಂತರ ಶಾಲೆ ಮತ್ತು ಅಂಗನವಾಡಿಗೆ ಭೇಟಿ ನೀಡಿ ಸಲಹೆ ನೀಡಿದರು. ಮಂಚೇನಹಳ್ಳಿ ತಾಲ್ಲೂಕಿನ ಗೌಡಗೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕಾಟನಾಗೇನಹಳ್ಳಿಯಲ್ಲಿ ಸ್ವಚ್ಛ ಭಾರತ್ ಮಿಷನ್ ಯೋಜನೆಯಡಿ ನಿರ್ಮಿಸುತ್ತಿರುವ ಸಮಗ್ರ ಘನತ್ಯಾಜ್ಯ ನಿರ್ವಹಣಾ ಘಟಕ (ಎಂ.ಆರ್.ಎಫ್) ಕಾಮಗಾರಿ ವೀಕ್ಷಿಸಿದರು. ಕಾಮಗಾರಿಯಲ್ಲಿ ಗುಣಮಟ್ಟ ಕಾಯ್ದುಕೊಳ್ಳಬೇಕು. ಯಾವುದೇ ಲೋಪದೋಷಗಳಿಲ್ಲದೆ ಕಾಲಮಿತಿಯೊಳಗೆ ಕಾಮಗಾರಿಯನ್ನು ಪೂರ್ಣಗೊಳಿಸಬೇಕು. ಅ. 2ರ ಗಾಂಧಿ ಜಯಂತಿ ವೇಳೆಗೆ ಸಂಪೂರ್ಣ ಕಾಮಗಾರಿ ಪೂರ್ಣಗೊಳಿಸಿ ಚಾಲನೆಗೆ ಕ್ರಮ ಕೈಗೊಳ್ಳಬೇಕು. ಈ ಬಗ್ಗೆ ಅಧಿಕಾರಿಗಳು ಕಾಲಕಾಲಕ್ಕೆ ಪ್ರಗತಿ ವರದಿ ನೀಡಬೇಕು ಎಂದು ಸೂಚಿಸಿದರು.



ಉದಯವಾಹಿನಿ ಚಿತ್ರ

**ಟ್ಯಾಂಕ್ ಹತ್ತಿ ಸ್ವಚ್ಛತೆ ವೀಕ್ಷಿಸಿದ ಸಿಇಒ**

**ಪೆರೇಸಂದ್ರ ಗ್ರಾಮ ಪಂಚಾಯಿತಿಯ ತಿಪ್ಪಾಪುರ ನಾಗೇನಹಳ್ಳಿಯಲ್ಲಿ ಜಲ್ ಜೀವನ್ ಮಿಷನ್ ಯೋಜನೆಯಡಿ ನಿರ್ಮಿಸಿರುವ ಓವರ್ ಹೆಡ್ ಟ್ಯಾಂಕ್ ಹತ್ತಿದ ಸಿಇಒ ಟ್ಯಾಂಕ್ ಗುಣಮಟ್ಟ ಹಾಗೂ ಶುಚಿತ್ವದ ಬಗ್ಗೆ ಪರಿಶೀಲಿಸಿದರು.**

**ಕಪ್ಪುಪಟ್ಟಿಗೆ ಗುತ್ತಿಗೆದಾರ**

**ಪೆರೇಸಂದ್ರ ಗ್ರಾಮದಲ್ಲಿ ಜಲ್ ಜೀವನ್ ಮಿಷನ್ ಯೋಜನೆಯ ಕಾಮಗಾರಿ ವಿಳಂಬವಾಗಿದೆ. ಇದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದೆ. ಕಾಮಗಾರಿ ಕೈಗೊಂಡಿರುವ ಗುತ್ತಿಗೆದಾರರನ್ನು ಕಪ್ಪುಪಟ್ಟಿಗೆ ಸೇರಿಸಬೇಕು ಎಂದು ಕಾರ್ಯಪಾಲಕ ಎಂಜಿನಿಯರ್‌ಗೆ ಸಿಇಒ ಆದೇಶಿಸಿದರು.**

# ಶಾಲಾ ವಾಹನ ಚಾಲಕರಿಗೆ ಷರತ್ತು



ಉದಯವಾಹಿನಿ ಚಿತ್ರ

• ಉದಯವಾಹಿನಿ, ರಾಮನಗರ

ಬೆಂಗಳೂರು ದಕ್ಷಿಣ ಜಿಲ್ಲೆ ಪ್ರಾದೇಶಿಕ ಸಾರಿಗೆ ಪ್ರಾಧಿಕಾರ ಶಾಲಾ ವಾಹನಗಳಲ್ಲಿ ಮಕ್ಕಳನ್ನು ಕರೆದುಕೊಂಡು ಹೋಗುವ ಕುರಿತು ಕೈಗೊಳ್ಳಬೇಕಾದ ಕ್ರಮಗಳ ಕುರಿತಂತೆ ಷರತ್ತುಗಳನ್ನು ವಿಧಿಸಲಾಗಿದೆ. ಶೈಕ್ಷಣಿಕ ಸಂಸ್ಥೆ, ಶಾಲಾ ವಾಹನಗಳಲ್ಲಿ ಶಾಲಾ ಮಕ್ಕಳು ಹಾಗೂ ವಿದ್ಯಾರ್ಥಿಗಳನ್ನು ಕರೆದೊಯ್ಯುವಾಗ ವಾಹನದ ಜೊತೆಯಲ್ಲಿ ಒಬ್ಬ ಅಟೆಂಡರ್ ಸಹಾಯಕನನ್ನು ಹೊಂದಿರಬೇಕು. ಸಾರಿಗೆ ಪ್ರಾಧಿಕಾರ ರಹದಾರಿ ಪರವಾನಗಿ ಪತ್ರದಲ್ಲಿ ನಿಗದಿಪಡಿಸಿರುವ ನಿಬಂಧನೆ, ಷರತ್ತುಗಳನ್ನು ಚಾಲಕರು, ಮಾಲೀಕರು ಹೊಂದಿರಬೇಕು. ಉಲ್ಲಂಘನೆ ಮಾಡಿದ್ದಲ್ಲಿ ಸಂಬಂಧಪಟ್ಟ ವಾಹನದ ರಹದಾರಿ ಬಗ್ಗೆ ಇಲಾಖಾ ಶಾಸನ ಕ್ರಮಗಳನ್ನು ಜರುಗಿಸಲಾಗುವುದು ಹಾಗೂ ಇದಕ್ಕೆ ಸಂಬಂಧಪಟ್ಟ ಶಾಲಾ, ಕಾಲೇಜುಗಳ ಹಾಗೂ ಶೈಕ್ಷಣಿಕ ಸಂಸ್ಥೆಗಳ ಮುಖ್ಯಸ್ಥರು ಜವಾಬ್ದಾರರಾಗಿರುತ್ತಾರೆ. ವಾಹನದ ಚಾಲಕರು ಅಸುರಕ್ಷಿತ ರೀತಿಯಲ್ಲಿ ಚಾಲನೆ ಮಾಡಿದ್ದಲ್ಲಿ ಚಾಲನಾ ಅನುಜ್ಞಾ ಪತ್ರ ವಶಪಡಿಸಿಕೊಂಡು ಕಾನೂನು ರೀತಿಯಲ್ಲಿ ಅಮಾನತು ಮಾಡಲಾಗುವುದು.

ವಾಹನಗಳಿಗೆ ಸಂಬಂಧಿಸಿದ ದಾಖಲೆಗಳಾದ ನೋಂದಣಿ ಪ್ರಮಾಣ ಪತ್ರ, ಅರ್ಹತಾ ಪತ್ರ, ತೆರಿಗೆ ಪಾವತಿ ಹಾಗೂ ವಾಯುಮಾಲಿನ್ಯ ನಿಯಂತ್ರಣ ಪ್ರಮಾಣ ಪತ್ರ, ಚಾಲ್ತಿಯಲ್ಲಿರಬೇಕು. ವಾಹನದ ಚಾಲಕನ ಜತೆಯಲ್ಲಿ ಒಂದು ಜೆರಾಕ್ಸ್ ಪ್ರತಿ ಹೊಂದಿರಬೇಕು. ತಪ್ಪಿದಲ್ಲಿ ಹಿರಿಯ ಮೋಟಾರು ವಾಹನ ನಿರೀಕ್ಷಕರು ಸಂಬಂಧಪಟ್ಟಂತೆ ತನಿಖಾ ವರದಿ ಪ್ರಕರಣ ದಾಖಲಿಸಲಾಗುವುದು. ಈ ಎಲ್ಲಾ ದಾಖಲೆ ಹೊಂದಿಲ್ಲದ ಪಕ್ಷದಲ್ಲಿ ವಾಹನ ಮುಟ್ಟುಗೋಲು ಹಾಕಿಕೊಳ್ಳಲಾಗುವುದು ಎಂದು ಬೆಂಗಳೂರು ದಕ್ಷಿಣ ಜಿಲ್ಲೆ ಪ್ರಾದೇಶಿಕ ಸಾರಿಗೆ ಅಧಿಕಾರಿ ಕೃಷ್ಣಗೌಡ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.




## ಮಿನಿ ನ್ಯೂಸ್

### ಜಮೀನಿಗಾಗಿ ಮಾಜಿ ಸೈನಿಕ ನಿರಶನ

• ಉದಯವಾಹಿನಿ, ಚಿಂತಾಮಣಿ

ದೇಶದಾದ್ಯಂತ ಕಾರ್ಗಿಲ್ ವಿಜಯೋತ್ಸವ ನಡೆಯುತ್ತಿದ್ದರೆ, ಅಂಬಾಜಿದುರ್ಗ ಹೋಬಳಿಯ ರಾಯಪಲ್ಲಿ ಗ್ರಾಮದ ಮಾಜಿ ಸೈನಿಕ ಶಿವಾನಂದರೆಡ್ಡಿ ಅವರು ಜಮೀನು ಮಂಜೂರಾತಿಗಾಗಿ ತಾಲ್ಲೂಕು ಕಚೇರಿ ಆವರಣದಲ್ಲಿ ಶನಿವಾರದಿಂದ ತಮ್ಮ ಕುಟುಂಬ ಸಹಿತವಾಗಿ ಉಪವಾಸ ಸತ್ಯಾಗ್ರಹ ಕುಳಿತಿದ್ದಾರೆ.



ಶಿವಾನಂದರೆಡ್ಡಿ ಸುಮಾರು ವರ್ಷಗಳ ಕಾಲ ಸೇವೆ ಸಲ್ಲಿಸಿದ್ದು, ಗಡಿಭಾಗದಲ್ಲಿ ನಡೆದ ಅಪರೇಷನ್‌ನಲ್ಲಿ ಕಾಲಿಗೆ ತೀವ್ರವಾಗಿ ಪೆಟ್ಟಾಗಿದ್ದರಿಂದಾಗಿ ಸೇನೆಯಿಂದ ಕಡ್ಡಾಯ ನಿವೃತ್ತಿ ಪಡೆದಿದ್ದರು. ಯೋಧರಿಗೆ ಜಮೀನು ಮಂಜೂರು ಮಾಡುವಂತೆ ಸೈನ್ಯದ ಅಧಿಕಾರಿಗಳು ರಾಜ್ಯ ಸರ್ಕಾರಕ್ಕೆ ಪತ್ರ ಬರೆದಿದ್ದರು. ಆದರೆ, 'ಇದಾಗಿ ಎರಡೂವರೆ ದಶಕ ಕಳೆದರೂ, ಅವರಿಗೆ ಇನ್ನೂ ಜಮೀನು ಮಂಜೂರಾಗಿಲ್ಲ. 'ಇದು ನಮ್ಮ ದೇಶದಲ್ಲಿ ಮಾಜಿ ಯೋಧರಿಗೆ ಸರ್ಕಾರ ನೀಡಿದ ಗೌರವ' ಎಂದು ಮಾಜಿ ಯೋಧ ಶಿವಾನಂದರೆಡ್ಡಿ ಅಸಮಾಧಾನ ವ್ಯಕ್ತಪಡಿಸಿದರು. ಜಮೀನಿಗಾಗಿ 26 ವರ್ಷಗಳಿಂದ ಹೋರಾಟ ನಡೆಸುತ್ತಿದ್ದೇನೆ. ಮುಖ್ಯಮಂತ್ರಿ, ಸಚಿವರು, ಜಿಲ್ಲಾಧಿಕಾರಿ ಮತ್ತು ಸ್ಥಳೀಯ ಅಧಿಕಾರಿಗಳ ಗಮನಕ್ಕೂ ತಂದಿದ್ದೆ. ಪ್ರಯೋಜನವಾಗಿಲ್ಲ. ಹೀಗಾಗಿ, ಉಪವಾಸ ಸತ್ಯಾಗ್ರಹ ಕುಳಿತಿದ್ದೇನೆ. ಜಮೀನು ಮಂಜೂರಾತಿಗಾಗಿ ಲಂಚಕ್ಕೆ ಬೇಡಿಕೆ ಇಟ್ಟಿದ್ದ ಅಧಿಕಾರಿಗಳನ್ನು ಲೋಕಾಯುಕ್ತರಿಗೆ ಹಿಡಿದು ಕೊಟ್ಟಿದ್ದೇನೆ' ಎಂದು ಹೇಳಿದರು.

# ರಸ್ತೆಗಾಗಿ ಬೀದಿಗಿಳಿದ ಮುಷ್ಟೂರು ಜನರು


• ಉದಯವಾಹಿನಿ, ಚಿಕ್ಕಬಳ್ಳಾಪುರ

ಭೂಮಿ ಪೂಜೆ ನೆರವೇರಿಸಿ ನಾಲ್ಕು ತಿಂಗಳಾದರೂ ಕಾಮಗಾರಿ ಆರಂಭವಾಗಿಲ್ಲ. ಗುತ್ತಿಗೆದಾರ ರಸ್ತೆಯನ್ನು ಕಿತ್ತಿರುವುದರಿಂದ ತೀರಾ ಅಧ್ವಾನವಾಗಿದೆ. ತಕ್ಷಣವೇ ರಸ್ತೆ ಕಾಮಗಾರಿ ಆರಂಭಿಸಬೇಕು ಎಂದು ಆಗ್ರಹಿಸಿ ಮುಷ್ಟೂರು ಗ್ರಾಮಸ್ಥರು ಶನಿವಾರ ಪ್ರತಿಭಟಿಸಿದರು. ನಗರ ಹೊರವಲಯದ ಮುಷ್ಟೂರಿನ ನಡು ರಸ್ತೆಯಲ್ಲಿಯೇ ಕುಳಿತ ಗ್ರಾಮಸ್ಥರು ರಸ್ತೆ ನಿರ್ಮಾಣಕ್ಕೆ ಆಗ್ರಹಿಸಿದರು. ವಾಹನಗಳನ್ನು ತಡೆದರು.

ಮುಷ್ಟೂರು ರಸ್ತೆ ಅಭಿವೃದ್ಧಿಗೆ ಮಾರ್ಚ್‌ನಲ್ಲಿ ಶಾಸಕ ಪ್ರದೀಪ್ ಈಶ್ವರ್ ಭೂಮಿ ಪೂಜೆ ನೆರವೇರಿಸಿದ್ದರು. ತಿಂಗಳ ಹಿಂದೆ ಗುತ್ತಿಗೆದಾರ ರಸ್ತೆಯನ್ನು ಪೂರ್ಣವಾಗಿ ಕಿತ್ತಿದ್ದಾರೆ. ಆ ನಂತರ ಯಾವುದೇ ಬೆಳವಣಿಗೆಗಳೂ ನಡೆದಿಲ್ಲ. ಇದು ಗ್ರಾಮಸ್ಥರಲ್ಲಿ ತೀವ್ರ ಆಕ್ರೋಶಕ್ಕೆ ಕಾರಣವಾಗಿದೆ.

ಮುಖಂಡ ಜಿ.ಎಂ.ಶ್ರೀಧರ್ ಮಾತನಾಡಿ, ಗ್ರಾಮಕ್ಕೆ ರಸ್ತೆ ಕಲ್ಪಿಸುವಂತೆ ಐದಾರು ವರ್ಷಗಳಿಂದ ನಿರಂತವಾಗಿ ಹೋರಾಟ ನಡೆಸಿದ್ದೇವೆ. ರೂ. 3 ಕೋಟಿ ವೆಚ್ಚದಲ್ಲಿ ರಸ್ತೆ ಅಭಿವೃದ್ಧಿ ಪಡಿಸಲು ಶಾಸಕ ಭೂಮಿ ಪೂಜೆ ಸಹ ನಡೆಸಿದ್ದಾರೆ. ತಿಂಗಳ ಹಿಂದೆ ಗುತ್ತಿಗೆದಾರರು ರಸ್ತೆ ಸಹ ಕಿತ್ತಿದ್ದಾರೆ. ರಸ್ತೆ ಕಿತ್ತ ನಂತರ ಗುತ್ತಿಗೆದಾರ ಇತ್ತ ಕಡೆ ಬಂದಿಲ್ಲ' ಎಂದು ಆಕ್ರೋಶ ವ್ಯಕ್ತಪಡಿಸಿದರು. ಮೊಣಕಾಲುದ್ದದ ಗುಂಡಿಗಳು ರಸ್ತೆಯಲ್ಲಿ ಇವೆ. ಕೇತೇನಹಳ್ಳಿ, ಮುನ್ನೂರು ಸೇರಿದಂತೆ ಸುಮಾರು 15ಕ್ಕೂ ಹೆಚ್ಚು ಗ್ರಾಮಗಳ ಜನರು ಇದೇ ರಸ್ತೆಯಲ್ಲಿ ಸಂಚರಿಸುವರು.

ರೈತರು ತಮ್ಮ ಉತ್ಪನ್ನಗಳನ್ನು ಮಾರುಕಟ್ಟೆಗೆ ಸಾಗಿಸಲು ಸಹ ಇದೇ ರಸ್ತೆ ಬಳಸುವರು. ಗುಂಡಿಗಳ ಕಾರಣಕ್ಕೆ ಅಪಘಾತ ನಡೆದು ಒಬ್ಬ ಯುವಕ ಮೃತಪಟ್ಟಿದ್ದಾನೆ ಎಂದು ಹೇಳಿದರು. ಈಶಾ ಯೋಗ ಕೇಂದ್ರಕ್ಕೆ ಇದೇ ರಸ್ತೆ ಮೂಲಕ ವಾಹನಗಳು ತೆರಳುತ್ತವೆ. ರಾತ್ರಿ 1 ಗಂಟೆವರೆಗೂ ವಾಹನಗಳ ಓಡಾಟದಿಂದ ದೂಳು ಏಳುತ್ತಿದೆ. ಜನರ ಆರೋಗ್ಯದ ಮೇಲೆ ಪರಿಣಾಮ ಬೀರುತ್ತಿದೆ. ಟಿಪ್ಪರ್ ಲಾರಿಗಳ ಓಡಾಟದಿಂದ ರಸ್ತೆ ಹಾಳಾಗುತ್ತಿದೆ ಎಂದರು.



ಉದಯವಾಹಿನಿ ಚಿತ್ರ

**ರಸ್ತೆ ಅಭಿವೃದ್ಧಿಗೆ ಡಾ.ಕೆ. ಸುಧಾಕರ್ ರೂ. 5.50 ಕೋಟಿ ಅನುದಾನ ನೀಡಿದ್ದರು. ಕಾಮಗಾರಿ ಆರಂಭವಾಗುವಷ್ಟರಲ್ಲಿ ಅವರು ಸೋಲು ಅನುಭವಿಸಿದರು. ಈಗ ಶಾಸಕ ಪ್ರದೀಪ್ ಈಶ್ವರ್ ರಸ್ತೆ ಅಭಿವೃದ್ಧಿಗೆ ಭೂಮಿ ಪೂಜೆ ನೆರವೇರಿಸಿ ನಾಲ್ಕು ತಿಂಗಳಾಗಿದೆ. ರೂ. 3 ಕೋಟಿ ವಿಶೇಷ ಅನುದಾನ ಸಹ ನೀಡಿದ್ದೇನೆ ಎಂದಿದ್ದಾರೆ ಎಂದರು. ಕೆಲಸ ಏಕೆ ಮಾಡುತ್ತಿಲ್ಲ, ಶಾಸಕರಿಂದ ಅಥವಾ ಅಧಿಕಾರಿಗಳಿಂದ ಸಮಸ್ಯೆ ಆಗಿದೆಯಾ ಯಾರು ಹೊಣೆ ಎನ್ನುವ ಬಗ್ಗೆ ಗುತ್ತಿಗೆದಾರರು ತಿಳಿಸಬೇಕು. ಸಮಸ್ಯೆ ಸರಿಪಡಿಸಬೇಕು. ಇಲ್ಲದಿದ್ದರೆ ಹೋರಾಟ ತೀವ್ರಗೊಳಿಸುತ್ತೇವೆ ಎಂದು ಎಚ್ಚರಿಸಿದರು.**

**ಗ್ರಾಮ ಪಂಚಾಯಿತಿ ಅಧ್ಯಕ್ಷ ಶಶಿಕುಮಾರ್**

ಸಮಸ್ಯೆ ಬಗ್ಗೆ ಎರಡು ತಿಂಗಳ ಹಿಂದೆ ಶಾಸಕರ ಗಮನಕ್ಕೆ ತಂದೆವು. ಶಾಸಕರಿಗೆ ಕಳಂಕ ತರಬೇಕು ಎನ್ನುವ ಉದ್ದೇಶದಿಂದ ಗುತ್ತಿಗೆದಾರ ಕೆಲಸ ಮಾಡುತ್ತಿಲ್ಲ. ಈ ಹಿಂದೆ ರಸ್ತೆಯಲ್ಲಿ ಅಲ್ಪಸ್ವಲ್ಪವಾದರೂ ಸಂಚರಿಸಬಹುದಿತ್ತು. ಆದರೆ ಈಗ ತೀರಾ ಅಧ್ವಾನವಾಗಿದೆ ಎಂದರು.

# ಡಿ ದರ್ಜೆ ನೌಕರನ ವಿರುದ್ಧ ಶಿಸ್ತು ಕ್ರಮಕ್ಕೆ ಆದೇಶ

• ಉದಯವಾಹಿನಿ, ಚಿಕ್ಕನಾಯಕನಹಳ್ಳಿ

**ನಕಲಿ ಮರಣ ಪ್ರಮಾಣ ಪತ್ರ**

ತಾಲ್ಲೂಕಿನಲ್ಲಿ ಗ್ರೇಡ್ -2 ತಹಶೀಲ್ದಾರ್ ಸಹಿ ನಕಲು ಮಾಡಿ ನಕಲಿ ಮರಣ ಪ್ರಮಾಣ ಪತ್ರ ನೀಡಿದ ಆರೋಪದಲ್ಲಿ 'ಡಿ' ದರ್ಜೆ ನೌಕರ ಶಿವಕುಮಾರ್ ವಿರುದ್ಧ ಶಿಸ್ತುಕ್ರಮ ಕೈಗೊಳ್ಳಲು ಜಿಲ್ಲಾಧಿಕಾರಿ ಶುಭಾ ಕಲ್ಯಾಣ್ ಆದೇಶಿಸಿದ್ದಾರೆ. ಲಂಚಮುಕ್ತ ವೇದಿಕೆಯ ವಾಟ್ಸ್‌ಆ್ಯಪ್ ಗ್ರೂಪಿನಲ್ಲಿ ಚಿಕ್ಕನಾಯಕನಹಳ್ಳಿ ತಾಲ್ಲೂಕು ಕಚೇರಿಯಲ್ಲಿ ನೀಡಿರುವ ಪ್ರಮಾಣ ಪತ್ರ ನಕಲು ಎಂದು ಆರೋಪ ಮಾಡಿತ್ತು. ಈ ಸಂಬಂಧ ಏಪ್ರಿಲ್ 22ರಂದು ತಹಶೀಲ್ದಾರ್‌ಗೆ ಪರಿಶೀಲನೆ ನಡೆಸುವಂತೆ ಜಿಲ್ಲಾಧಿಕಾರಿ ಸೂಚಿಸಿದ್ದರು. ಹುಳಿಯಾರು ಹೋಬಳಿ ತಮ್ಮಡಿಹಳ್ಳಿ ಮತ್ತು ಗೊಲ್ಲರಟ್ಟಿ ಗ್ರಾಮಗಳಿಂದ ಮರಣ ಪ್ರಮಾಣ ಪತ್ರಗಳನ್ನು ಪಡೆದುಕೊಂಡಿದ್ದ ರಾಜಯ್ಯ ಹಾಗೂ ಬಸವರಾಜು ಅವರನ್ನು ಕಚೇರಿಗೆ ಕರೆಯಿಸಿ ಗ್ರೇಡ್ 1 ತಹಶೀಲ್ದಾರ್, ಗ್ರೇಡ್–2 ಹಾಗೂ ಶಿರಸ್ತೇದಾರ ಅವರ ಸಮ್ಮುಖದಲ್ಲಿ ವಿಡಿಯೋ ಸಹಿತ ಹೇಳಿಕೆ ಪಡೆದುಕೊಳ್ಳಲಾಯಿತು.

ತಾಲ್ಲೂಕು ಡಿ.ದರ್ಜೆ ನೌಕರ ಶಿವಕುಮಾರ್ ನಕಲಿ ಮರಣ ದೃಢೀಕರಣ ಪತ್ರಕ್ಕೆ ರೂ.2,000 ಲಂಚ ಪಡೆದಿದ್ದಲ್ಲದೆ, ಗ್ರೇಡ್–2 ತಹಶೀಲ್ದಾರ್ ಸಹಿ ನಕಲು ಮಾಡಿರುವುದು ಸಾಬೀತಾಗಿದೆ. ಈ ಸಂಬಂಧ ನೌಕರನ ವಿರುದ್ಧ ಶಿಸ್ತು ಕ್ರಮ ಕೈಗೊಂಡು ಇಲಾಖಾ ವಿಚಾರಣೆ ಕಾಯ್ದಿರಿಸಿ ಸೇವೆಯಿಂದ ಅಮಾನತುಗೊಳಿಸಲು ಜಿಲ್ಲಾಧಿಕಾರಿ ಆದೇಶಿಸಿದ್ದಾರೆ.

# ಕೇಂದ್ರದ ಗಣತಿಗೆ ಕೈ ಜೋಡಿಸಿ: ಎನ್.ರವಿಕುಮಾರ್

• ಉದಯವಾಹಿನಿ, ಮೈಸೂರು

'ಹಿಂದುಳಿದ ವರ್ಗಗಳಿಗೆ ಎಲ್ಲಾ ಕ್ಷೇತ್ರಗಳಲ್ಲಿಯೂ ನ್ಯಾಯ ಸಿಗಬೇಕಾದರೆ ಕೇಂದ್ರ ಸರ್ಕಾರವು ವ್ಯವಸ್ಥಿತ ಮತ್ತು ವೈಜ್ಞಾನಿಕವಾಗಿ ನಡೆಸುವ ಜಾತಿ, ಜನ ಗಣತಿಗೆ ರಾಜ್ಯ ಸರ್ಕಾರವು ಕೈ ಜೋಡಿಸಬೇಕು ಎಂದು ವಿಧಾನಪರಿಷತ್ ಸದಸ್ಯ ಎನ್.ರವಿಕುಮಾರ್ ಹೇಳಿದರು. ನಗರದಲ್ಲಿ ಶನಿವಾರ ಸಾಮಾಜಿಕ ನ್ಯಾಯ ಜಾಗೃತಿ ವೇದಿಕೆಯು ಆಯೋಜಿಸಿದ್ದ 'ಜಾತಿ ಜನ ಗಣತಿ ಹಿನ್ನೆಲೆ–ಮುನ್ನೆಲೆ' ವಿಚಾರಗೋಷ್ಠಿಯಲ್ಲಿ ಅವರು ಮಾತನಾಡಿದರು.

ಕೇಂದ್ರ ಸರ್ಕಾರ ನಡೆಸಲಿರುವ ಜಾತಿ, ಜನಗಣತಿಗೆ ಕಾನೂನಾತ್ಮಕವಾಗಿ ಸಂವಿಧಾನದ ಮನ್ನಣೆ ಇದೆ. ದೇಶದಲ್ಲಿ 1931ರಿಂದ ಇದುವರೆವಿಗೂ ಜಾತಿ ಗಣತಿಯಾಗಿಲ್ಲ. ಈಗ ಪ್ರಧಾನಿ ನರೇಂದ್ರ ಮೋದಿ ಗಣತಿಯ ಐತಿಹಾಸಿಕ ನಿರ್ಧಾರ ಕೈಗೊಂಡಿದ್ದಾರೆ. ಇದಕ್ಕೆ ನಾಡಿನ ಜನತೆ ಬೆಂಬಲಿಸಬೇಕಿದೆ' ಎಂದರು. 'ರಾಜ್ಯದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಜಾತಿ ಗಣತಿ ನಡೆಸುವ ನೆಪದಲ್ಲಿ ಜನರ 165 ಕೋಟಿ ತೆರಿಗೆ ಹಣವನ್ನು ಪೋಲು ಮಾಡಿದ್ದಾರೆ. ಈಗಾಗಲೇ ಸಿದ್ದಗೊಂಡ ಕಾಂತರಾಜು ಆಯೋಗದ ವರದಿಯನ್ನು ಮೂಲೆ ಗುಂಪು ಮಾಡಿ ಮತ್ತೆ ಜಾತಿವಾರು ಗಣತಿಯನ್ನು ಒಂದು ತಿಂಗಳಲ್ಲಿ ನಡೆಸುವುದಾಗಿ ಹೇಳಿದ್ದಾರೆ. ಅದು ಅಸಾಧ್ಯದ ಮಾತಾಗಿದೆ' ಎಂದು ಟೀಕಿಸಿದರು. 'ಕೇಂದ್ರ ಸರ್ಕಾರವು ವೈಜ್ಞಾನಿಕವಾಗಿ ನಡೆಸುವ ಸಮೀಕ್ಷೆಯಿಂದ ಹಿಂದುಳಿದ ವರ್ಗದವರು ಎಷ್ಟು ಸಂಖ್ಯೆಯಲ್ಲಿ ಇದ್ದಾರೆ. ಅವರ ಆರ್ಥಿಕ ಸ್ಥಿತಿಗತಿ ಏನು ಎಂಬ ನಿಖರ ಮಾಹಿತಿ ಸಿಗುತ್ತದೆ. ಇದರ ಮೂಲಕ ಅಂತಹ ಸಮುದಾಯಗಳ ಅಭಿವೃದ್ಧಿಗೆ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ತಜ್ಞರ ಸಮಿತಿ ನೇಮಿಸಿ ಸಮಿತಿ ನೀಡುವ ಯೋಜನೆ ಮತ್ತು ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವ ಮೂಲಕ ಹಿಂದುಳಿದ ವರ್ಗಗಳ ಅಭಿವೃದ್ಧ ಮಾಡಬಹುದಾಗಿದೆ ಎಂದು ಹೇಳಿದರು.

ವಿಧಾನ ಪರಿಷತ್ ಸದಸ್ಯ ಎ.ಎಚ್.ವಿಶ್ವನಾಥ್, ಹಿಂದುಳಿದ ಜಾತಿಗಳ ಹೆಸರೇಗೊತ್ತಿಲ್ಲದ ಸಿದ್ದರಾಮಯ್ಯ ಅವರೇ ಹಿಂದುಳಿದ ವರ್ಗದ ನಾಯಕರಾಗಿದ್ದಾರೆ ಎಂದು ಲೇವಡಿ ಮಾಡಿದರು.

ರಾಜ್ಯ ಸರ್ಕಾರ ಈಗಾಗಲೇ ಜಾತಿ ಗಣತಿ ನಡೆಸಿ ಅನುಷ್ಠಾನಗೊಳಿಸದೇ ಜನರ ತೆರಿಗೆ ಹಣವನ್ನು ವ್ಯರ್ಥ ಮಾಡಿದೆ. ಈಗ ಜನರ ಕಲ್ಯಾಣಕ್ಕಾಗಿ ಕೇಂದ್ರ ಸರ್ಕಾರವು ನಡೆಸುತ್ತಿರುವ ಜಾತಿ ಮತ್ತು ಜನ ಗಣತಿಯ ಬಗ್ಗೆ ಜನ ಸಾಮಾನ್ಯರಿಗೆ ಸ್ಪಷ್ಟವಾಗಿ ತಿಳಿಸುವ ಕಾರ್ಯ ನಡೆಯಬೇಕಿದೆ. ಹಿಂದುಳಿದವರ ಮನೆ ತಲುಪಬೇಕಿದೆ' ಎಂದು ಸಲಹೆ ನೀಡಿದರು.




ಉದಯವಾಹಿನಿ ಚಿತ್ರ

### ಮಾನಹಾನಿ ಪ್ರಕರಣ: 3.20 ಲಕ್ಷ

• ಉದಯವಾಹಿನಿ, ಹಾರೋಹಳ್ಳಿ

ಹಾರೋಹಳ್ಳಿ ಠಾಣೆ ವ್ಯಾಪ್ತಿಯಲ್ಲಿ 2017ರಲ್ಲಿ ದಾಖಲಾಗಿದ್ದ ದೂರಿಗೆ ಸಂಬಂಧಿಸಿದ್ದಂತೆ ರೂ.3.20ಲಕ್ಷ ಮಾನಹಾನಿ ಪರಿಹಾರವಾಗಿ ನೀಡುವಂತೆ ಕನಕಪುರದ 2ನೇ ಹೆಚ್ಚುವರಿ ಸಿವಿಲ್ ನ್ಯಾಯಾಲಯ ಆದೇಶ ನೀಡಿದೆ.ತಾಲ್ಲೂಕಿನ ತಟ್ಟೆಕೆರೆ ಗ್ರಾಮದ ಶಿವಶಂಕರ್ ಮತ್ತು ಮಹದೇವಯ್ಯ ಎಂಬುವವರು ಮೇಲೆ ಅದೇ ಗ್ರಾಮದ ವ್ಯಕ್ತಿಯೊಬ್ಬರು ಚಾಕು ತೋರಿಸಿ ಹಣ ಕಿತ್ತುಕೊಂಡು ಹೋಗಿರುವುದಾಗಿ ದೂರು ನೀಡಿದ್ದರು. ಶಿವಶಂಕರ್, ಮಹದೇವಯ್ಯ ನ್ಯಾಯಾಯಲದ ಮೊರೆ ಹೋಗಿದ್ದರು. ಯಾವುದೇ ತಪ್ಪು ಮಾಡದಿದ್ದರೂ ಇಲ್ಲಸಲ್ಲದ ಅಪಪ್ರಚಾರ ಮಾಡಲಾಯಿತು. ನ್ಯಾಯಾಲಯದ ಮೇಲೆ ನಂಬಿಕೆ ಇದ್ದು, ನ್ಯಾಯಾಲಯವು ವ್ಯಕ್ತಿ ಘನತೆಯನ್ನು ಎತ್ತಿ ಹಿಡಿದಿದೆ ಎಂದು ಶಿವಶಂಕರ್ ಹಾಗೂ ಮಹದೇವಯ್ಯ ಸುದ್ದಿಗೋಷ್ಠಿಯಲ್ಲಿ ಹೇಳಿದರು. ತಟ್ಟೆಕೆರೆ ಗ್ರಾಮಸ್ಥರು ಹಾಜರಿದ್ದರು.

### ಮಾರಕಾಸ್ತ್ರಗಳಿಂದ ಕೊಚ್ಚಿ ಗ್ರಾಮ ಪಂ ಮಾಜಿ ಅಧ್ಯಕ್ಷನ ಕೊಲೆ

• ಉದಯವಾಹಿನಿ, ಕನಕಪುರ

ಜಮೀನು ವಿವಾದದ ಹಿನ್ನೆಲೆಯಲ್ಲಿ ತಾಲ್ಲೂಕಿನ ಸಾತನೂರು ಹೋಬಳಿಯ ಅಚ್ಚಲು ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷರೊಬ್ಬರನ್ನು ರಾತ್ರಿ ಮಾರಕಾಸ್ತ್ರಗಳಿದ ಹೊಡೆದು ಕೊಲೆ ಮಾಡಲಾಗಿದೆ.ಹೊಂಗಾಣಿದೊಡ್ಡಿ ಗ್ರಾಮದ ನಂಜೇಶ್ (45) ಕೊಲೆಯಾದವರು. ಸಾತನೂರಿನ ಡಾಬಾದಲ್ಲಿ ನಂಜೇಶ್ ಅವರು ರಾತ್ರಿ ಸ್ನೇಹಿತರೊಂದಿಗೆ ಮದ್ಯದ ಪಾರ್ಟಿಯಲ್ಲಿದ್ದರು. ಈ ವೇಳೆ ಮಾರಕಾಸ್ತ್ರಗಳೊಂದಿಗೆ ಏಕಾಏಕಿ ನುಗ್ಗಿದ ನಾಲ್ಕೈದು ಮಂದಿ ಮನಬಂದಂತೆ ನಂಜೇಶ್ ಅವರನ್ನು ಹೊಡೆದು ಪರಾರಿಯಾದರು. ಹಲ್ಲೆಯ ತೀವ್ರತೆಗೆ ನಂಜೇಶ್ ಸ್ಥಳದಲ್ಲೇ ಕೊನೆಯುಸಿರೆಳೆದರು. ಘಟನೆ ಕುರಿತು ಪ್ರಕರಣ ದಾಖಲಿಸಿಕೊಂಡು ಹಂತಕರ ಬಂಧನಕ್ಕೆ ಕ್ರಮ ಕೈಗೊಳ್ಳಲಾಗಿದೆ ಎಂದು ಸಾತನೂರು ಠಾಣೆ ಪೊಲೀಸರು ತಿಳಿಸಿದರು.

# ರೂ.2,500 ಕೋಟಿಯಲ್ಲಿ 500 ಪಬ್ಲಿಕ್ ಶಾಲೆ ನಿರ್ಮಾಣ

• ಉದಯವಾಹಿನಿ, ಮಾಲೂರು

ರಾಜ್ಯದಲ್ಲಿ ರೂ 2,500 ಕೋಟಿ ವೆಚ್ಚದಲ್ಲಿ 500 ಸುಸಜ್ಜಿತ ಕರ್ನಾಟಕ ಪಬ್ಲಿಕ್ ಶಾಲೆಗಳನ್ನು (ಕೆಪಿಎಸ್) ಸರ್ಕಾರದಿಂದ ನಿರ್ಮಿಸಲಾಗುವುದು ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಮಧು ಬಂಗಾರಪ್ಪ ತಿಳಿಸಿದರು. ದಾನಿ ಜನಾರ್ದನ್ ಠಕ್ಕರ್ ನೀಡಿರುವ ರೂ 8 ಕೋಟಿ ಆರ್ಥಿಕ ಸಹಾಯದಿಂದ ಒಸಾಟ್ ಸಂಸ್ಥೆಯ ನೇತೃತ್ವದಲ್ಲಿ ತಾಲ್ಲೂಕಿನ ಮಾಸ್ತಿಯಲ್ಲಿ ಮರು ನಿರ್ಮಾಣ ಮಾಡಲಾಗಿರುವ ಕರ್ನಾಟಕ ಪಬ್ಲಿಕ್ ಶಾಲೆಯ ಹೈಟೆಕ್ ಕಟ್ಟಡವನ್ನು ಉದ್ಘಾಟಿಸಿ ಅವರು ಮಾತನಾಡಿದರು.

'ಮಾಸ್ತಿ ಶಾಲೆಯ ಮಾದರಿಯಲ್ಲೇ ಹೈಟೆಕ್ ಶಾಲೆಗಳನ್ನು ನಿರ್ಮಾಣ ಮಾಡಲಿದ್ದೇವೆ. ಸಕಲ ಸೌಲಭ್ಯ ಒದಗಿಸಲಿದ್ದೇವೆ. ವಿದ್ಯಾರ್ಥಿಗಳು ಚೆನ್ನಾಗಿ ಓದಬೇಕು ಎಂಬುದಷ್ಟೇ ನಮ್ಮ ಬೇಡಿಕೆ' ಎಂದರು. ದೇವಾಲಯದ ಗಂಟೆ ಹೊಡೆದರೆ ಪ್ರಸಾದ ಸಿಗುತ್ತದೋ ಇಲ್ಲವೋ ಗೊತ್ತಿಲ್ಲ. ಆದರೆ, ಶಾಲೆಯಲ್ಲಿ ಗಂಟೆ ಹೊಡೆದರೆ ಮಕ್ಕಳಿಗೆ ಶಿಕ್ಷಣ ಸಿಗುವಂತೆ ಮಾಡುವ ಕೆಲಸ ಮಾಡುತ್ತಿದ್ದೇನೆ. ಅದೇ ನಮಗೆ ದೇವರ ಪ್ರಸಾದ' ಎಂದು ಹೇಳಿದರು.

ಗುಜರಾತಿನಲ್ಲಿ ಜನಿಸಿ, ಮೈಸೂರಿನಲ್ಲಿ ಶಿಕ್ಷಣ ಪಡೆದು ಯಾವುದೋ ಗ್ರಾಮದ ಮಕ್ಕಳಿಗೆ ಶಿಕ್ಷಣ ನೀಡಲು ಸೌಲಭ್ಯ ಒದಗಿಸಿಕೊಟ್ಟಿರುವ ಜನಾರ್ದನ್ ಠಕ್ಕರ್ ಅವರ ಪರಿಜ್ಞಾನ ಮೆಚ್ಚುವಂಥದ್ದು. ಜಾತಿ, ಧರ್ಮ, ಭಾಷೆ, ರಾಜ್ಯ, ದೇಶಕ್ಕೆ ಗಡಿ ಇರುತ್ತದೆ. ಆದರೆ, ಶಿಕ್ಷಣಕ್ಕೆ ಅಂಥ ಯಾವುದೇ ಗಡಿ ಇಲ್ಲ. ಅದಕ್ಕೆ ಠಕ್ಕರ್ ಕುಟುಂಬವೇ ಸಾಕ್ಷಿ. ಸ್ಥಳೀಯ ಶಾಸಕ ನಂಜೇಗೌಡರ ಶ್ರಮವೂ ಇದರಲ್ಲಿ ಅಡಗಿದೆ' ಎಂದು ಶ್ಲಾಘಿಸಿದರು. 'ಇಡೀ ರಾಜ್ಯದಲ್ಲಿ ಹೆಚ್ಚು ಸರ್ಕಾರಿ ಸಿಬ್ಬಂದಿ ಹೊಂದಿರುವ ಯಾವುದಾದರೂ ಇಲಾಖೆ ಇದ್ದರೆ ಅದು ಶಿಕ್ಷಣ ಇಲಾಖೆ ಹಾಗೂ ಸಮಸ್ಯೆ ಕೂಡ ಇದೇ ಇಲಾಖೆಯಲ್ಲಿ ಹೆಚ್ಚು ಇದೆ. ಈಚೆಗೆ ಶಾಲಾ ಶಿಕ್ಷಣ ಇಲಾಖೆಯಲ್ಲಿ ಬಹಳಷ್ಟು ಬದಲಾವಣೆ ತಂದಿದ್ದೇನೆ' ಎಂದರು. ಅಮೆರಿಕದಲ್ಲಿ ನೆಲೆಸಿರುವ ಗುಜರಾತಿನ ಮೂಲದ ಉದ್ಯಮ ಜನಾರ್ದನ್ ಠಕ್ಕರ್ ಮಾತನಾಡಿ, ಸರ್ಕಾರಿ ಶಾಲಾ ಮಕ್ಕಳಿಗೂ ಉತ್ತಮ ಸೌಲಭ್ಯ, ಗುಣಮಟ್ಟದ ಶಿಕ್ಷಣ ದೊರೆಯಬೇಕೆಂಬುದು ನಮ್ಮ ಉದ್ದೇಶ. ಮತ್ತಷ್ಟು ಸರ್ಕಾರಿಗಳ ಶಾಲೆ ಅಭಿವೃದ್ಧಿಗೆ ನಾವು ಬದ್ಧ. ಆದರೆ, ನಿರ್ಮಾಣ ಮಾಡಿಕೊಟ್ಟಿರುವ ಶಾಲಾ ಕಟ್ಟಡಗಳನ್ನು ಚೆನ್ನಾಗಿ ನಿರ್ವಹಣೆ ಮಾಡಬೇಕು' ಎಂದರು. ಶಾಸಕ ಕೆವೈ.ನಂಜೇಗೌಡ ಮಾತನಾಡಿ, 'ಪಟ್ಟಣ ಸೇರಿದಂತೆ ತಾಲ್ಲೂಕಿನ ಅಭಿವೃದ್ಧಿಗೆ ಸರ್ಕಾರದಿಂದ ಸುಮಾರು 2,500 ಕೋಟಿ ಅನುದಾನ ತಂದಿದ್ದೇನೆ. ಮಾಸ್ತಿ ವೆಂಕಟೇಶ್ ಅಯ್ಯಂಗಾರ್ ಹುಟ್ಟೂರಾದ ಮಾಸ್ತಿ ಅವರ ಹೆಸರಲ್ಲಿ ವಸತಿ ಶಾಲೆ ನಿರ್ಮಾಣ, ದಾಮರಕುಂಟೆ ಅಭಿವೃದ್ಧಿಗೆ ಸುಮಾರು ರೂ. 1.50 ಕೋಟಿ ಮೀಸಲಿರಿಸಲಾಗಿದೆ. ★ 1.5 ಕೋಟಿ ವೆಚ್ಚದಲ್ಲಿ ಬಸ್ ನಿಲ್ದಾಣ ನಿರ್ಮಾಣ ಮಾಡಲಾಗಿದೆ. ಮಾಸ್ತಿ ಅಭಿವೃದ್ಧಿಗೆ ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ 1 ಕೋಟಿ ಬಿಡುಗಡೆ ಮಾಡಿದ್ದು, ಮಾಸ್ತಿಯ ಎಲ್ಲಾ ರಸ್ತೆಗಳಿಗೆ ಡಾಂಬರು ಅಳವಡಿಸುವ ಕೆಲಸ ಆರಂಭಿಸಲಾಗುವುದು' ಎಂದು ತಿಳಿಸಿದರು.




ಉದಯವಾಹಿನಿ ಚಿತ್ರ

**10 ಎಚ್‌ಪಿ ವಿದ್ಯುತ್ ಅನ್ನು ಬಂಗಾರಪ್ಪ ಪುಕ್ಕಟೆ ನೀಡಿದರು ಎಂಬುದನ್ನು ಇಡೀ ರಾಜ್ಯದ ರೈತರು ಸ್ಮರಿಸುತ್ತಾರೆ. ಹಾಗೆಯೇ ಬಡವರ ಮನೆಗೆ ಉಚಿತವಾಗಿ ಬೆಳಕು ನೀಡುವ ಕೆಲಸವನ್ನು ಸಿದ್ದರಾಮಯ್ಯ ಹಾಗೂ ಡಿ.ಕೆ.ಶಿವಕುಮಾರ್ ನೇತೃತ್ವದ ಸರ್ಕಾರ ನೀಡಿದೆ. ಐದು ಗ್ಯಾರಂಟಿ ಯೋಜನೆ ಜಾರಿ ಮೂಲಕ ಬಡತನ ನೀಗಿಸುವ ಕೆಲಸವನ್ನು ಮಾಡುತ್ತಿದೆ. ಚುನಾವಣೆ ವೇಳೆ ಕಾಂಗ್ರೆಸ್ ಪ್ರಣಾಳಿಕೆ ಸಮಿತಿಯ ಉಪಾಧ್ಯಕ್ಷನಾಗಿ ನಾನು ಕೆಲಸ ಮಾಡಿದ್ದೆ ಎಂದು ಹೇಳಿಕೊಳ್ಳಲು ನನಗೆ ಹೆಮ್ಮೆ ಇದೆ. ಜಿ.ಪರಮೇಶ್ವರ ಅಧ್ಯಕ್ಷರಾಗಿದ್ದರು' ಎಂದು ತಿಳಿಸಿದರು.**

### ಶ್ರಾವಣ: ಸಹಸ್ರಾರು ಭಕ್ತರು ಭಾಗಿ

• ಉದಯವಾಹಿನಿ, ಪಾವಗಡ

ಪಟ್ಟಣದ ಶನೈಶ್ಚರ ದೇಗುಲದಲ್ಲಿ ಮೊದಲನೇ ಶ್ರಾವಣ ನಡೆದ ವಿಶೇಷ ಕಾರ್ಯಕ್ರಮಗಳಲ್ಲಿ ವಿವಿಧೆಡೆಯಿಂದ ಬಂದಿದ್ದ ಸಹಸ್ರಾರು ಭಕ್ತರು ಭಾಗವಹಿಸಿದ್ದರು.ರೂ.7 ಕೋಟಿ ವೆಚ್ಚದಲ್ಲಿ ದೇಗುಲದ ಗರ್ಭಗುಡಿ, ಪ್ರಾಂಗಣಕ್ಕೆ ಚಿನ್ನದ ಲೇಪನ ಮಾಡಿರುವುದನ್ನು ಭಕ್ತರು ಕಣ್ತುಂಬಿಕೊಂಡರು. ಮುಂಜಾನೆ 4 ಗಂಟೆಯಿಂದಲೇ ಅಭಿಷೇಕ, ತೈಲಾಭಿಷೇಕ, ಕುಂಕುಮಾರ್ಚನೆ, ಸರ್ವಸೇವೆ, ತಾಳಿ ಪೂಜೆ ಇತ್ಯಾದಿ ಪೂಜೆ ನಡೆದವು. ಸಂಘ ಸಂಸ್ಥೆಗಳ ಪದಾಧಿಕಾರಿಗಳು ಭಕ್ತರಿಗೆ ಉಪಹಾರ ವಿತರಿಸಿದರು. ದೇಗುಲದ ಎಸ್‌ಎಸ್‌ಕೆ ಅನ್ನದಾಸೋಹ ಭವನದಲ್ಲಿ ಶುಕ್ರವಾರದಿಂದ ಸಹಸ್ರಾರು ಸಂಖ್ಯೆಯ ಭಕ್ತರಿಗೆ ಉಚಿತ ಪ್ರಸಾದ ವಿತರಿಸಲಾಯಿತು. ಬೆಳಿಗಿನ ಜಾವದಿಂದಲೇ ಸಂಜೆಯವರೆಗೆ ಸರದಿಯಲ್ಲಿ ನಿಂತು ದರ್ಶನ ಪಡೆದರು. ತರಹೇವಾರಿ ಹೂವುಗಳಿಂದ ಇಡೀ ದೇಗುಲವನ್ನು ಅಲಂಕರಿಸಲಾಗಿತ್ತು. ಶುಕ್ರವಾರವೇ ವಿವಿಧೆಡೆಯಿಂದ ಭಕ್ತರು ಬಂದಿದ್ದರಿಂದ ವಾಹನ ದಟ್ಟಣೆ ಹೆಚ್ಚಿತ್ತು. ಬಳ್ಳಾರಿ ತುಮಕೂರು ರಸ್ತೆಯಲ್ಲಿ ವಾಹನ ದಟ್ಟಣೆ ಹೆಚ್ಚಿದ್ದರಿಂದ ಪಟ್ಟಣದಲ್ಲಿ ಒಂದೆಡೆಯಿಂದ ಮತ್ತೊಂದೆಡೆಗೆ ಸಂಚರಿಸುವುದು ಕಷ್ಟಸಾಧ್ಯವಾಗಿತ್ತು.



# ಸಮಾಜದ ದನಿಯಾದರಷ್ಟೇ ಕರಿ ಕೋಟಿಗೆ ಬೆಲೆ

## ಕಾರ್ಯಾಗಾರದಲ್ಲಿ ಹೈಕೋರ್ಟ್ ನ್ಯಾಯಮೂರ್ತಿ ಎಚ್.ಪಿ. ಸಂದೇಶ್ ಅಭಿಪ್ರಾಯ

• ಉದಯವಾಹಿನಿ, ರಾಮನಗರ

ವಕೀಲರು ಸಮಾಜದ ದನಿಯಾದಾಗ ಮಾತ್ರ ಅವರ ಕರಿ ಕೋಟಿಗೆ ಬೆಲೆ ಬರುತ್ತದೆ. ಸ್ವಾತಂತ್ರ್ಯ ಹೋರಾಟದಲ್ಲಿ ವಕೀಲರ ಪಾತ್ರ ದೊಡ್ಡದು. ಸ್ವಾತಂತ್ರ್ಯ ಹೋರಾಟದ ಮುಂದಾಳು ಗಾಂಧೀಜಿ ಸೇರಿದಂತೆ ದೇಶ ಕಂಡ ಮಹಾನ್ ನಾಯಕರು ವಕೀಲರಾಗಿದ್ದರು. ವಕೀಲರು ಈಗ ದುಡ್ಡಿನ ಹಿಂದೆ ಬಿದ್ದಿದ್ದು, ಸಾಮಾಜಿಕ ಪರಿವರ್ತನೆಗೆ ಅವರ ಕೊಡುಗೆ ಕಡಿಮೆಯಾಗಿದೆ' ಎಂದು ಹೈಕೋರ್ಟ್ ನ್ಯಾಯಮೂರ್ತಿ ಎಚ್.ಪಿ. ಸಂದೇಶ್ ಬೇಸರ ವ್ಯಕ್ತಪಡಿಸಿದರರು. ಕರ್ನಾಟಕ ರಾಜ್ಯ ವಕೀಲರ ಪರಿಷತ್ ಮತ್ತು ಜಿಲ್ಲಾ ವಕೀಲರ ಸಂಘವು ನಗರದ ಕೋರ್ಟ್ ಸಂಕೀರ್ಣದಲ್ಲಿರುವ ಸಂಘದ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಕಾನೂನು ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದ ಅವರು, ದೇಶ ಸ್ಥಿರವಾಗಿರುವುದಕ್ಕೆ ಪ್ರಜಾಪ್ರಭುತ್ವದ ಕಾವಲುನಾಯಿಯಾದ ನ್ಯಾಯಾಂಗ ಕಾರಣ. ಅದರ ಉತ್ಕೃಷ್ಟತೆಯನ್ನು ಸದಾ ಕಾಪಾಡಿಕೊಂಡು ಹೋಗಬೇಕು' ಎಂದರು.

ಸ್ವಾಮಿ ವಿವೇಕಾನಂದ ಅವರು ದೇಶದ ಪ್ರತಿಯೊಬ್ಬರು ರಾಷ್ಟ್ರಾಭಿಮಾನ, ಆತ್ಮಾಭಿಮಾನ ಬೆಳೆಸಿಕೊಳ್ಳಬೇಕು. ಮುಖ್ಯವಾಗಿ ದೇಶದ ಚರಿತ್ರೆ, ನಮ್ಮತನ ಹಾಗೂ ಸಂಸ್ಕೃತಿ ಅರಿಯಬೇಕು. ಯುವಜನರಿಗೆ ಒಳ್ಳೆಯ ವಿಚಾರಧಾರೆಯನ್ನು ತುಂಬಬೇಕು ಎಂದು ಹೇಳುತ್ತಿದ್ದರು' ಎಂದು ತಿಳಿಸಿದರು.



ಉದಯವಾಹಿನಿ ಚಿತ್ರ

**1.20 ಲಕ್ಷ ವಕೀಲರು ನೋಂದಣಿ**

ಯುವಜನರಲ್ಲಿ ಈಗ ಒಳ್ಳೆಯ ವಿಚಾರಧಾರೆ ಇವೆಯೇ ಎಂಬುದರ ಅವಲೋಕನ ಅಗತ್ಯ. ಪೋಕ್ಸೊ ಪ್ರಕರಣಗಳು ಹೆಚ್ಚುತ್ತಿವೆ. ಎಲ್ಲೆಂದರಲ್ಲಿ ಮದ್ಯದಂಗಡಿಗಳು ಕಾಣುತ್ತಿವೆ. ಹೆಣ್ಣು ಮಕ್ಕಳು ಸಹ ಮದ್ಯ ಖರೀದಿಗೆ ಸರದಿಯಲ್ಲಿ ನಿಲ್ಲುವ ಸ್ಥಿತಿ ಬಂದಿದೆ. ಅಂತರ್ಜಾಲ ಮತ್ತು ಸಾಮಾಜಿಕ ಜಾಲತಾಣದಲ್ಲಿ ಯುವಜನರು ಮುಳುಗಿದ್ದಾರೆ' ಎಂದು ಬೇಸರ ವ್ಯಕ್ತಪಡಿಸಿದರು.

'ವಕೀಲರು ಪಂಚಮಂತ್ರಗಳಾದ ಶಿಸ್ತು, ಶ್ರಮ, ಸಮಯಪ್ರಜ್ಞೆ, ಆತ್ಮವಿಶ್ವಾಸ, ನಿರ್ಭಯತೆ ಬೆಳೆಸಿಕೊಳ್ಳಬೇಕು. ಕಕ್ಷಿದಾರನಿಗೆ ಪ್ರಕರಣದ ವಾಸ್ತವಾಂಶ ತಿಳಿಸಬೇಕು. ಹಣಕ್ಕಾಗಿ ವಾಸ್ತವಾಂಶ ಮರೆಮಾಚಿ ನಂತರ ಪೇಚಿಗೆ ಸಿಲುಕಬಾರದು. ಹಿರಿಯರು ಕಿರಿಯರಿಗೆ ಸದಾ ಆತ್ಮವಿಶ್ವಾಸ ತುಂಬಬೇಕು. ನೊಂದವರಿಗೆ ದನಿಯಾಗುವ ಹೃದಯ ಶ್ರೀಮಂತಿಕೆ ಬೆಳೆಸಿಕೊಳ್ಳಬೇಕು ಎಂದರು.

ಪರಿಷತ್ ಅಧ್ಯಕ್ಷ ಮಿಟ್ಟಲ್‌ಡ್ ಮಾತನಾಡಿ, ವಕೀಲರು ಪ್ರತಿ ವರ್ಷ ಪರಿಷತ್‌ಗೆ ವಂತಿಗೆ ಪಾವತಿಸಬೇಕು. ಪರಿಷತ್‌ನಲ್ಲಿ 1.20 ಲಕ್ಷ ವಕೀಲರು ನೋಂದಣಿ ಮಾಡಿದ್ದಾರೆ. ಅದರಲ್ಲಿ ಕೇವಲ 75 ಸಾವಿರ ಮಂದಿ ಮಾತ್ರ ವಕೀಲಿಕೆ ಮಾಡುತ್ತಿದ್ದಾರೆ. ಉಳಿದವರು ಏನು ಮಾಡುತ್ತಿದ್ದಾರೊಗೊತ್ತಿಲ್ಲ. ಪರಿಷತ್ ವಕೀಲರ ಶ್ರೇಯೋಭಿವೃದ್ಧಿಗೆ ಬದ್ಧವಾಗಿ ಕೆಲಸ ಮಾಡುತ್ತಿದೆ' ಎಂದರು.

ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಬಿ.ಎಂ. ಶ್ರೀವತ್ಸ ಅಧ್ಯಕ್ಷತೆ ವಹಿಸಿದ್ದರು. ರಾಜ್ಯ ವಕೀಲರ ಪರಿಷತ್ ನಿರ್ದೇಶಕ ವಿಶಾಲ್ ರಘು ಎಚ್.ಎಸ್, ನ್ಯಾಯಾಧೀಶರಾದ ಪಂಚಾಕ್ಷರಿ, ಲೋಕೇಶ್, ಸವಿತಾ ಪಿ.ಆರ್, ನಿವೇದಿತಾ, ಅವಿನಾಶ್ ಚಿನ್ನೂರು, ಪುಟ್ಟರಾಜು ಸಿ, ಸಂಘದ ಉಪಾಧ್ಯಕ್ಷ ಚಂದ್ರಶೇಖರ್, ಖಜಾಂಚಿ ಮಂಜೇಶ್ ಗೌಡ, ಸಂಘದ ಪದಾಧಿಕಾರಿಗಳು ಇದ್ದರು. ಸಂಘದ ಕಾರ್ಯದರ್ಶಿ ಟಿ. ತಿಮ್ಮೇಗೌಡ ಕಾರ್ಯಕ್ರಮ ನಿರ್ವಹಣೆ ಮಾಡಿದರು. ಎಸ್. ಲೋಕೇಶ್ ಅತಿಥಿಗಳನ್ನು ಸ್ವಾಗತಿಸಿದರು. ಸತೀಶ್ ಪ್ರಾರ್ಥಿಸಿದರು.

**ವಕೀಲರ ಸಂಘದ ಚುನಾವಣೆಯಲ್ಲೂ ಗುಂಡು ತುಂಡು ಹಣ ನಡೆಯುತ್ತಿದೆ. ಸಂಘಕ್ಕೆ ಚುನಾವಣೆಯೇ ಬೇಕಿಲ್ಲ. ವಕೀಲ ವೃತ್ತಿಯ ಗೌರವ ಕಾಪಾಡುವವರನ್ನು ಸಂಘಕ್ಕೆ ಅವಿರೋಧವಾಗಿ ಆಯ್ಕೆ ಮಾಡಿಕೊಳ್ಳುವಂತಾಗಬೇಕು**

**ಎಚ್.ಪಿ. ಸಂದೇಶ್ ಹೈಕೋರ್ಟ್ ನ್ಯಾಯಮೂರ್ತಿ**

**ಸರ್ಕಾರದ ವಿರುದ್ಧ ಆಕ್ರೋಶ**

**ಶಿಕ್ಷಣ ಆರೋಗ್ಯ ನ್ಯಾಯ ಸರಿಯಾಗಿದ್ದರೆ ಮಾತ್ರ ಒಳ್ಳೆಯ ದೇಶ ಕಟ್ಟಲು ಸಾಧ್ಯ. ಈಗ ಶಿಕ್ಷಣ ವೇಗವಾಗಿ ಖಾಸಗೀಕರಣಗೊಳ್ಳುತ್ತಿದೆ. ಒಂದೆಡೆ ಸರ್ಕಾರಿ ಶಾಳೆಗಳು ಮುಚ್ಚುತ್ತಿದ್ದರೆ ಮತ್ತೊಂದೆಡೆ ಖಾಸಗಿ ಶಾಲಾ–ಕಾಲೇಜುಗಳು ಹೆಚ್ಚುತ್ತಿವೆ. ಶಾಲಾ–ಕಾಲೇಜುಗಳಿಗೆ ಶಿಕ್ಷಕರು ಮತ್ತು ಉಪನ್ಯಾಸಕರನ್ನು ನೇಮಿಸುವ ಯೋಗ್ಯತೆ ಸರ್ಕಾರಕ್ಕೆ ಇಲ್ಲವಾಗಿದೆ. ಅತಿಥಿ ಶಿಕ್ಷಕರಿಗೆ ಬಿಡಿಗಾಸಿನ ಸಂಬಳ ಕೊಡುತ್ತಾರೆ. ಅದೂ 9 ತಿಂಗಳು ಮಾತ್ರ. ಅದನ್ನೂ ಸರಿಯಾಗಿ ಕೊಡದೆ ಮನಸ್ಸಿಗೆ ಬಂದಾಗ ಬಿಡುಗಡೆ ಮಾಡುತ್ತಾರೆ' ಎಂದು ನ್ಯಾ. ಸಂದೇಶ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.**

### ಬೀಡಿ ಕಾರ್ಮಿಕರಿಗೆ ಅನ್ಯಾಯ

• ಉದಯವಾಹಿನಿ, ತುಮಕೂರು

ಕನಿಷ್ಠ ವೇತನ ರೂ.35 ಸಾವಿರ ನಿಗದಿ, ಬೀಡಿ ಕಾರ್ಮಿಕರ ವೇತನ ಕಡಿತ ಆದೇಶ ಹಿಂಪಡೆಯುವುದು ಸೇರಿ ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಜುಲೈ 28ರಂದು ನಗರದ ಕಾರ್ಮಿಕ ಇಲಾಖೆ ಕಚೇರಿ ಮುಂಭಾಗ ಕಾರ್ಮಿಕರು ಸಿಐಟಿಯು ನೇತೃತ್ವದಲ್ಲಿ ಪ್ರತಿಭಟನೆ ನಡೆಸಲಿದ್ದಾರೆ. ರಾಜ್ಯದಲ್ಲಿ ಸುಮಾರು 2.50 ಕೋಟಿ ಅಕುಶಲ ಕಾರ್ಮಿಕರಿದ್ದಾರೆ. ಅವರಿಗೆ ಕನಿಷ್ಠ ವೇತನದ ಬಗ್ಗೆ ಸರಿಯಾದ ಮಾನದಂಡ ಇಲ್ಲ. 2018ರ ಕನಿಷ್ಠ ವೇತನ ಕಾಯ್ದೆ ಜಾರಿಗೆ ಸರ್ಕಾರ ಆಸಕ್ತಿ ತೋರುತ್ತಿಲ್ಲ. ಇದರ ವಿರುದ್ಧ ಇಡೀ ರಾಜ್ಯದಾದ್ಯಂತ ಹೋರಾಟಕ್ಕೆ ಕರೆ ನೀಡಲಾಗಿದೆ' ಎಂದು ಸಿಐಟಿಯು ಜಿಲ್ಲಾ ಘಟಕದ ಅಧ್ಯಕ್ಷ ಸೈಯದ್ ಮುಜೀಬ್ ಇಲ್ಲಿ ಶನಿವಾರ ಹೇಳಿದರು. ಬಿಡಿ ಕಾರ್ಮಿಕರ ಕನಿಷ್ಠ ವೇತನ ಕಾಯ್ದೆ 1948ರ ಕಲಂ 5(1) ಬಿ ಬದಲಾಗಿ, 5(1) ಎ ಜಾರಿಗೆ ಪೂರ್ವಾನುಮತಿ ನೀಡಲಾಗಿದೆ. ನ್ಯಾಯಾಲಯದ ಮೂಲಕ ಕಾರ್ಮಿಕರ ಹಕ್ಕು ಕಸಿಯಲಾಗುತ್ತಿದೆ. ಈ ನೀತಿಯಿಂದ ಸುಮಾರು 8.50 ಲಕ್ಷ ಬಿಡಿ ಕಾರ್ಮಿಕರಿಗೆ ಅನ್ಯಾಯವಾಗಲಿದೆ. ಬೆಲೆ ಹೆಚ್ಚಳಕ್ಕೆ ಅನುಗುಣವಾಗಿ ರಾಜಕಾರಣಿಗಳು ತಮ್ಮ ವೇತನ ಹೆಚ್ಚಿಸಿಕೊಂಡಿದ್ದಾರೆ. ದಿನಗೂಲಿ ನೌಕರರ ವೇತನ ಕಡಿತ ಮಾಡುವುದು ಖಂಡನೀಯ ಎಂದು ಸುದ್ದಿಗೋಷ್ಠಿಯಲ್ಲಿ ಅಸಮಾಧಾನ ವ್ಯಕ್ತಪಡಿಸಿದರು.

## ದಿನ ಭವಿಷ್ಯ

| ರಾಹುಕಾಲ | ಬೆಳಿಗ್ಗೆ | 07:30 ರಿಂದ 09:00 |
|---|---|---|
| ಗುಳಿಕ ಕಾಲ | ಮಧ್ಯಾಹ್ನ | 01:30 ರಿಂದ 03:00 |
| ಯಮಗಂಡ ಕಾಲ | ಬೆಳಿಗ್ಗೆ | 10:30 ರಿಂದ 12:00 |

**ಮೇಷ** ಆರೋಗ್ಯ ಪರಿಪೂರ್ಣವಾಗಿರುತ್ತದೆ. ಜಂಟಿ ಯೋಜನೆಗಳು, ಸಂಶಯಾಸ್ಪದ ಹಣಕಾಸು ಯೋಜನೆಗಳಲ್ಲಿ ಹೂಡಿಕೆ ಮಾಡಬೇಡಿ. ಸ್ನೇಹಿತರು ಮತ್ತು ಕುಟುಂಬದ ಸದಸ್ಯರು ನಿಮಗೆ ನೆರವು ಮತ್ತು ಪ್ರೀತಿ ಒದಗಿಸುತ್ತಾರೆ. ನಿಮ್ಮ ಪ್ರೇಮಿ ಅಥವಾ ಪ್ರೇಮಿಕ ಇಂದು ತುಂಬಾ ಕೋಪದಲ್ಲಿ ಕಾಣಬಹುದು.

**ವೃಷಭ** ಮನರಂಜನೆ ಕ್ರೀಡಾ ಚಟುವಟಿಕೆಗಳು, ಹೊರಾಂಗಣ ಕಾರ್ಯಕ್ರಮಗಳನ್ನು ಒಳಗೊಂಡಿರಬೇಕು. ರಾತ್ರಿಯ ವೇಳೆಯಲ್ಲಿ ನೀವು ಹಣದ ಪ್ರಯೋಜನವನ್ನು ಪಡೆಯುವ ಪೂರ್ತಿ ಸಾಧ್ಯತೆ ಇದೆ ಏಕೆಂದರೆ ನಿಮ್ಮ ಮೂಲಕ ಕೊಟ್ಟಿರುವ ಹಣ ನಿಮಗೆ ಮರಳಿ ಸಿಗಬಹುದು.

**ಮಿಥುನ** ನಿಮ್ಮ ಮನಸ್ಥಿತಿಯನ್ನು ಬದಲಾಯಿಸಲು ಯಾವುದಾದರೂ ಸಾಮಾಜಿಕ ಸಭೆಗೆ ಹಾಜರಾಗಿ. ತಾಯಿ, ತಂದೆಯ ಆರೋಗ್ಯಕ್ಕಾಗಿ ನೀವು ಇಂದು ಸಾಕಷ್ಟು ಹಣವನ್ನು ಖರ್ಚು ಮಾಡಬೇಕಾಗಬಹುದು. ಇದು ನಿಮ್ಮ ಹಣಕಾಸಿನ ಸ್ಥಿತಿಯನ್ನು ಹದಗೆಡಿಸುತ್ತದೆ ಆದರೆ ಸಂಬಂಧವನ್ನು ಬಲಪಡಿಸುತ್ತದೆ.

**ಕರ್ಕಾಟಕ** ನಿಮ್ಮಲ್ಲಿ ಇಂದು ಚುರುಕುತನವನ್ನು ನೋಡಬಹುದು. ನಿಮ್ಮ ಆರೋಗ್ಯವು ಇಂದು ನಿಮ್ಮನ್ನು ಸಂಪೂರ್ಣವಾಗಿ ಬೆಂಬಲಿಸುತ್ತದೆ. ಭೂಮಿಯನ್ನು ಖರೀದಿಸಿದ ಮತ್ತು ಈಗ ಅದನ್ನು ಮಾರಾಟ ಮಾಡಲು ಬಯಸುವ ಜನರು ಇಂದು ಉತ್ತಮ ಖರೀದಿದಾರರನ್ನು ಕಾಣಬಹುದು.

**ಸಿಂಹ** ನಿಮ್ಮ ಸ್ನೇಹಿತರು ಅಥವಾ ಕುಟುಂಬ ಸದಸ್ಯರೊಂದಿಗಿನ ಸಂತಸದ ಪ್ರಯಾಣ ನಿಮಗೆ ಸಮಾಧಾನ ನೀಡುತ್ತದೆ. ಬ್ಯಾಂಕ್ ವ್ಯವಹರಗಳಲ್ಲಿ ಕಾಳಜಿ ವಹಿಸಬೇಕು. ಇಂದು ನೀವು ಹಚ್ಚು ಪ್ರಯತ್ನ ಮಾಡಬೇಕಾಗಿ ಬಂದರೂ ಕೂಡ ಮಕ್ಕಳ ಸಂಗದಲ್ಲಿ ನಿಮ್ಮ ಬಿಡುವಿನ ಸಮಯ ಕಳೆಯಲು ಪ್ರಯತ್ನಿಸಬೇಕು.

**ಕನ್ಯಾ** ನಿಮ್ಮ ಒರಟು ವರ್ತನೆ ನಿಮ್ಮ ಪತ್ನಿಯೊಂದಿಗಿನ ಸಂಬಂಧವನ್ನು ಹಾಳು ಮಾಡಬಹುದು. ಏನಾದರೂ ಬಾಲಿಶವಾದದ್ದನ್ನು ಮಾಡುವ ಮೊದಲು ನಿಮ್ಮ ವರ್ತನೆಯ ಪರಿಣಾಮದ ಬಗ್ಗೆ ಆಲೋಚಿಸಿ. ಸಾಧ್ಯವಾದಲ್ಲಿ ದೂರ ಹೋಗಿ ನಿಮ್ಮ ಮನಸ್ಥಿತಿಯನ್ನು ಬದಲಾಯಿಸಿ.

**ತುಲಾ** ಗಾಳಿಯಲ್ಲಿ ಮನೆ ಕಟ್ಟುವುದು ನಿಮಗೆ ಸಹಾಯ ಮಾಡಲಾರದು. ನೀವು ಕುಟುಂಬದ ನಿರೀಕ್ಷೆಗಳನ್ನು ಪೂರ್ಣಗೊಳಿಸಲು ಏನಾದರೂ ಮಾಡಬೇಕು. ಕೆಲಸದ ಸ್ಥಳದಲ್ಲಿ ಅಥವಾ ವ್ಯಾಪಾರದಲ್ಲಿ ನಿಮ್ಮ ಯಾವುದೇ ಅಜಾಗರೂಕತೆ ಇಂದು ನಿಮಗೆ ಆರ್ಥಿಕ ನಷ್ಟವನ್ನು ಉಂಟುಮಾಡಬಹುದು.

**ವೃಶ್ಚಿಕ** ಆರೋಗ್ಯ ಪರಿಪೂರ್ಣವಾಗಿರುತ್ತದೆ. ಜೀವನದ ವಾಹನವನ್ನು ಚೆನ್ನಾಗಿ ಚಲಾಯಿಸಲು ಬಯಸುತ್ತಿದ್ದರೆ, ಇಂದು ನೀವು ಹಣದ ಬಗ್ಗೆ ವಿಶೇಷ ಗಮನ ಹರಿಸಬೇಕು. ಹೊಸ ಸಂಬಂಧಗಳು ದೀರ್ಘಾವಧಿಯದ್ದಾಗಿರುತ್ತವೆ ಮತ್ತು ಹೆಚ್ಚು ಅನುಕೂಲಕರವಾಗಿರುತ್ತವೆ.

**ಧನಸ್ಸು** ವಿಶ್ರಾಂತಿ ಪ್ರಮುಖವಾದ ಒಂದು ದಿನ ಇತ್ತೀಚೆಗೆ ನೀವು ಬಹಳಷ್ಟು ಮಾನಸಿಕ ಒತ್ತಡ ಎದುರಿಸುತ್ತಿದ್ದೀರಿ – ಮನೋಲ್ಲಾಸ ಮತ್ತು ಮನೋರಂಜನೆ ನಿಮಗೆ ವಿಶ್ರಾಂತಿ ಪಡೆಯಲು ಸಹಾಯ ಮಾಡುತ್ತದೆ. ಈ ರಾಶಿಚಕ್ರದ ದೊಡ್ಡ ಉದ್ಯಮಿಗಳು ಯೋಚಿಸಿ ಹಣ ಹೂಡಿಕೆ ಮಾಡುವ ಅಗತ್ಯವಿದೆ.

**ಮಕರ** ಸಂತಸದ ಪ್ರಯಾಣ, ಸಾಮಾಜಿಕ ಕಾರ್ಯಕ್ರಮಗಳು ನಿಮಗೆ ಆರಾಮ ಮತ್ತು ಸಂತೋಷ ತರುತ್ತದೆ. ನಿಮ್ಮ ಹಣವನ್ನು ಉಳಿಸಲು ನೀವು ಇಂದು ನಿಮ್ಮ ಮನೆಯ ಜನರೊಂದಿಗೆ ಮಾತನಾಡಬೇಕು. ಅವರ ಸಲಹೆ ನಿಮ್ಮ ಆರ್ಥಿಕ ಪರಿಸ್ಥಿತಿಯನ್ನು ಸುಧಾರಿಸಲು ಸಹಾಯಕವಾಗುತ್ತದೆ.

**ಕುಂಭ** ಸಾಮಾನ್ಯ ಜ್ಞಾನದ ಜೊತೆಗೆ ನಿಮ್ಮ ನಿರಂತರ ಪ್ರಯತ್ನ ಖಂಡಿತವಾಗಿಯೂ ಯಶಸ್ಸು ತರುವುದರಿಂದ ತಾಳ್ಮೆಯಿಂದಿರಿ. ಈ ರಾಶಿಚಕ್ರದ ದೊಡ್ಡ ಉದ್ಯಮಿಗಳು ಇಂದು ತುಂಬಾ ಯೋಚಿಸಿ ಅರ್ಥಮಾಡಿಕೊಂಡು ಹಣದ ಹೂಡಿಕೆ ಮಾಡುವ ಅಗತ್ಯವಿದೆ.

**ಮೀನ** ನಿಮ್ಮ ಸಾಮಾನ್ಯ ಜ್ಞಾನದ ಜೊತೆಗೆ ನಿಮ್ಮ ನಿರಂತರ ಪ್ರಯತ್ನ ಖಂಡಿತವಾಗಿಯೂ ಯಶಸ್ಸು ತರುವುದರಿಂದ ತಾಳ್ಮೆಯಿಂದಿರಿ. ನಿಧಿಗಳ ಹಠಾತ್ ಒಳಹರಿವು ನಿಮ್ಮ ಪಾವತಿಗಳು ಮತ್ತು ತಕ್ಷಣದ ವೆಚ್ಚಗಳನ್ನು ನೋಡಿಕೊಳ್ಳುತ್ತದೆ. ನಿಮಗೆ ಗೊತ್ತಿದ್ದ ಯಾರಾದರೂ ಹಣಕಾಸಿನ ವಿಷಯಗಳಿಗೆ ಅತಿಯಾಗಿ ಪ್ರತಿಕ್ರಿಯಿಸಬಹುದು.

# ಮಕ್ಕಳ ಕೈಗಳು ಮಣ್ಣಿನೊಂದಿಗೆ ಮಕ್ಕಳ ಹೃದಯ ಭಾರತದೊಂದಿಗೆ ಅಭಿಯಾನ

• ಉದಯವಾಹಿನಿ, ಸಿಂಧನೂರು

ಜಮಾ ಅತೆ ಇಸ್ಲಾಮಿ ಸಿಂಧನೂರು ಇದರ ಮಹಿಳಾ ಘಟಕದ ಅಂಗ ಸಂಸ್ಥೆಯಗಿರುವ ಇಸ್ಲಾಮಿಕ್ ಚಿಲ್ಡ್ರನ್ ಸರ್ಕಲ್ ವತಿಯಿಂದ ಭಾರತಾದ್ಯಂತ ಮಕ್ಕಳ ಕೈಗಳು ಮಣ್ಣಿನೊಂದಿಗೆ ಮಕ್ಕಳ ಹೃದಯ ಭಾರತದೊಂದಿಗೆ ಜೂನ್ 25 ರಿಂದ ಜುಲೈ 2 –5 2025 ಒಂದು ಅಭಿಯಾನವನ್ನು ಹಮ್ಮಿಕೊಳ್ಳಲಾಗಿದ್ದು ಭಾರತ್ಯದಂತ 1000000 ಸಸಿ ಗಿಡಗಳನ್ನು ನೆಡಿಯುವ ಗುರಿಯನ್ನು ಹೊಂದಿದೆ. ಅದರ ಅಂಗವಾಗಿ ಸಿಂಧನೂರು ಘಟಕದ ವತಿಯಿಂದ ಕಳೆದ ಒಂದು ತಿಂಗಳಿಂದ ಸಿಂಧನೂರು ತಾಲ್ಲೂಕಿನ ವಿವಧ ಸಾರ್ವಜನಿಕ ಸ್ಥಳಗಳಲ್ಲಿ ಮತ್ತು ಅವಶ್ಯಕತೆ ಇರುವ ಸ್ಥಳಗಳಲ್ಲಿ ಸಿಂಧನೂರು ಘಟಕ ವತಿಯಿಂದ 1000 ಸಸಿ ಗಿಡಗಳನ್ನು ನೆಡಯುವ


ಉದಯವಾಹಿನಿ ಚಿತ್ರ

ಗುರಿಯೊಂದಿಗೆ ಬಹಳಷ್ಟು ಗಿಡಗಳನ್ನು ನಡೆಯಲಾಯಿತು.

ಈ ಅಭಿಯಾನದ ಅಂಗವಾಗಿ ಭಾನುವಾರ ದಿನಾಂಕ ಗಂಗಾನಗರದ 40ನೆ ಕಾಲವೆ ಅಬುಬಕ್ಕರ್ ಮಸ್ಜಿದ್ ಸರ್ಕಲ್ ನಿಂದ ಗಂಗಾವತಿ ರಸ್ತೆಗೆ ಸುಮಾರು 100–150 ಗಿಡಗಳನ್ನು ನೆಡಲಾಯಿತು. ಈ ಕಾರ್ಯಕ್ರಮದಲ್ಲಿ ಪರಿಸರ ಪ್ರೇಮಿ

**ಈ ಕಾರ್ಯಕ್ರಮದಲ್ಲಿ ಚನ್ನನಗೌಡ ಪಾಟೀಲರು CIO ವಿಧ್ಯಾರ್ಥಿಗಳ ಜೊತೆಗೆ ಪರಿಸರ ಸಂರಕ್ಷಣೆ ಬಗ್ಗೆ ಚರ್ಚೆ ನಡೆಸಿದರು. ನಾವು ಮನುಷ್ಯರು ಸ್ವಾರ್ಥಿಗಳು ಅದರೆ ಈ ಗಿಡಗಳು ನಿಸ್ವಾರ್ಥಿಗಳ ಮನುಷ್ಯರಿಗೆ ಶುದ್ದ ಗಾಳಿ, ಹಣ್ಣು ಹಂಪಲು ನೀಡಿ ಮನುಷ್ಯರ ಜೀವನಕ್ಕೆ ಅನುಕೂಲ ಮಾಡುತ್ತವೆ.**

ಅಮರೇಗೌಡ ಮಲ್ಲಪೂರ ಅಧ್ಯಕ್ಷರು ವನಸಿರಿ ಫೌಂಡೇಶನ್ ಸಿಂಧನೂರು, ಖ್ಯಾತ ವೈದ್ಯರಾದ ಚನ್ನಗೌಡ ಪಾಟೀಲ್ ಸೋಮನಗೌಡ ಬಾದರ್ಲಿ ಅಧ್ಯಕ್ಷರು RDCC ಬ್ಯಾಂಕ್ ರಾಯಚೂರು ಅಶೋಕ ಉಮಲೂಟಿ ಕಾಂಗ್ರೆಸ್ ಮುಖಂಡರು ಸಿಂಧನೂರು ಹಾಗೂ ಶಬ್ಬೀರ್ ಅಹ್ಮದ ನಗರಸಭೆ ಸದಸ್ಯರು ಸಿಂಧನೂರು, ಜಮಾ ಅತೆ ಇಸ್ಲಾಮಿ ಹಿಂದ್ ಸ್ಥಾನೀಯಾ ಅಧ್ಯಕ್ಷರು ಮುಹಮ್ಮದ ಹುಸೇನಸಾಬ ಮುಹಮ್ಮದ್ ಅಬುಲೈಸ್ ನಾಯ್ಕ್ ಅಧ್ಯಕ್ಷರು ಸೋಲಿಡಾರಿಟಿ ಯೂತ್ ಮೂವ್ ಮೆಂಟ್ ಸಿಂಧನೂರು ರಾಜಹುಸೇನ್ ಹಿಮಾಯತಿ, ಇಮ್ತಿಯಾಜ್ ಅಧ್ಯಕ್ಷರು SIO ಸಿಂಧನೂರು ಅಶ್ಫಾಕ್ ಅಹ್ಮದ್ ನೂರ್ SIO ಇಸ್ಮಾಯಿಲ್ ಗಡಿಗಿ, ಮಹಿಳಾ ಘಟಕದ ಪದಾಧಿಕಾರಿಗಳಾದ ಸುಮಯ್ಯ ಬೇಗಂ ರಿಜ್ವಾನಾ ಬೇಗಂ ಲುಬ್ನಾ ಬೆಳಗಾಮಿ ಸೈದಾ ಬೇಗಂ ಖಮರ್ ಸುಲ್ತಾನಾ ಸಾಜಿಯ ಬೇಗಂ.ಆಶ್ಮಾ ಬೇಗಂ ನಾಜಿಯ ಪರವೀನ್ ಶಹಜಾಹ ಬೇಗಂ ಇತರೆ ಕಾರ್ಯಕರ್ತರು ಹಾಜರಿದ್ದರು.

### ಕೋಡಿಶ್ರೀ–ಡಿಕೆಶಿಭೇಟಿ:ಸೆಪ್ಟಂಬರ್‌ಕ್ರಾಂತಿಸುದ್ದಿಯಮಧ್ಯೆ, ಶ್ರೀಗಳಿಂದಸಿಕ್ಕಆಶೀರ್ವಾದವೇನು?

# ಡಿಕೆಶಿ ಮುಂದಿನ ಸಿಎಂ ಆಗುತ್ತಾರಾ ಎನ್ನುವ ಕುತೂಹಲ

• ಉದಯವಾಹಿನಿ, ಹಾಸನ

ಜಿಲ್ಲೆಯಲ್ಲಿನ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಡಿಸಿಎಂ ಡಿಕೆ ಶಿವಕುಮಾರ್, ಕೋಡಿಮಠದ ಶ್ರೀಗಳನ್ನು ಭೇಟಿಯಾಗಿದ್ದಾರೆ. ಆ ವೇಳೆ, ಶ್ರೀಗಳು ಏನು ಆಶೀರ್ವಾದ ಮಾಡಿದರು ಎನ್ನುವ ಪ್ರಶ್ನೆಗೆ ಡಿಕೆಶಿ ಮಾರ್ಮಿಕವಾಗಿ ಉತ್ತರಿಸಿದರು. ಸೆಪ್ಟಂಬರ್ ಕ್ರಾಂತಿಯ ಸುದ್ದಿಯ ನಡುವೆ, ಈ ಭೇಟಿ ಕುತೂಹಲಕ್ಕೆ ಕಾರಣವಾಗಿದೆ. ಮುಖ್ಯಮಂತ್ರಿ ಬದಲಾವಣೆಯ ಕುರಿತು ಇತ್ತೀಚೆಗೆ ಅರಸೀಕೆರೆ ಕೋಡಿಮಠದ ಸಂಸ್ಥಾನದ ಡಾ.ಶಿವಾನಂದ ಶಿವಯೋಗಿ ರಾಜೇಂದ್ರ ಸ್ವಾಮೀಜಿ ಭವಿಷ್ಯವನ್ನು ನುಡಿದಿದ್ದರು. ಹಾಲು ಕೆಟ್ಟರೂ, ಹಾಲುಮತ ಸಮುದಾಯ ಕೆಡುವುದಿಲ್ಲ ಎಂದು ಹೇಳಿದ್ದರು. ಅಂದರೆ, ಸಿದ್ದರಾಮಯ್ಯ ಅವರಾಗಿಯೇ ಸಿಎಂ ಕುರ್ಚಿಯಿಂದ ಇಳಿಯಬೇಕು, ಬಲವಂತವಾಗಿ ಅವರನ್ನು ಇಳಿಸಲು ಸಾಧ್ಯವಿಲ್ಲ ಎಂದಿದ್ದರು. ಈ ಹಿನ್ನಲೆಯಲ್ಲಿ, ಡಿಕೆ ಶಿವಕುಮಾರ್, ಕೋಡಿಶ್ರೀಗಳನ್ನು ಭೇಟಿಯಾಗಿದ್ದದ್ದು ಕುತೂಹಲಕ್ಕೆ ಕಾರಣವಾಗಿದೆ. ನನಗೆ ಧರ್ಮ, ದೇವರು, ಸಂಸ್ಕೃತಿಯ ಬಗ್ಗೆ ನಮ್ಮ ಆಚಾರವಿಚಾರಗಳ ಬಗ್ಗೆ ನಂಬಿಕೆ ಜಾಸ್ತಿ. ಯಾವುದೇ ಧರ್ಮದ ಯಾವುದೇ ಪದ್ದತಿಗಳು, ತನ್ನದೇ ಆದಂತಹ ಶಕ್ತಿಯನ್ನು ಹೊಂದಿದೆ. ಕೆಲವರು ನಂಬದೇ ಇರಬಹುದು, ಆದರೆ ಇದನ್ನು ನಂಬುತ್ತೇನೆ ಎಂದು ಡಿಸಿಎಂ ಡಿಕೆ ಶಿವಕುಮಾರ್, ಕೋಡಿಶ್ರೀಗಳನ್ನು ಭೇಟಿಯಾದ ನಂತರ ಹೇಳಿದ್ದಾರೆ. ರಾಜ್ಯದಲ್ಲಿ ಸೆಪ್ಟಂಬರ್ ಕ್ರಾಂತಿ ನಡೆಯಲಿದೆ ಎಂದು ಸಹಕಾರ ಸಚಿವ ಕೆಎನ್ ರಾಜಣ್ಣ ಹೇಳಿದ್ದಾರೆ.

ರಾಜಣ್ಣನವರ ಹೇಳಿಕೆಯನ್ನು ಲೋಕೋಪಯೋಗಿ ಇಲಾಖೆಯ ಸಚಿವ ಸತೀಶ್ ಜಾರಕಿಹೊಳಿ ಕೂಡ ಹೌದೆಂದಿದ್ದರು. ಜಿಲ್ಲೆಯ ಕಾರ್ಯಕ್ರಮದಲ್ಲಿ ಬಂದಿದ್ದೆ, ಹಾಗಾಗಿ ಕೋಡಿ ಶ್ರೀಗಳನ್ನು ಭೇಟಿಯಾದೆ ಎಂದು ಡಿಕೆಶಿ ಹೇಳಿದರೂ, ಶ್ರೀಗಳ ಭೇಟಿ ಕುತೂಹಲಕ್ಕೆ ಕಾರಣವಾಗಿದೆ. ಡಿಸಿಎಂ ಭೇಟಿಯಾದ ಬಳಿಕ ಕೋಡಿಶ್ರೀಗಳ ಪ್ರತಿಕ್ರಿಯೆ ವ್ಯಕ್ತವಾಗಿಲ್ಲ.

**ಭೇಟಿ ಕುತೂಹಲಕ್ಕೆ ಕಾರಣ**


ಉದಯವಾಹಿನಿ ಚಿತ್ರ


**ಎಲ್ಲರ ಸಂಸ್ಕೃತಿಗೆ ಬೆಲೆ ಕೊಡುತ್ತೇವೆ**

**ಹಾಸನ ಜಿಲ್ಲೆ ಅರಸೀಕೆರೆಯ ಕೋಡಿ ಮಠಕ್ಕೆ ಭೇಟಿ ನೀಡಿ ಶ್ರೀ ಶಿವಾನಂದ ಶಿವಯೋಗಿ ರಾಜೇಂದ್ರ ಮಹಾಸ್ವಾಮೀಜಿ ಅವರ ಆಶೀರ್ವಾದ ಪಡೆದು, ಶಿವಲಿಂಗ ಅಜ್ಜಯ್ಯ ಗದ್ದುಗೆಗೆ ಪೂಜೆ ಸಲ್ಲಿಸಿದ್ದೇನೆ ಎಂದು ಡಿಕೆ ಶಿವಕುಮಾರ್ ಹೇಳಿದ್ದಾರೆ. ಆ ವೇಳೆ, ಮಾಧ್ಯಮಗಳ ಪ್ರಶ್ನೆಗೆ ಉತ್ತರಿಸಿದ ಡಿಸಿಎಂ, ನಾವು ಎಲ್ಲರ ಸಂಸ್ಕೃತಿಗೆ ಬೆಲೆ ಕೊಡುತ್ತೇವೆ ಎಂದು ಹೇಳಿದ್ದಾರೆ. ಇದಕ್ಕೂ ಮುನ್ನ ಅರಸೀಕೆರೆ ಜೇನುಕಲ್ಲು ಸಿದ್ದೇಶ್ವರ ಬೆಟ್ಟದ ಮೆಟ್ಟಿಲುಗಳಿಗೆ ನಂತರ ಜೇನುಕಲ್ಲು ಸಿದ್ದೇಶ್ವರ ದೇಗುಲಕ್ಕೆ ತೆರಳಿ, ಡಿಕೆ ಶಿವಕುಮಾರ್ ಪೂಜೆ ಸಲ್ಲಿಸಿದ್ದರು. ಮಾಧ್ಯಮಗಳ ಪ್ರಶ್ನೆಗೆ ಉತ್ತರಿಸುತ್ತಿದ್ದಂತಹ ಸಂದರ್ಭದಲ್ಲಿ, ಕಾರ್ಯಕರ್ತರು ಡಿಕೆ ಶಿವಕುಮಾರ್ ಮುಂದಿನ ಸಿಎಂ ಎನ್ನುವ ಘೋಷಣೆಯನ್ನು ಕೂಗಿದರು.**

**ಬಹಳ ವರ್ಷದ ನಂತರ ಇಲ್ಲಿಗೆ ಬಂದಿದ್ದೇನೆ, ಕೋಡಿಶ್ರೀಗಳು ಮಠದಲ್ಲೇ ಇದ್ದಾರೆನ್ನುವ ಮಾಹಿತಿ ಸಿಕ್ಕಿತು. ಶ್ರೀಗಳನ್ನು ಭೇಟಿಯಾಗಿ ಆಶೀರ್ವಾದವನ್ನು ಪಡೆದುಕೊಂಡು ಬಂದಿದ್ದೇನೆ. ಎಲ್ಲವೂ ಒಳ್ಳೆದಾಗುತ್ತೆ ಎನ್ನುವ ನಂಬಿಕೆಯಿದೆ ಎಂದು ಡಿಕೆ ಶಿವಕುಮಾರ್ ಹೇಳಿದ್ದಾರೆ. ಅರಸೀಕೆರೆಯಲ್ಲಿ ನಡೆದ ವಿವಿಧ ಇಲಾಖೆಗಳ ಯೋಜನೆಗಳ ಕಾಮಗಾರಿ ಉದ್ಘಾಟನೆ ಹಾಗೂ ಶಂಕುಸ್ಥಾಪನೆ ಕಾರ್ಯಕ್ರಮದಲ್ಲಿ ಶಿವಕುಮಾರ್ ಭಾಗವಹಿಸಿದ್ದರು. ಯೋಗಿ ಎಂದು ಕರೆಸಿಕೊಳ್ಳುವ ಮುನ್ನ ನಾವು ಉಪಯೋಗಿ ಎಂದು ಕರೆಸಿಕೊಳ್ಳಬೇಕು. ಜನರ ಪ್ರೀತಿ ವಿಶ್ವಾಸ ಮರದಲ್ಲಿ, ಮಾರುಕಟ್ಟೆಯಲ್ಲಿ ಸಿಗುವುದಿಲ್ಲ. ನಾವು ಕೆಲಸ ಮಾಡುವ ಮೂಲಕ ಜನರ ಮನದಲ್ಲಿ ಪ್ರೀತಿ ವಿಶ್ವಾಸ ಗಳಿಸಬೇಕು**

**–ಡಿಕೆ ಶಿವಕುಮಾರ್ , ಡಿಸಿಎಂ**

## ಕಳ್ಳತನ ಭೇದಿಸಿದ ಪೊಲೀಸ್ ಅಧಿಕಾರಿಗಳಿಗೆ ಸನ್ಮಾನ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬಸವನಬಾಗೇವಾಡಿ

ಇತ್ತೀಚೆಗೆ ಇಡೀ ರಾಜ್ಯವೇ ಬೆಚ್ಚಿಬಿದ್ದಿದ್ದ ತಾಲ್ಲೂಕಿನ ಮನಗೂಳಿ ಕೆನರಾ ಬ್ಯಾಂಕ್ ಕಳ್ಳತನವನ್ನು ಭೇದಿಸುವಲ್ಲಿ ಪ್ರಮುಖ ಪಾತ್ರವಹಿಸಿದ ಡಿವೈಎಸ್ಪಿ ಬಲ್ಲಪ್ಪ ನಂದಗಾವಿ, ಸಿಪಿಐ ಗುರುಶಾಂತ ದಾಶ್ಯಾಳ ಅವರನ್ನು ಭಾನುವಾರ ಪಟ್ಟಣದ ವಿವೇಕ್ ಬ್ರಿಗೇಡ್ ಸಂಸ್ಥೆ ವತಿಯಿಂದ ಅಭಿನಂದನೆ ಸಲ್ಲಿಸಿ ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಸಂಸ್ಥೆಯ ಮುಖ್ಯಸ್ಥ ವಿನೂತ್ ಬಿ ಕಲ್ಲೂರ ದೇಸಾಯಿ, ರವಿಗೌಡ ಚಿಕ್ಕೊಂಡ, ಶಿವಾನಂದ ತೋಳನೂರು, ಪೃಥ್ವಿನಾಯ್ಕೋಡಿ ಉಪಸ್ಥಿತರಿದ್ದರು.

## ಹಾವೇರಿ: ವರದಾ ಅಬ್ಬರಕ್ಕೆ ಸೇತುವೆ ಮುಳುಗಡೆ

• ಉದಯವಾಹಿನಿ, ಗುತ್ತಲ

ಉತ್ತರಕನ್ನಡ ಜಿಲ್ಲೆಯಲ್ಲಿ ನಿರಂತರವಾಗಿ ಸುರಿಯುತ್ತಿರುವ ಮಳೆಯಿಂದ ವರದಾ ನದಿಗೆ ಬಾರಿ ಪ್ರಮಾಣದ ನೀರು ಹರಿದು ಬರುತ್ತಿದೆ. ಹಾವೇರಿ ತಾಲ್ಲೂಕಿನ ಅಕ್ಕೂರ ಮತ್ತು ಮರಡೂರ ಗ್ರಾಮಗಳ ಮಧ್ಯ ವರದಾ ನದಿಗೆ ಅಡ್ಡಲಾಗಿ ನಿರ್ಮಿಸಿರುವ ಬ್ರಿಡ್ಜ್ ಕಂ ಬ್ಯಾರೇಜ್ ಮುಳುಗಿ 20ಕ್ಕೂ ಹೆಚ್ಚು ಗ್ರಾಮಗಳ ಸಂಪರ್ಕ ಕಡಿತಗೊಂಡಿವೆ. ವರದಾ ನದಿ ನೀರಿನ ಹರಿವು ಹೀಗೆ ಮುಂದುವರಿದರೆ ವರದಾ ನದಿಯ ದಡದಲ್ಲಿರುವ ಸಾವಿರಾರು ಎಕರೆ ಪ್ರದೇಶದ ಬೆಳೆ ನಾಶವಾಗುವ ಆತಂಕ ರೈತರನ್ನು ಕಡುತ್ತಿದೆ.

**ತುಂಗಭದ್ರೆಗೆ 30 ಸಾವಿರ ಕ್ಯೂಸೆಕ್ ನೀರು:** ಹಾವೇರಿ, ದಾವಣಗೇರೆ ಮತ್ತು ಶಿವಮೊಗ್ಗ ಜಿಲ್ಲೆಯಲ್ಲಿ ನಿರಂತರವಾಗಿ ಸುರಿಯುತ್ತಿರುವ ಮಳೆಯಿಂದ ತುಂಗಭದ್ರ ನದಿ ಅಪಾಯ ಮಟ್ಟದಲ್ಲಿ ಹರಿಯುತ್ತಿದೆ. ಭದ್ರಾ ಜಲಾಶಯ ಭರ್ತಿಯಾಗಲು ಕೆಲವೆ ಅಡಿಗಳು ಬಾಕಿ ಇರುವ ಹಿನ್ನೆಲೆಯಲ್ಲಿ ಭದ್ರ ಜಲಾಶಯದಿಂದ ತುಂಗಭದ್ರ ನದಿಗೆ 30 ಸಾವಿರ ಕ್ಯೂಸೆಕ್ ನೀರು ಬಿಡಲಾಗಿದೆ. ತುಂಗಭದ್ರಾ ನದಿಗೆ ಬಾರಿ ಪ್ರಮಾಣದ ನೀರು ಹರಿದು ಬರುವ ಸಾಧ್ಯತೆ ಇರುವುದರಿಂದ ರೈತರು ತಮ್ಮ ಪಂಪ್‌ಸೆಟ್‌ಗಳನ್ನು ಸುರಕ್ಷಿತ ಜಾಗಕ್ಕೆ ಸ್ಥಳಾಂತರಿಸುತ್ತಿದ್ದಾರೆ. ಆದರೆ ಬೆಳೆ ಮುಳುಗುವ ಆತಂಕದಲ್ಲಿದ್ದಾರೆ.

## ಪೆಟ್ಟು ತಿನ್ನುತ್ತಿದ್ದರೂ 'ತಗ್ಗೋದೆ ಇಲ್ಲಾ' ಅಂತ ಸಿನಿಮಾ ಡೈಲಾಗ್ ಹೇಳಿದ ಕಳ್ಳ

• ಉದಯವಾಹಿನಿ, ಗದಗ


ಸರ್ವಿಸ್ ವೈರ್ ಕಳ್ಳತನ ಮಾಡುತ್ತಿದ್ದಾಗ ರೆಡ್‌ಹ್ಯಾಂಡ್ ಆಗಿ ಸಿಕ್ಕಿಬಿದ್ದ ಕಳ್ಳನಿಗೆ ಸಾರ್ವಜನಿಕರು ಹಿಗ್ಗಾಮುಗ್ಗಾ ಥಳಿಸಿದ ಘಟನೆ ಗದಗ ನಗರದಲ್ಲಿ ನಡೆದಿದೆ. ಆದರೆ, ಆ ಖತರ್ನಾಕ್ ಕಳ್ಳ ಪೆಟ್ಟು ತಿನ್ನುತ್ತಿದ್ದರೂ, ತಗ್ಗೋದೋ ಇಲ್ಲಾ ಎಂದ ಪುಷ್ಪಾ ಸಿನಿಮಾ ಡೈಲಾಗ್ ಹೊಡೆದು ಸಾರ್ವಜನಿಕರನ್ನು ಇನ್ನಷ್ಟು ಕೆರಳಿಸಿದ್ದಾನೆ. ಅವನ ಸಿನಿಮಾ ಡೈಲಾಗ್ ಕೇಳಿದ ಜನರು ಮತ್ತಷ್ಟು ಪೆಟ್ಟು ನೀಡಿ, ಪೊಲೀಸರಿಗೆ ಒಪ್ಪಿಸಿದ್ದಾರೆ. ಹೆಸರು ಮಹಾಂತೇಶ್ ಗೌಡ, ರೋಣ ತಾಲ್ಲೂಕಿನ ಒಂದು ಹಳ್ಳಿ ಎಂದು ಹೇಳಿಕೊಂಡಿರುವ ಕಳ್ಳ ಕುಂದಾಪುರಕ್ಕೆ ದುಡಿಯಲು ಹೋಗಿದ್ದನಂತೆ. ಅಲ್ಲಿ ಮಳೆ ಹೆಚ್ಚಾಗಿರುವ ಕಾರಣ ಊರಿಗೆ ಬಂದಿರುವುದಾಗಿ ಹೇಳಿಕೆ ಕೊಟ್ಟಿದ್ದಾನೆ.

## ಹಿಡಕಲ್ ಡ್ಯಾಂ: ಘಟಪ್ರಭಾ ನದಿಗೆ ನೀರು ಬಿಡುಗಡೆ

• ಉದಯವಾಹಿನಿ, ಹುಕ್ಕೇರಿ

ಜಲಾನಯನ ಪ್ರದೇಶದಲ್ಲಿ ಸತತ ಮಳೆಯಾಗುತ್ತಿರುವುದರಿಂದ ಘಟಪ್ರಭಾ ನದಿಯ ಒಳಹರಿವು ಶನಿವಾರ ಹೆಚ್ಚಾಗಿದೆ. ಒಳ ಹರಿವು ಹೆಚ್ಚಾಗುತ್ತಿರುವುದರಿಂದ ಶನಿವಾರ ಮಧ್ಯಾಹ್ನ 4 ಗಂಟೆಗೆ ಕ್ರಸ್ಟ್ ಗೇಟ್ ಮೂಲಕ 5,000 ಕ್ಯುಸೆಕ್ ನೀರನ್ನು ನದಿ ಪಾತ್ರಕ್ಕೆ ಬಿಡಲಾಗಿದೆ ಎಂದು ಎಇಇ ಜಗದೀಶ್ ಬಿ.ಕೆ.ತಿಳಿಸಿದ್ದಾರೆ. ತಾಲ್ಲೂಕಿನಲ್ಲಿನ ಹಿಡಕಲ್ ಜಲಾಶಯಕ್ಕೆ ಹರಿದು ಬರುತ್ತಿರುವ ನೀರಿನ ಪ್ರಮಾಣ ಏರಿಕೆಯಾಗಿದ್ದು, 2170.300 ಅಡಿಗೆ (ಗರಿಷ್ಟ 2175 ಅಡಿ) ತಲುಪಿದೆ. ಒಳಹರಿವಿನ ಪ್ರಮಾಣ 12,227 ಕ್ಯುಸೆಕ್ ಇದೆ.

**ಎಚ್ಚರಿಕೆ:** ಜಲಾಶಯದ ಒಳಹರಿವು ಹೆಚ್ಚಾದಂತೆ ಮತ್ತೆ


ಉದಯವಾಹಿನಿ ಚಿತ್ರ

20,000 ಕ್ಯುಸೆಕ್ ನೀರು ನದಿ ಪಾತ್ರಕ್ಕೆ ಬಿಡುವ ಸಾಧ್ಯತೆ ಇರುವುದರಿಂದ ಘಟಪ್ರಭಾ ಮತ್ತು ಹಿರಣ್ಯಕೇಶಿ ನದಿ ತಟದ ಜನರು ತಮ್ಮ ಜಾನುವಾರು ಸಮೇತ ಸುರಕ್ಷಿತ ಸ್ಥಳಕ್ಕೆ ತೆರಳುವಂತೆ ಎಚ್ಚರಿಕೆ ನೀಡಿದ್ದಾರೆ.

## ಕಲ್ಲು ಎತ್ತಿ ಹಾಕಿ ವ್ಯಕ್ತಿಯ ಕೊಲೆ: ಆರೋಪಿ ಬಂಧನ

• ಉದಯವಾಹಿನಿ, ರಾಣೆಬೆನ್ನೂರು

ವ್ಯಕ್ತಿಯ ಮೇಲೆ ಕಲ್ಲು ಎತ್ತಿ ಹಾಕಿ ಕೊಲೆ ಮಾಡಿದ ಘಟನೆ ತಾಲ್ಲೂಕಿನ ಚಳಗೇರಿ ಗ್ರಾಮದಲ್ಲಿ ಘಟನೆ ನಡೆದಿದೆ. ತಾಲ್ಲೂಕಿನ ಕಾಕೋಳ ಗ್ರಾಮದ ನಿವಾಸಿ ರೈಲ್ವೆ ನೌಕರ ದಿಲೀಪ ಉರ್ಫ ದಿಳ್ಳೆಪ್ಪ ತಂದೆ ಬೀರಪ್ಪ ಹಿತ್ತಲಮನಿ (33) ಕೊಲೆಯಾದ ವ್ಯಕ್ತಿ. ಈ ಬಗ್ಗೆ ಗ್ರಾಮೀಣ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಆರೋಪಿ ರಾಜು ಈರಯ್ಯ ಬಿಳಸನೂರಮಠ ಎಂಬಾತನನ್ನು ಪೊಲೀಸರು ಬಂಧಿಸಿದ್ದಾರೆ.

ಗಾಯಗೊಂಡ ದಿಲೀಪನನ್ನು ಗ್ರಾಮಸ್ಥರು ನಗರದ ಸರ್ಕಾರಿ ಆಸ್ಪತ್ರೆಗೆ ಸಾಗಿಸುವಾಗ ಮಾರ್ಗ ಮಧ್ಯೆ ಮೃತಪಟ್ಟಿದ್ದಾನೆ. ದಿಲೀಪ ಕಾಕೋಳ ಗ್ರಾಮದವನಾಗಿದ್ದು, ತಾಲ್ಲೂಕಿನ ಚಳಗೇರಿಯ ರೈಲು ನಿಲ್ದಾಣದಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ. ಮಹಿಳೆಯೊಬ್ಬರ ಜೊತೆ ಅನೈತಿಕ ಸಂಬಂಧ ಹೊಂದಿದ್ದಾನೆ ಎಂಬ ಶಂಕೆಯೇ ಕೊಲೆಗೆ ಕಾರಣ ಎಂದು ಪೊಲೀಸರು ತಿಳಿಸಿದ್ದಾರೆ.

## ಮಕ್ಕಳನ್ನು ಯಂತ್ರಗಳಾಗಿ ನೋಡಬೇಡಿ: ಲಕ್ಷ್ಮೀ ಹೆಬ್ಬಾಳ್ಕರ್

• ಉದಯವಾಹಿನಿ, ಬೆಳಗಾವಿ

ಆಧುನಿಕ ಯುಗದಲ್ಲಿ ಮಕ್ಕಳು ಯಂತ್ರಗಳಾಗುತ್ತಿದ್ದಾರೆ. ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಮಕ್ಕಳನ್ನು ಕೇವಲ ಅಂಕಗಳಿಕೆಗೆ ಸೀಮಿತಗೊಳಿಸದೇ, ಸಾಹಿತ್ಯಾಸಕ್ತರನ್ನಾಗಿ ಬೆಳೆಸಬೇಕು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಸಲಹೆ ನೀಡಿದರು.

ಕರ್ನಾಟಕ ರಾಜ್ಯ ಮಕ್ಕಳ ಸಾಹಿತ್ಯ ಪರಿಷತ್ ವತಿಯಿಂದ ನಗರದ ಕುಮಾರ ಗಂಧರ್ವ ಮಂದಿರದಲ್ಲಿ ಶನಿವಾರ ನಡೆದ ಜಿಲ್ಲಾ ಪ್ರಥಮ ಮಕ್ಕಳ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ಮುಖ್ಯ ಅತಿಥಿಯಾಗಿ ಅವರು ಮಾತನಾಡಿದರು.ಮಕ್ಕಳ ಅಭಿವೃದ್ಧಿಗಾಗಿ ನನ್ನ ಇಲಾಖೆಯಲ್ಲಿ ಸಾಕಷ್ಟು ಕಾರ್ಯಕ್ರಮಗಳಿವೆ. ಇದರ ಪ್ರಯೋಜನವನ್ನು ಪ್ರತಿಯೊಬ್ಬರೂ ಪಡೆದುಕೊಳ್ಳಬೇಕು.

ಮುಂದಿನ ಸಮ್ಮೇಳನಕ್ಕೆ ನನ್ನ ಇಲಾಖೆಯಿಂದ ಸಂಪೂರ್ಣ ಬೆಂಬಲ ನೀಡುತ್ತೇನೆ. ಇದು ಕೇವಲ ಮಕ್ಕಳ ಸಾಹಿತಿ, ಹಿರಿಯ ಸಾಹಿತಿಗಳಿಗೆ ಸೀಮಿತವಾಗದೇ, ಬೆಳಗಾವಿ ಜಿಲ್ಲೆಯ ಪ್ರತಿಯೊಬ್ಬ ಶಾಲಾ ಮಕ್ಕಳಿಗೂ ತಲುಪುವಂತಾಗಬೇಕು ಎಂದರು. ಮಕ್ಕಳಲ್ಲಿ ನಮ್ಮ ಅಚಾರ, ವಿಚಾರಗಳು ಹೆಚ್ಚಾಗಬೇಕು. ಜೊತೆಗೆ ಮತ್ತೊಬ್ಬರಿಗೆ ಮುಟ್ಟಬೇಕು.

ನಾಡಿನಲ್ಲಿ ಮಕ್ಕಳ ಪ್ರತಿಭೆಗೆ ಕೊರತೆಯಿಲ್ಲ. ಮಕ್ಕಳು ಸಾಹಿತ್ಯಾಭಿರುಚಿ ಬೆಳೆಸಿಕೊಂಡರೆ ಮುಂದಿನ ದಿನಗಳಲ್ಲಿ ನಾಡಿನ ಹೆಮ್ಮೆಯ ಸಾಹಿತಿಗಳಾಗುವುದರಲ್ಲಿ ಎರಡು ಮಾತಿಲ್ಲ. ಈ ಸಮ್ಮೇಳನ ಮಕ್ಕಳಲ್ಲಿ ಚೈತನ್ಯ ತುಂಬಲಿ ಎಂದು ಸಚಿವೆ ಹೇಳಿದರು.


ಉದಯವಾಹಿನಿ ಚಿತ್ರ

**ಟಿವಿ ಮೊಬೈಲ್ ಸಾಮಾಜಿಕ ಜಾಲತಾಣಗಳಿಂದ ದೂರ ಉಳಿದು ಉತ್ತಮ ಅಚಾರ–ವಿಚಾರಗಳನ್ನು ಬೆಳೆಸಿಕೊಂಡರೆ ಮಕ್ಕಳು ನಾಡಿನ ಉತ್ತಮ ಪ್ರಜೆಗಳಾಗಬಹುದು.**

**–ಲಕ್ಷ್ಮೀ ಹೆಬ್ಬಾಳ್ಕರ್, ಸಚಿವೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ**

## ಒಳ ಮೀಸಲಾತಿ ಆ. 15ರೊಳಗೆ ಬೇಡಿಕೆ ಈಡೇರದಿದ್ದರೆ ಹೋರಾಟ

• ಉದಯವಾಹಿನಿ, ಹಾವೇರಿ



ನಿವೃತ್ತ ನ್ಯಾಯಮೂರ್ತಿ ಎ.ಜೆ ಸದಾಶಿವ ಆಯೋಗದ ವರದಿಯಂತೆ ಆ.15ರೊಳಗಾಗಿ ಪರಿಶಿಷ್ಟ ಜಾತಿಯಲ್ಲಿ ಒಳ ಮೀಸಲಾತಿ ಜಾರಿಗೊಳಿಸಬೇಕು. ಇಲ್ಲದಿದ್ದರೆ, ರಾಜ್ಯವ್ಯಾಪಿ ಹೋರಾಟ ಆರಂಭಿಸಲಾಗುವುದು ಎಂದು ಲಿಡ್ಕರ್ ನಿಗಮದ ಮಾಜಿ ಉಪಾಧ್ಯಕ್ಷ ಡಿ.ಎಸ್. ಮಾಳಗಿ ಎಚ್ಚರಿಕೆ ನೀಡಿದರು.

ನಗರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಒಳ ಮೀಸಲಾತಿ ಜಾರಿಗೊಳಿಸುವಂತೆ ಸುಪ್ರೀಂಕೋರ್ಟ್ ಸಹ ನಿರ್ದೇಶನ ನೀಡಿದೆ ಅಷ್ಟಾದರೂ ಸಿಎಂ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರ ಒಳ ಮೀಸಲಾತಿ ಜಾರಿಗೊಳಿಸುತ್ತಿಲ್ಲ. ಮಾದಿಗ ಜನಾಂಗಕ್ಕೆ ಘೋರ ಅನ್ಯಾಯ ಮಾಡುತ್ತಿದೆ ಎಂದು ದೂರಿದರು. ರಾಜ್ಯದಲ್ಲಿ ಪರಿಶಿಷ್ಟ ಜಾತಿಗೆ ಇರುವ ಶೇ 15ರಷ್ಟು ಮೀಸಲಾತಿಯಲ್ಲಿ ಮಾದಾರ, ಸಮಗಾರ, ಡೋಹರ, ಮಚಗಾರ ಸಮುದಾಯದವರಿಗೆ ಶೇ 6ರಷ್ಟು ಒಳ ಮೀಸಲಾತಿ ನೀಡುವಂತೆ ಆಯೋಗ ಶಿಫಾರಸು ಮಾಡಿದೆ.

ಆದರೆ, ಸದ್ಯದ ಸರ್ಕಾರದಲ್ಲಿರುವ ಕೆಲವರು ಒಳಮೀಸಲಾತಿ ಜಾರಿಗೆ ಅಡ್ಡಗಾಲು ಹಾಕುತ್ತಿದ್ದಾರೆ. ಇಂಥವರ ಮಾತಿಗೆ ಸಿಎಂ ಸಿದ್ದರಾಮಯ್ಯ ಕಿವಿಗೂಡಬಾರದು ಎಂದರು.

ಒಳ ಮೀಸಲಾತಿಗಾಗಿ ಸುಮಾರು 40 ವರ್ಷಗಳಿಂದ ಹೋರಾಟ ನಡೆಸಲಾಗುತ್ತಿದೆ. ಕಳೆದ ಬಾರಿ ಸಿಎಂ ಆಗಿದ್ದ ಬಸವರಾಜ ಬೊಮ್ಮಾಯಿ ಅವರು ಒಳ ಮೀಸಲಾತಿಗೆ ಜಾರಿಗಾಗಿ ದಿಟ್ಟ ನಿರ್ಧಾರ ತೆಗೆದುಕೊಂಡಿದ್ದರು. ಆದರೆ, ಇಂದಿನ ಸರ್ಕಾರ ಸಮೀಕ್ಷೆ ಹೆಸರಿನಲ್ಲಿ ಕಾಲಹರಣ ಮಾಡುತ್ತಿದೆ. ಒಳ ಮೀಸಲಾತಿ ಜಾರಿ ಮಾಡುವುದಾಗಿ ಹೇಳಿದ್ದ ಸಿದ್ದರಾಮಯ್ಯ ಸಹ ಸಮಾಜಕ್ಕೆ ಅನ್ಯಾಯ ಮಾಡುತ್ತಿದ್ದಾರೆ ಎಂದು ಆಕ್ರೋಶ ಹೊರಹಾಕಿದರು.

ಸಮಾಜದ ಜನರು ಗಟಾರ ಬಳಿಯುವುದು, ನಗರ–ಗ್ರಾಮದ ಕಸಗೂಡಿಸುವುದು, ಜಾನುವಾರು ಸಾಗಿಸುವುದು, ಅಂತ್ಯಸಂಸ್ಕಾರದ ಸಂದರ್ಭದಲ್ಲಿ ಹಲಗೆ ಬಡಿಯುವುದು ಸೇರಿದಂತೆ ಹಲವು ಕಡೆಗಳಲ್ಲಿ ಕೆಲಸ ಮಾಡುತ್ತಿದ್ದಾರೆ.

ಸಮಾಜದ ಕೊಳಕು ತೊಳೆಯುತ್ತಿದ್ದಾರೆ. ಇಂಥ ಸಮಾಜವನ್ನು ಬಸವಾದಿ ಶರಣರು ಹೊಗಳಿದ್ದಾರೆ. ಆದರೆ, ಇಂದಿನ ಸರ್ಕಾರದಿಂದ ನಮ್ಮ ಸಮಾಜಕ್ಕೆ ನ್ಯಾಯ ಸಿಗುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

**ಶಾಸಕರೇ ರಾಜೀನಾಮೆ ನೀಡಿ ಹೋರಾಡಿ: ಮಾಳಗಿ**

**ಕಾಂಗ್ರೆಸ್ ನೇತೃತ್ವದ ರಾಜ್ಯ ಸರ್ಕಾರದಲ್ಲಿ ನಮ್ಮ ಸಮಾಜದ ಐವರು ಶಾಸಕರಿದ್ದಾರೆ. ಇಬ್ಬರು ಸಚಿವರಿದ್ದಾರೆ. ಇವರಿಗೆ ಸಮಾಜದ ಮೇಲೆ ಪ್ರೀತಿ ಹಾಗೂ ಗೌರವ ಇದ್ದರೆ ಒಳ ಮೀಸಲಾತಿ ಜಾರಿಗೊಳಿಸಬೇಕು. ರಾಜ್ಯ ಸರ್ಕಾರದ ಮೇಲೆ ಒತ್ತಡ ಹಾಕಬೇಕು. ಇಲ್ಲದಿದ್ದರೆ ರಾಜೀನಾಮೆ ನೀಡಿ ಒಳ ಮೀಸಲಾತಿ ಹೋರಾಟದಲ್ಲಿ ಪಾಲ್ಗೊಳ್ಳಬೇಕು ಎಂದು ಡಿ.ಎಸ್. ಮಾಳಗಿ ಖಡಕ್ ಸಂದೇಶ ರವಾನಿಸಿದರು.**

# ನೂರಾರು ಎಕರೆ ಭತ್ತ, ತೋಟಗಳು ನೀರಿನಲ್ಲಿ ಮುಳುಗಲಿವೆ

### ತುಂಗಭದ್ರಾ ನೆರೆ ಭೀತಿ! ದಿನೇ ದಿನೇ ಏರುತ್ತಿದೆ ನದಿ ನೀರಿನ ಮಟ್ಟ, ಉಕ್ಕಡಗಾತ್ರಿ ಸ್ನಾನಘಟ್ಟ ಮುಳುಗಡೆ

• ಉದಯವಾಹಿನಿ, ದಾವಣಗೆರೆ

ತುಂಗಾ ಮತ್ತು ಭದ್ರಾ ನದಿಗಳ ಜಲಾನಯನ ಪ್ರದೇಶಗಳಲ್ಲಿ ಮಳೆ ಚುರುಕಾಗಿದೆ. ಎರಡೂ ಡ್ಯಾಂಗಳು ಭರ್ತಿಯಾಗಿ ಅಪಾರ ಪ್ರಮಾಣದ ನೀರನ್ನು ನದಿಗೆ ಹರಿಸಿದ್ದು, ಈಗ ಜಿಲ್ಲೆಯ ತುಂಗಭದ್ರ ತುಂಬಿ ಹರಿಯುತ್ತಿದೆ. ನದಿ ದಂಡೆ ಮೇಲಿರುವ ಹರಿಹರ ತಾಲ್ಲೂಕಿನ ಧಾರ್ಮಿಕ ಕ್ಷೇತ್ರ ಉಕ್ಕುಡಗಾತ್ರಿಯಲ್ಲಿ ಸ್ನಾನಘಟ್ಟ, ಅಂಗಡಿ ಮುಂಗಟ್ಟುಗಳು ಮುಳುಗಿವೆ, ನೀರಿನ ಪ್ರಮಾಣ ಏರಿಕೆಯಾದರೆ ನೆರೆ ಉಕ್ಕಲಿದ್ದು ನದಿಪಾತ್ರದಲ್ಲಿ ಆತಂಕ ಆವರಿಸಿದೆ. ಗಾಜನೂರಿನ ತುಂಗಾ ಜಲಾಶಯಕ್ಕೆ 50 ಸಾವಿರ ಕ್ಯುಸೆಕ್ ಒಳ ಹರಿವಿದ್ದು, ಶನಿವಾರ ಬೆಳಗ್ಗೆ 50667 ಕ್ಯುಸೆಕ್ ನೀರನ್ನು ಹೊರ ಬಿಟ್ಟಿದ್ದು, ನದಿಗೆ 49863 ಕ್ಯುಸೆಕ್ ನೀರು ಹರಿಸಲಾಗಿದೆ. ಜಿಲ್ಲೆಯ ಜೀವನಾಡಿ ಭದ್ರಾ ಜಲಾಶಯದ ನೀರಿನ ಮಟ್ಟ 180.6 ಅಡಿ ಮುಟ್ಟಿದೆ. 21568 ಕ್ಯುಸೆಕ್ ಒಳಹರಿವು ಇದ್ದು, 21560 ಕ್ಯುಸೆಕ್ ನೀರನ್ನು ನದಿಗೆ ಹರಿಸಲಾಗಿದೆ. ಈ ಎರಡೂ ಡ್ಯಾಂನಿಂದ ನದಿಗೆ 71323 ಕ್ಯುಸೆಕ್ ನೀರು ನದಿಗೆ ಹರಿಸಲಾಗಿದೆ. ಇದರ ಜತೆ ಮಳೆ ನೀರು ಸೇರಿ ನದಿಯಲ್ಲಿ ಬೆಳಗ್ಗೆ ವೇಳೆಗೆ 75 ಸಾವಿರ ಕ್ಯುಸೆಕ್‌ಗೂ ಅಧಿಕ ನೀರು ಹರಿಯುತ್ತಿದೆ. ಹೊನ್ನಾಳಿ ಪಟ್ಟಣದ ಬಳಿಯಿರುವ ನೀರಿನ ಅಳತೆಗೋಲು ಪ್ರಕಾರ ಈಗ ನದಿಯಲ್ಲಿ 8.7 ಮೀಟರ್ ಹರಿಯುತ್ತಿದೆ.

ತುಂಗಾದಂತೆ ಭದ್ರಾ ವ್ಯಾಪ್ತಿಯಲ್ಲೂ ಮಳೆ ಜೋರಾಗಿ ಒಳಹರಿವು ಹೆಚ್ಚಾಗಿ ನದಿಗೆ ಹೆಚ್ಚಿನ ನೀರು ಹರಿಸಿದರೆ ಇಲ್ಲಿ ನೆರೆ ಉಕ್ಕಲಿದೆ, ಆದರೆ ಎರಡೂ ಡ್ಯಾಂನಲ್ಲೂ ಕರ್ವ್ ರೂಲ್ ಪಾಲನೆ ಆಗುತ್ತಿದ್ದು, 10 ಅಡಿ ಬಫರ್ ಜೋನ್ ಇರುವುದರಿಂದ ನೆರೆ ಉಕ್ಕದಂತೆ ನದಿಗೆ ನೀರು ಹರಿಸುವ ಸಾಧ್ಯತೆಯಿರುವುದರಿಂದ ಆತಂಕ ಕಡಿಮೆಯಿದೆ ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಹೇಳುತ್ತಾರೆ. ಹೊನ್ನಾಳಿ ಪಟ್ಟಣದ ಬಾಲರಾಜ್‌ಘಾಟ್ ಮುಳುಗಡೆ ಆಗಲಿದೆ.


ಉದಯವಾಹಿನಿ ಚಿತ್ರ

**ಮನೆಗಳು ಅಪಾಯಕ್ಕೆ ಸಿಲುಕಲಿವೆ**

**ಏರುತ್ತಿರುವ ನದಿ ನೀರಿನಮಟ್ಟವನ್ನು ದಿನಕ್ಕೆರಡು ಬಾರಿ ಮಾನಿಟರಿಂಗ್ ಮಾಡುತ್ತಾ ನಿಗಾ ಇಟ್ಟಿದ್ದೇವೆ, ನದಿ ಪಾತ್ರದಲ್ಲಿ ಸೂಚನೆ ನೀಡಲಾಗಿದೆ. ಕಾಳಜಿ ಕೇಂದ್ರ ತೆರೆಯಲು ಸಿದ್ಧತೆ ಮಾಡಿಕೊಳ್ಳಲಾಗಿದೆ. ಎರಡೂ ಡ್ಯಾಂನಲ್ಲೂ ಕರ್ವ್ ರೂಲ್ ಪಾಲನೆ ಮಾಡುತ್ತಿದ್ದಾರೆ, ಮಳೆ ಇನ್ನೂ ಹೆಚ್ಚಾಗಿ ನದಿಮಟ್ಟ 10.50 ಮೀಟರ್‌ಗೆ ಏರಿಕೆಯಾದರೆ ತೊಂದರೆ ಆಗಲಿದೆ.**

**–ಜಿ.ಎಂ. ಗಂಗಾಧರಸ್ವಾಮಿ, ಜಿಲ್ಲಾಧಿಕಾರಿ**

**ನದಿ ಕಣ್ತುಂಬಿಕೊಳ್ಳುವ ಜನ**

**ತುಂಬಿ ಹರಿಯುತ್ತಿರುವ ನದಿಯನ್ನು ಕಣ್ತುಂಬಿಕೊಳ್ಳಲು ಜನ ಸಾಗರವೇ ಹರಿದು ಬರುತ್ತಿದೆ. ಹರಿಹರ ಪಟ್ಟಣದ ರಾಘವೇಂದ್ರ ಮಠದ ಬಳಿ ಜನ ಸಾಗರವೇ ನೆರೆದಿತ್ತು, ಹೆದ್ದಾರಿಯಲ್ಲಿ ಓಡಾಡುವ ಕಾರು, ಲಾರಿ ಇನ್ನಿತರೆ ವಾಹನಗಳನ್ನು ನಿಲ್ಲಿಸಿ ಜನರು ನದಿಯನ್ನು ನೋಡುವ ಮತ್ತು ಸೆಲ್ಫಿ ತೆಗೆದುಕೊಳ್ಳುವುದು ಕಂಡು ಬರುತ್ತಿದೆ.**

**ಸ್ನಾನಘಟ್ಟ ಮುಳುಗಡೆ**

**ಬೆಳಗ್ಗೆ ನದಿ ನೀರಿನಮಟ್ಟ ಏರಿಕೆ ಆಗಿದ್ದರಿಂದ ಹರಿಹರ ತಾಲ್ಲೂಕಿನ ಉಕ್ಕಡಗಾತ್ರಿಯ ಶ್ರೀಕರಿಬಸವೇಶ್ವರ ಅಜ್ಜಯ್ಯನ ಧಾರ್ಮಿಕ ಕ್ಷೇತ್ರದ ಸ್ನಾನಘಟ್ಟ ಹಾಗೂ ದೇವಸ್ಥಾನ ಸಮೀಪದ ಅಂಗಡಿ ಮುಂಗಟ್ಟುಗಳು ನದಿ ನೀರಿನಲ್ಲಿ ಮುಳುಗಡೆ ಆಗಿವೆ. ನದಿ ನೀರಿನಮಟ್ಟ ಇನ್ನೂ ಏರಿಕೆಯಾದರೆ ದೇವಾಲಯದವರೆಗೂ ನದಿ ಹರಿದು ಬರಲಿದೆ. ಉಕ್ಕಡಗಾತ್ರಿ ಮತ್ತು ಪತೇಪುರ ರಸ್ತೆ ಸಂಪರ್ಕ ಕಡಿತವಾಗಿ ಉಕ್ಕಡಗಾತ್ರಿ ದ್ವೀಪ ಆಗಲಿದೆ.**

ಬಂಬೂ ಬಜಾರ್, ಸಂತೇ ಮೈದಾನ, ಅಗ್ರಹಾರದ ಸರ್ ಎಂ ವಿಶ್ವೇಶ್ವರಯ್ಯ ಶಾಲೆ, ಸ್ವಾಮಿ ವಿವೇಕಾನಂದ ಶಾಲೆಗೆ ನೀರು ನುಗ್ಗಲಿದೆ. ಸಾಸ್ವೆಹಳ್ಳಿಯ ಹೊಸಳ್ಳಿ ಮತ್ತು ಕುಲಗಟ್ಟೆ ಕೂಡ ಮುಳಗಡೆ ಆಗಲಿದೆ, ಚೀಲೂರು ಗ್ರಾಮದಲ್ಲಿನದಿ ತಟದ ಕೆಲ ಮನೆಗಳು ಅಪಾಯಕ್ಕೆ ಸಿಲುಕಲಿವೆ.

ನ್ಯಾಮತಿ ತಾಲ್ಲೂಕಿನ ಗೋವಿನಕೋವಿ, ಕುರುವಾ ಗ್ರಾಮದಲ್ಲಿ ಜಮೀನು ಮುಳುಗಡೆ ಆಗಲಿದೆ. ಹರಿಹರ ಪಟ್ಟಣದ ಎಪಿಎಂಸಿ ಹಿಂಭಾಗದ ಗಂಗಾನಗರ, ಕೈಲಾಸ ನಗರ, ಮೆಟ್ಟಿಲು ಹೊಳೆಗೆ ನೀರು ನುಗ್ಗಲಿದೆ. ಸಾರಥಿ–ಬಿದರಿ ನಡುವಿನ ಸಂಪರ್ಕ ಕಡಿತ ಆಗಲಿದೆ. ಈಗ ಸೇತುವೆ ಆಗಿದ್ದು ವಾಹನಗಳು ಓಡಾಡುತ್ತಿದ್ದು, ಇನ್ನೂ ಪೂರ್ಣಗೊಳ್ಳಬೇಕಾಗುತ್ತದೆ. ಇದರ ಜತೆ ನೂರಾರು ಎಕರೆ ಭತ್ತ, ತೋಟಗಳು ಕೂಡ ನೀರಿನಲ್ಲಿ ಮುಳುಗಲಿವೆ.

## ಮುಖ್ಯಮಂತ್ರಿ ಆಗೋಕೆ ಗುರು ಬಲ ಬೇಕು: ಸತೀಶ ಜಾರಕಿಹೊಳಿ

• ಉದಯವಾಹಿನಿ, ಹುಬ್ಬಳ್ಳಿ

ಮುಂದಿನ ಸಿಎಂ ಎಂದು ಎಲ್ಲಾ ಕಡೆ ಕೂಗುತ್ತಾರೆ. ಆದರೆ, ಅದಕ್ಕೆ ಗುರು ಬಲ ಕೂಡಿಬರಬೇಕು. ಶನಿ ಆ ಕಡೆಯಿಂದ ಈ ಕಡೆಗೆ ಹೋಗಬೇಕು. ಕೆಪಿಸಿಸಿ ಅಧ್ಯಕ್ಷ ಆಗುವುದಕ್ಕೂ ಬಹಳಷ್ಟು ಜನರು ತಯಾರಿದ್ದಾರೆ ಎಂದು ಸಚಿವ ಸತೀಶ ಜಾರಕಿಹೊಳಿ ಹೇಳಿದರು. ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 30 ವರ್ಷದಲ್ಲಿ ಸಿದ್ದರಾಮಯ್ಯ ಅವರು ರಾಜ್ಯದ ಸುಧಾರಣೆ ಮಾಡಿದ್ದಾರೆ.

ಆದರೆ, ಅವರ ವ್ಯಕ್ತಿತ್ವ ಅವರಿಗೆ, ಇವರದ್ದು ಇವರಿಗೆ ಇರುತ್ತದೆ ಎಂದರು. ರಣದೀಪ್ ಸುರ್ಜೆವಾಲಾ ಅವರೊಂದಿಗೆ ಕೆ.ಪಿ.ಸಿ.ಸಿ. ಅಧ್ಯಕ್ಷರ ವಿಚಾರವಾಗಿ ಚರ್ಚೆ ಆಗಿಲ್ಲ. 'ಸೆಪ್ಟೆಂಬರ್ ಕ್ರಾಂತಿ' ಬಗ್ಗೆಯೂ ಗೊತ್ತಿಲ್ಲ. ಅದೆನ್ನಲ್ಲ ಸಚಿವ ಕೆ.ಎನ್.ರಾಜಣ್ಣ ಅವರೇ ಹೇಳಬೇಕು ಎಂದರು.

ಆರ್‌ಎಸ್‌ಎಸ್, ಬಿಜೆಪಿ ಇಲ್ಲದಿದ್ದರೆ ಹಿಂದುತ್ವ ಉಳಿಯುತ್ತಿರಲಿಲ್ಲ ಎಂಬ ಬೆಳಗಾವಿ ಸಂಸದ ಜಗದೀಶ ಶೆಟ್ಟರ್ ಹೇಳಿಕೆ ಕುರಿತು ಪ್ರತಿಕ್ರಿಯಿಸಿ, 'ಆರ್‌ಎಸ್‌ಎಸ್ ಇರದ ಕಾಲದಲ್ಲಿ ಹಿಂದೂ ರಾಷ್ಟ್ರ ಇರಲಿಲ್ಲವಾ? ಮತದಾರರನ್ನು ಹೆದರಿಸೋಕೆ ಬಿಜೆಪಿಯವರು ಹೀಗೆಲ್ಲ ಹೇಳುತ್ತಾರೆ ಎಂದರು. ಯೂರಿಯಾ ಗೊಬ್ಬರ ಕೊರತೆ ಇದೆ. ಇದು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಜವಾಬ್ದಾರಿ ಆಗಿದೆ. ಎರಡೂ ಸರ್ಕಾರಗಳು ಸೇರಿ ಸಮಸ್ಯೆ ಪರಿಹಾರ ಮಾಡಬೇಕು ಎಂದು ಹೇಳಿದರು.

**ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ರಾಹುಲ್ ಗಾಂಧಿ ಅವರನ್ನು ಭೇಟಿ ಮಾಡಲು ದೆಹಲಿಗೆ ಹೋಗಿದ್ದಾರೆ. ಅಲ್ಲಿ ಏನಾದರೂ ಕೆಲಸ ಇರುತ್ತದೆ. ಸಚಿವ ಸಂಪುಟ ವಿಸ್ತರಣೆ ಬಗ್ಗೆ ಅವರೇ ಹೇಳಬೇಕು. ನಿಗಮ–ಮಂಡಳಿಗೆ ನೇಮಕ ವಿಚಾರ ಅಂತಿಮವಾಗಲಿದೆ' ಎಂದರು ತಿಳಿಸಿದರು.**



### ಅಮೆರಿಕದ ಡೆನ್ವರ್‌ನಲ್ಲಿ ವಿಮಾನ ಟೇಕ್‌ಆಫ್ ವೇಳೆ ಲ್ಯಾಂಡಿಂಗ್ ಗೇರ್ ವೈಫಲ್ಯ: ಪ್ರಯಾಣಿಕರು ಸ್ವಲ್ಪದರಲ್ಲೇ ಪಾರು

# ಪ್ರಯಾಣಿಕರನ್ನು ತೆರವುಗೊಳಿಸುತ್ತಿರುವ ದೃಶ್ಯ ವೈರಲ್




**ಅಮೆರಿಕ:** ಅಮೆರಿಕದ ಡೆನ್ವರ್ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಅಮೆರಿಕನ್ ಏರ್ಲೈನ್ಸ್ ವಿಮಾನವು ಟೇಕ್‌ಆಫ್ ಆಗುವ ಸಮಯದಲ್ಲಿ ಲ್ಯಾಂಡಿಂಗ್ ಗೇರ್ ವೈಫಲ್ಯದ ಕಾರಣದಿಂದಾಗಿ ತನ್ನ ಹಾರಾಟವನ್ನು ರದ್ದುಗೊಳಿಸಿದ್ದು, ಸಂಭವನೀಯ ಅಪಾಯವೊಂದು ಸ್ವಲ್ಪದರಲ್ಲೇ ತಪ್ಪಿದೆ. ಈ ಘಟನೆಯಿಂದಾಗಿ ಕನಿಷ್ಠ ಒಬ್ಬ ಪ್ರಯಾಣಿಕರಿಗೆ ಗಾಯಗಳಾಗಿದ್ದು, ವಿಮಾನದಿಂದ ತುರ್ತು ಸ್ಥಳಾಂತರಕ್ಕೆ ಕಾರಣವಾಯಿತು. ವಿಮಾನದ ತುರ್ತು ಬಾಗಿಲಿನ ಮೂಲಕ ಪ್ರಯಾಣಿಕರನ್ನು ತೆರವುಗೊಳಿಸುತ್ತಿರುವ ದೃಶ್ಯಗಳು ವೈರಲ್ ಆಗಿದ್ದು, ವಿಮಾನದ ಸುತ್ತಮುತ್ತ ಹೊಗೆ ಆವರಿಸಿರುವುದನ್ನು ಕೂಡ ವಿಡಿಯೋದಲ್ಲಿ ಕಾಣಬಹುದಾಗಿದೆ. ಸಾಮಾಜಿಕ ಮಾಧ್ಯಮಗಳಲ್ಲಿ ಹಂಚಲಾದ ವಿಡಿಯೋಗಳಲ್ಲಿ ಪ್ರಯಾಣಿಕರು ತುರ್ತು ಸ್ಲೈಡ್‌ಗಳ ಮೂಲಕ ವಿಮಾನದಿಂದ ಹೊರಬರುತ್ತಿರುವುದು ಮತ್ತು ವಿಮಾನದ ಎಡಭಾಗದ ಹಿಂಭಾಗದಿಂದ ದಟ್ಟವಾದ ಕಪ್ಪು ಹೊಗೆ ಮತ್ತು ಬೆಂಕಿ ಹೊರಹೊಮ್ಮಿರುವುದು ಕಂಡುಬಂದಿದೆ. ವಿಮಾನದ ಲ್ಯಾಂಡಿಂಗ್ ಗೇರ್‌ನಲ್ಲಿ ಬೆಂಕಿ ಹೊತ್ತಿಕೊಂಡಿರುವುದು ಸಹ ವಿಡಿಯೋದಲ್ಲಿ ಸ್ಪಷ್ಟವಾಗಿತ್ತು.

### ತುರ್ತು ಸ್ಥಳಾಂತರಕ್ಕೆ ಕಾರಣ

**ಘಟನೆ ನಡೆದಿದ್ದು ಹೇಗೆ?:** AA-3023, ಬೋಯಿಂಗ್ 737 ಮ್ಯಾಕ್ಸ್ 8 ವಿಮಾನವಾಗಿದ್ದು, ಮಿಯಾಮಿ ಕಡೆಗೆ ಪ್ರಯಾಣಿಸುತ್ತಿತ್ತು. ವಿಮಾನದ ಟೈರ್‌ನಲ್ಲಿ ನಿರ್ವಹಣೆ ಸಮಸ್ಯೆಯಾಗಿತ್ತು ಎಂದು ವಿಮಾನಯಾನ ಸಂಸ್ಥೆ ನಂತರ ಸ್ಪಷ್ಟಪಡಿಸಿದೆ. ಘಟನೆಯ ನಂತರ, 173 ಪ್ರಯಾಣಿಕರು ಮತ್ತು ಎಲ್ಲಾ ಸಿಬ್ಬಂದಿಯನ್ನು ಸುರಕ್ಷಿತವಾಗಿ ಸ್ಥಳಾಂತರಿಸಲಾಯಿತು.

ಒಬ್ಬ ವ್ಯಕ್ತಿಗೆ ಸಣ್ಣಪುಟ್ಟ ಗಾಯಗಳಾಗಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಐದು ಜನರನ್ನು ಸ್ಥಳದಲ್ಲೇ ಪರೀಕ್ಷಿಸಲಾಯಿತು, ಒಬ್ಬರನ್ನು ಗೇಟ್‌ನಲ್ಲಿ ಪರೀಕ್ಷಿಸಿ ಆಸ್ಪತ್ರೆಗೆ ಸಾಗಿಸಲಾಯಿತು ಎಂದು ಡೆನ್ವರ್ ವಿಮಾನ ನಿಲ್ದಾಣದ ಹೇಳಿಕೆಯಲ್ಲಿ ತಿಳಿಸಲಾಗಿದೆ. ಡೆನ್ವರ್ ಅಗ್ನಿಶಾಮಕ ದಳವು ಸಂಜೆ 5:10ರ ಸುಮಾರಿಗೆ ಬೆಂಕಿಯನ್ನು ನಂದಿಸಲಾಗಿದೆ ಎಂದು ಘೋಷಿಸಿತು. ವಿಮಾನಯಾನ ಸಂಸ್ಥೆಯು, ಎಲ್ಲಾ ಗ್ರಾಹಕರು ಮತ್ತು ಸಿಬ್ಬಂದಿ ಸುರಕ್ಷಿತವಾಗಿ ಇಳಿದಿದ್ದಾರೆ ಮತ್ತು ವಿಮಾನವನ್ನು ನಮ್ಮ ನಿರ್ವಹಣಾ ತಂಡದಿಂದ ಪರೀಕ್ಷಿಸಲು ಸೇವೆಯಿಂದ ಹೊರಗಿಡಲಾಗಿದೆ ಎಂದು ಹೇಳಿಕೆಯಲ್ಲಿ ತಿಳಿಸಿದೆ.

ಕಳೆದ ಐದು ತಿಂಗಳಲ್ಲಿ ಡೆನ್ವರ್ ವಿಮಾನ ನಿಲ್ದಾಣದಲ್ಲಿ ವಿಮಾನದಲ್ಲಿ ಬೆಂಕಿ ಕಾಣಿಸಿಕೊಂಡ ಎರಡನೇ ಘಟನೆ ಇದಾಗಿದೆ. ಕಳೆದ ಮಾರ್ಚ್‌ನಲ್ಲಿ, ಡಲ್ಲಾಸ್ ಕಡೆಗೆ ಹೊರಟಿದ್ದ ಅಮೆರಿಕನ್ ಏರ್ಲೈನ್ಸ್ ವಿಮಾನ – ಬೋಯಿಂಗ್ 737-800 – ವಿಮಾನ ನಿಲ್ದಾಣದಲ್ಲಿ ಬೆಂಕಿ ಕಾಣಿಸಿಕೊಂಡಿತ್ತು. ಆ ಘಟನೆಯಲ್ಲಿ 172 ಗ್ರಾಹಕರು ಮತ್ತು ಆರು ಸಿಬ್ಬಂದಿಯನ್ನು ಸ್ಥಳಾಂತರಿಸಲಾಗಿತ್ತು. FAA ಈ ಘಟನೆಯ ಬಗ್ಗೆ ತನಿಖೆ ನಡೆಸುತ್ತಿದೆ.

**ಪ್ರಯಾಣಿಕರು ಇಳಿಯುತ್ತಿರುವ ವಿಡಿಯೋ ವೈರಲ್**

ಏತನ್ಮಧ್ಯೆ, ವಿಮಾನದಿಂದ ಹೊರತೆಗೆಯಲಾದ ಪ್ರಯಾಣಿಕರಲ್ಲಿ ಒಬ್ಬರು ಅಂತಹ ಮಾರಣಾಂತಿಕ ಪರಿಸ್ಥಿತಿಯಲ್ಲಿ ತನ್ನ ಮಗುವಿನ ಬದಲಾಗಿ ತನ್ನ ಲಗೇಜಿಗೆ ಆದ್ಯತೆ ನೀಡಿದ್ದಕ್ಕಾಗಿ ಟೀಕೆಗಳನ್ನು ಎದುರಿಸುತ್ತಿದ್ದಾರೆ. ವೀಡಿಯೊದಲ್ಲಿ ಆತ ತನ್ನ ಮಗುವನ್ನು ಒಂದು ಕೈಯಲ್ಲಿ ಹಿಡಿದುಕೊಂಡು ಕುತ್ತಿಗೆಗೆ ಮತ್ತು ಇನ್ನೊಂದು ಕೈಯಲ್ಲಿ ಸಾಮಾನುಗಳನ್ನು ಹಿಡಿದುಕೊಂಡು ವಿಮಾನದಿಂದ ಕೆಳಕ್ಕೆ ಜಾರುತ್ತಿರುವುದು ಕಂಡುಬಂದಿದೆ. ಸ್ಲೈಡ್ನಿಂದ ಹೊರಬಂದ ನಂತರ ತನ್ನನ್ನು ತಾನು ಸಮತೋಲನಗೊಳಿಸಲು ವಿಫಲವಾದ ಆತ ತನ್ನ ಮಗುವಿನ ಮೇಲೆ ಬಿದ್ದಿದ್ದಾನೆ.

ಮಿಯಾಮಿ ಕಡೆಗೆ ಹೊರಟಿದ್ದ ಅಮೆರಿಕನ್ ಏರ್ಲೈನ್ಸ್ ವಿಮಾನ ಸಂಖ್ಯೆ 3023, ಸ್ಥಳೀಯ ಸಮಯ ಮಧ್ಯಾಹ್ನ 2:45 ಕ್ಕೆ ತಾಂತ್ರಿಕ ತೊಂದರೆಗಳನ್ನು ಎದುರಿಸಿತು ಎಂದು ಫೆಡರಲ್ ಏವಿಯೇಷನ್ ಅಡ್ಮಿನಿಸ್ಟ್ರೇಷನ್ ದೃಢಪಡಿಸಿದೆ ಎಂದು ನ್ಯೂಯಾರ್ಕ್ ಪೋಸ್ಟ್ ವರದಿ ಮಾಡಿದೆ. ಇತ್ತೀಚೆಗೆ ರಷ್ಯಾದ ವಿಮಾನವೊಂದು ಪತನವಾಗಿ ಅದರಲ್ಲಿದ್ದ ಎಲ್ಲಾ ಪ್ರಯಾಣಿಕರು ಸಾವನ್ನಪ್ಪಿದ ಕೆಲವೇ ದಿನಗಳ ಅಂತರದಲ್ಲೇ ಈ ಘಟನೆ ವರದಿ ಯಾಗಿದೆ. ಅದೃಷ್ಟವಶಾತ್ ಪ್ರಾಣಾಪಾಯ ಸಂಭವಿಸಿಲ್ಲ.

## ಕುಡುಕ ಗಂಡನ ಕಾಟ, ಬಡತನಕ್ಕೆ ಬೇಸತ್ತು 3 ಹೆಣ್ಣು ಮಕ್ಕಳಿಗೆ ವಿಷವಿಟ್ಟು ಕೊಂದ ತಾಯಿ

**ಥಾಣೆ:** ಕೌಟುಂಬಿಕ ಸಮಸ್ಯೆಗಳಿಂದ ನೊಂದ ಮಹಿಳೆ ತಾನು ಹೆತ್ತ ಮೂವರು ಹೆಣ್ಣು ಮಕ್ಕಳಿಗೆ ವಿಷಪ್ರಾಶನ ಮಾಡಿ ಕೊಲೆ ಮಾಡಿರುವ ಘಟನೆ ನಗರದ ಶಹಾಪುರ ಪ್ರದೇಶದ ಅಸ್ನೋಲಿ ಗ್ರಾಮದಲ್ಲಿ ನಡೆದಿದೆ. ಸಂಧ್ಯಾ ಸಂದೀಪ್ ಬೆರೆ(27) ಎಂಬಾಕೆಯನ್ನು ಪೊಲೀಸರು ಬಂಧಿಸಿದ್ದಾರೆ. ಆಹಾರದಲ್ಲಿ ಕೀಟನಾಶಕವನ್ನು ಬೆರೆಸಿ ತನ್ನ 5, 8 ಮತ್ತು 10 ವರ್ಷದ ಹೆಣ್ಣುಮಕ್ಕಳಿಗೆ ತಿನ್ನಿಸಿದ್ದಾರೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.ಮಕ್ಕಳಿಗೆ ವಾಂತಿ ಮತ್ತು ತಲೆತಿರುಗುವಿಕೆ ಸೇರಿದಂತೆ ಆರೋಗ್ಯ ಸಮಸ್ಯೆಗಳು ಕಾಣಿಸಿಕೊಂಡು ನಂತರ ಅವರನ್ನು ಸ್ಥಳೀಯ ಆಸ್ಪತ್ರೆಗೆ ಕರೆದೊಯ್ಯಲಾಯಿತು. ಅವರ ಸ್ಥಿತಿ ಹದಗೆಟ್ಟಂತೆ, ಅವರಲ್ಲಿ ಇಬ್ಬರು ನಂತರ ಮುಂಬೈನ ಆಸ್ಪತ್ರೆಗೆ ದಾಖಲಿಸಲಾಯಿತು, ಅಲ್ಲಿ ಅವರು ಜುಲೈ 24 ಮತ್ತು ಜುಲೈ 25 ರಂದು ನಿಧನರಾದರು. ಮತ್ತೊಬ್ಬ ಬಾಲಕಿಯನ್ನು ನಾಸಿಕ್‌ನ ಆಸ್ಪತ್ರೆಗೆ ಸ್ಥಳಾಂತರಿಸಲಾಯಿತು. ಅಲ್ಲಿ ಅವರು ಜುಲೈ 24 ರಂದು ಸಾವನ್ನಪ್ಪಿದರು ಎಂದು ಅಧಿಕಾರಿ ತಿಳಿಸಿದ್ದಾರೆ.

ಆರಂಭದಲ್ಲಿ, ಖಿನವ್‌ಲಿ ಪೊಲೀಸರು ಆಕಸಿಕ ಸಾವಿನ ಪ್ರಕರಣವನ್ನು ದಾಖಲಿಸಿದ್ದರು. ಆದಾಗ್ಯೂ, ಕಳೆದ ರಾತ್ರಿ ಶವಪರೀಕ್ಷೆ ವರದಿಯಲ್ಲಿ ಮಕ್ಕಳ ದೇಹದಲ್ಲಿ ವಿಷದ ಅಂಶ ಇರುವುದನ್ನು ದೃಢಪಡಿಸಿದೆ ಎಂದು ಪೊಲೀಸರು ತಿಳಿಸಿದ್ದಾರೆ. ನಿರ್ಣಾಯಕ ಸಾಕ್ಷ್ಯಗಳ ಆಧಾರದ ಮೇಲೆ ತ್ವರಿತ ಕಾರ್ಯನಿರ್ವಹಿಸಿ ಪೊಲೀಸರು ಮಕ್ಕಳ ತಾಯಿಯನ್ನು ಭಾನುವಾರ ಮುಂಜಾನೆ 2 ಗಂಟೆ ಸುಮಾರಿಗೆ ಅವರನ್ನು ಬಂಧಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ. ಆರೋಪಿತೆಗೆ ತನ್ನ ಗಂಡನ ಮದ್ಯಪಾನ ಚಟ ಸೇರಿದಂತೆ ಕೌಟುಂಬಿಕ ಸಮಸ್ಯೆಕಾಡಿತ್ತು ಇದರಿಂದ ಅವಳು ತನ್ನ ಗಂಡನಿಂದ ಬೇರ್ಪಟ್ಟಿದ್ದಳು ಮತ್ತು ತನ್ನ ಮೂವರು ಹೆಣ್ಣುಮಕ್ಕಳನ್ನು ನೋಡಿಕೊಳ್ಳಲು ಹೆಣಗಾಡುತ್ತಿದ್ದಳು ಎಂದು ಅವರು ಹೇಳಿದರು. ಆಕೆಯನ್ನು ವಿಚಾರಣೆಗಾಗಿ ಆರಂಭದಲ್ಲಿ ವಶಕ್ಕೆ ಪಡೆಯಲಾಯಿತು ಮತ್ತು ಶವಪರೀಕ್ಷೆಯ ವರದಿಗಳು ಬಂದ ನಂತರ ಬಂಧಿಸಲಾಯಿತು ಎಂದು ಪೊಲೀಸರು ತಿಳಿಸಿದ್ದಾರೆ.ಪ್ರಕರಣದ ಕುರಿತು ಹೆಚ್ಚಿನ ತನಿಖೆ ನಡೆಯುತ್ತಿದೆ.

## ದೇಶದ ಅತ್ಯಂತ ಬಡ ರೈತ; ವಾರ್ಷಿಕ ಆದಾಯ 3 ರೂ.

### ತಹಶೀಲ್ದಾರ್ ಕಾಗುಣಿತ ದೋಷದಿಂದ ಎಡವಟ್ಟು; ನೆಟ್ಟಿಗರ ತರಾಟೆ

**ಮಧ್ಯಪ್ರದೇಶ:** ದೇಶದ ಅತ್ಯಂತ ಕಡು ಬಡವನ ವಾರ್ಷಿಕ ಆದಾಯ ಎಷ್ಟಿರಬಹುದು? 1000 ರೂ, 500 ರೂ, 100 ರೂ.! ಇದಾವುದೂ ಅಲ್ಲ. ಒಬ್ಬ ವ್ಯಕ್ತಿಯ ವಾರ್ಷಿಕ ಆದಾಯ ಕೇವಲ 3 ರೂ. ಎಂದರೆ ನೀವು ನಂಬುತ್ತೀರಾ? ಹೌದು, ಈ ಸುದ್ದಿಯನ್ನು ನೀವು ನಂಬಲೇ ಬೇಕು. ಮಧ್ಯ ಪ್ರದೇಶದ ಸಾತ್ನಾ ಜಿಲ್ಲೆಯ ರೈತರೊಬ್ಬನಿಗೆ ಆತನ ವಾರ್ಷಿಕ ಆದಾಯ 3 ರೂ. ಎಂದು ಪ್ರಮಾಣಪತ್ರವನ್ನು ನೀಡಲಾಗಿದೆ. ಈ ಪ್ರಮಾಣಪತ್ರ ವೀಗ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದ್ದು, ಸರ್ಕಾರಿ ವ್ಯವಸ್ಥೆಯನ್ನು ಅಣಕಿಸುವಂತಿದೆ. ಇಂಟರ್ನೆಟ್ ಬಳಕೆದಾರರು ಈ ರೈತನನ್ನು ಭಾರತದ ಅತಿ ಬಡ ವ್ಯಕ್ತಿ ಎಂದು ಕರೆದಿದ್ದಾರೆ. ಈ ಘಟನೆ ಅಧಿಕಾರಿಗಳಿಗೆ ಮುಜುಗರ ತಂದಿದ್ದು, ಇದು ಕಾಗುಣಿತ ದೋಷ ಎಂದು ಸ್ಪಷ್ಟಪಡಿಸಿದ್ದಾರೆ. ದೋಷವನ್ನು ಸರಿಪಡಿಸಿ ಹೊಡ ಪ್ರಮಾಣಪತ್ರವನ್ನು ಸಹ ನೀಡಲಾಗಿದೆ.

**ತಹಶೀಲ್ದಾರ್‌ರಿಂದ ಕಾಗುಣಿತ ದೋಷ:** ಸತ್ನಾ ಜಿಲ್ಲೆಯ ಕೋಠಿ ತಹಸಿಲ್ ಅಡಿಯಲ್ಲಿರುವ ನಾಯಾಗಾಂವ್ ಗ್ರಾಮದ ನಿವಾಸಿ ರಾಮಸ್ವರೂಪ್ (45) ಅವರಿಗೆ ನೀಡಲಾದ ಆದಾಯ ಪ್ರಮಾಣಪತ್ರದ ಫೋಟೋ ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆಗಿದೆ. ತಹಶೀಲ್ದಾರ್ ಸಹಿಯೊಂದಿಗೆ ಜುಲೈ 22 ರಂದು ತಹಶೀಲ್ದಾರ್ ಸೌರಭ್ ದ್ವಿವೇದಿ ಅವರ ಸಹಿಯೊಂದಿಗೆ ನೀಡಲಾದ ಈ ದಾಖಲೆ ವ್ಯಾಪಕವಾಗಿ ಹಂಚಿಕೆಯಾಗಿದ್ದು, ನೆಟ್ಟಿಗರು ರಾಮಸ್ವರೂಪ್ ಅವರನ್ನು ದೇಶದ ಅತಿ ಬಡ ವ್ಯಕ್ತಿ ಎಂದು ಕರೆದಿದ್ದಾರೆ. ಮೂಲ ಪ್ರಮಾಣಪತ್ರದ ಪ್ರಕಾರ, ರಾಮಸ್ವರೂಪ್ ಅವರು ತಿಂಗಳಿಗೆ ಕೇವಲ 25 ಪೈಸೆ ಸಂಪಾದಿಸುತ್ತಿದ್ದಾರೆ ಎಂದು ತಿಳಿದುಬಂದಿತ್ತು. ಇದು ಎಲ್ಲರನ್ನು ಅಚ್ಚರಿಗೆ ದೂಡಿತ್ತು. ಈ ಘಟನೆ ವೈರಲ್ ಆದ ಕೂಡಲೇ ಅಧಿಕಾರಿಗಳು ತಕ್ಷಣ ಕಾರ್ಯಪ್ರವೃತ್ತರಾದರು. ಜು. 25ರಂದು ರಾಮಸ್ವರೂಪ್‌ಗೆ ಹೊಸ ಪ್ರಮಾಣಪತ್ರವನ್ನು ನೀಡಲಾಗಿದೆ. ರೈತನ ವಾರ್ಷಿಕ ಆದಾಯವನ್ನು 30,000 ರೂ.ಗೆ ಅಂದರೆ ತಿಂಗಳಿಗೆ 2,500ಗೆ ಹೆಚ್ಚಿಸಲಾಗಿದೆ. ಇದು ಕಾಗುಣಿತ ದೋಷವಾಗಿದ್ದು, ಅದನ್ನು ಸರಿಪಡಿಸಲಾಗಿದೆ.



ಹೊಸ ಆದಾಯ ಪ್ರಮಾಣಪತ್ರವನ್ನು ನೀಡಲಾಗಿದೆ ಎಂದು ತಹಸೀಲ್ದಾರ್ ದ್ವಿವೇದಿ ಸ್ಪಷ್ಟಪಡಿಸಿದ್ದಾರೆ. ಈ ಘಟನೆಯು ಸರ್ಕಾರಿ ದಾಖಲಾತಿಗಳ ನಿಖರತೆ ಕುರಿತ ಚರ್ಚೆಯನ್ನು ಮತ್ತೆ ಹುಟ್ಟುಹಾಕಿದೆ ಮತ್ತು ಕಲ್ಯಾಣ ಸಂಬಂಧಿತ ದಾಖಲೆಗಳಲ್ಲಿನ ಅಧಿಕಾರಶಾಹಿ ಮೇಲ್ವಿಚಾರಣೆ ಬಗ್ಗೆ ಪ್ರಶ್ನೆಗಳನ್ನು ಎತ್ತಿದೆ.


**ಕಾಂಗ್ರೆಸ್‌ನಿಂದ ಸರ್ಕಾರಕ್ಕೆ ತರಾಟೆ**

ಮಧ್ಯಪ್ರದೇಶ ಕಾಂಗ್ರೆಸ್ ಈ ಎಡವಟ್ಟನ್ನು ತೀವ್ರವಾಗಿ ಟೀಕಿಸಿದೆ. ಮೂಲ ಪ್ರಮಾಣಪತ್ರವನ್ನು X(ಟ್ವಿಟರ್)ನಲ್ಲಿ ಹಂಚಿಕೊಂಡಿದೆ. ಮಧ್ಯಪ್ರದೇಶ ಮುಖ್ಯಮಂತ್ರಿ ಮೋಹನ್ ಯಾದವ್ ಅವರ ಆಡಳಿತದಲ್ಲಿ, ನಾವು ಭಾರತದ ಅತಿ ಬಡ ವ್ಯಕ್ತಿಯನ್ನು ಕಂಡುಕೊಂಡಿದ್ದೇವೆ. ವಾರ್ಷಿಕ ಆದಾಯ: ಕೇವಲ 3 ರೂ. ಎಂದು ಪಕ್ಷವು ತನ್ನ ಪೋಸ್ಟ್‌ನಲ್ಲಿ ಹೇಳಿಕೊಂಡಿದೆ. ಇದು ಆಘಾತಕಾರಿಯಲ್ಲವೇ? ಜನರನ್ನು ಬಡವರನ್ನಾಗಿ ಮಾಡುವ ಯೋಜನೆ ಇದೆಯೇ? ಏಕೆಂದರೆ ಈಗ ಕುರ್ಚಿ ಕೂಡ ಕಮಿಷನ್ ತಿನ್ನುತ್ತದೆ ಎಂದು ಅದು ಆರೋಪಿಸಿದೆ.

## ಮತಾಂತರವಾಗದೇ ನಡೆದ ಅಂತರಧರ್ಮೀಯ ವಿವಾಹಗಳು ಕಾನೂನುಬಾಹಿರ

**ಲಖನೌ:** ಮತಾಂತರವಿಲ್ಲದೆಯೇ ಅನ್ಯ ಧರ್ಮಗಳನ್ನು ಅನುಸರಿಸುವ ಜನರ ನಡುವಿನ ವಿವಾಹವನ್ನು ಕಾನೂನುಬಾಹಿರ ಎಂದು ಪರಿಗಣಿಸಲಾಗುತ್ತದೆ ಎಂದು ಅಲಹಾಬಾದ್ ಹೈಕೋರ್ಟ್ ಹೇಳಿದೆ. ಆರ್ಯ ಸಮಾಜದಂತಹ ಸಂಸ್ಥೆಗಳು ವಿವಾಹ ಪ್ರಮಾಣಪತ್ರಗಳನ್ನು ನೀಡುವ ಮತ್ತು ವಿವಾಹ ವಿಧಿವಿಧಾನದ ನಿಗದಿತ ಶುಲ್ಕ ತೆಗೆದುಕೊಂಡು ಯಾರಿಗಾದರೂ ವಿವಾಹ ಪ್ರಮಾಣಪತ್ರಗಳನ್ನು ನೀಡುವ ಸಂಸ್ಥೆಗಳನ್ನು ಗಮನದಲ್ಲಿಟ್ಟುಕೊಂಡು ಈ ನಿರ್ಧಾರವನ್ನು ನೀಡಲಾಗಿದೆ. ಅಂದರೆ, ಅಂತಹ ವಿವಾಹಗಳು ಕಾನೂನಿನ ಉಲ್ಲಂಘನೆಯಾಗಿದೆ, ಎಂದು ಹೈಕೋರ್ಟ್ ಸ್ಪಷ್ಟನೆ ನೀಡಿದೆ.

**ಮತಾಂತರವಿಲ್ಲದೆ ನಡೆದ ಮದುವೆ ಕಾನೂನುಬಾಹಿರ:** ಉತ್ತರ ಪ್ರದೇಶದ ಮಹಾರಾಜ್‌ಗಂಜ್‌ನಲ್ಲಿರುವ ಸೋನು ಅಲಿಯಾಸ್ ಸಹನೂರ್ ವಿರುದ್ಧ ಅಪಹರಣ, ಅತ್ಯಾಚಾರ ಮತ್ತು ಪೋಕ್ಸೊ ಕಾಯಿದೆ ಅಡಿಯಲ್ಲಿಎಫ್‌ಐಆರ್ ದಾಖಲಿಸಲಾಗಿದೆ.



ವಿಚಾರಣಾ ಪ್ರಕ್ರಿಯೆಗಳನ್ನು ರದ್ದುಗೊಳಿಸುವಂತೆ ಒತ್ತಾಯಿಸಿ ಹೈಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸಲಾಗಿತ್ತು. ಇದರಲ್ಲಿ, ಅರ್ಜಿದಾರರು ಆರ್ಯ ಸಮಾಜದಲ್ಲಿ ವಿವಾಹವಾದವರಾಗಿದ್ದಾರೆ. ಸದ್ಯಕ್ಕೆ ಅವರು ವಯಸ್ಕರಾಗಿರುವುದರಿಂದ ಅವರ ವಿರುದ್ಧದ ಕ್ರಿಮಿನಲ್ ಮೊಕದ್ದಮೆಗಳನ್ನು ರದ್ದುಗೊಳಿಸಬೇಕು, ಎಂದು ವಾದಿಸಲಾಗಿತ್ತು. ಅದೇ ಸಮಯದಲ್ಲಿ, ಸರಕಾರಿ ವಕೀಲರು ಈ ವಾದವನ್ನು ವಿರೋಧಿಸಿದ್ದು, ಮದುವೆಯಾದ ವರ, ವಧು ಬೇರೆ ಧರ್ಮಗಳಿಗೆ ಸೇರಿದವರು. ಮತಾಂತರವಿಲ್ಲದೆ ನಡೆದ ಮದುವೆ ಕಾನೂನುಬಾಹಿರ, ಎಂದು ಹೇಳಿದರು.

**ವರದಿ ಅಫಿಡವಿಟ್ ಜತೆಗೆ ಸಲ್ಲಿಸಲು ನ್ಯಾಯಾಲಯ ನಿರ್ದೇಶನ**

ನ್ಯಾ.ಪ್ರಶಾಂತ್ ಕುಮಾರ್ ಅವರಿದ್ದ ಏಕಸದಸ್ಯ ಪೀಠವು, ಅಂತರ್‌ಧರ್ಮದ ಜನರಿಗೆ ಅಥವಾ ಅಪ್ರಾಪ್ತ ಜೋಡಿಗೆ ವಿವಾಹ ಪ್ರಮಾಣಪತ್ರಗಳನ್ನು ನೀಡುತ್ತಿರುವ ಆರ್ಯ ಸಮಾಜ ಸಂಘಗಳನ್ನು ಡಿಸಿಪಿ ಮಟ್ಟದ ಐಪಿಎಸ್ ಅಧಿಕಾರಿಯಿಂದ ತನಿಖೆ ಮಾಡುವಂತೆ ರಾಜ್ಯದ ಗೃಹ ಕಾರ್ಯದರ್ಶಿಗೆ ಆದೇಶಿಸಿದೆ. ಈ ಆದೇಶದ ಅನುಸರಣಾ ವರದಿಯನ್ನು ಅಫಿಡವಿಟ್ ಜತೆಗೆ ಸಲ್ಲಿಸಲು ನ್ಯಾಯಾಲಯ ನಿರ್ದೇಶಿಸಿದೆ.

- ಅನ್ಯಧರ್ಮ ವಿವಾಹ ಮತಾಂತರವಿಲ್ಲದೇ ಆದರೆ ಕಾನೂನುಬಾಹಿರ ಎಂದ ಅಲಹಾಬಾದ್ ಹೈಕೋರ್ಟ್ .
- ಆರ್ಯ ಸಮಾಜದಂತಹ ಸಂಘಗಳು ವಿವಾಹ ಪ್ರಮಾಣಪತ್ರಗಳನ್ನು ನೀಡಿರುವುದನ್ನು ಕಾನೂನಿನ ಉಲ್ಲಂಘನೆ ಎಂದ ಕೋರ್ಟ್.
- ಸೂಕ್ತ ತನಿಖೆಗೆ ಸೂಚನೆ ನೀಡಿದ ನ್ಯಾಯಾಲಯ.

## ವಾಲ್‌ಮಾರ್ಟ್‌ನಲ್ಲಿ ಚಾಕುವಿನಿಂದ ದಾಳಿ: 11 ಮಂದಿಗೆ ಗಾಯ

**ವಾಷಿಂಗ್ಟನ್:** ಅಮೆರಿಕದ ಮಿಚಿಗನ್ ರಾಜ್ಯದ ಟ್ರಾವರ್ಸ್ ಸಿಟಿ ಬಳಿಯ ವಾಲ್‌ಮಾರ್ಟ್‌ನಲ್ಲಿ ಶಸ್ತ್ರಸಜ್ಜಿತ ವ್ಯಕ್ತಿಯೊಬ್ಬ ಎದುರಿಗೆ ಸಿಕ್ಕವರ ಮೇಲೆ ಚಾಕುವಿನಿಂದ ಇರಿದಿದ್ದಾನೆ. ಘಟನೆಯಲ್ಲಿ 11 ಮಂದಿ ಗಾಯಗೊಂಡಿದ್ದು, ಆರು ಜನರ ಸ್ಥಿತಿ ಗಂಭೀರವಾಗಿದೆ ಎಂದು ಮಾಧ್ಯಮಗಳು ವರದಿ ಮಾಡಿವೆ.

ಘಟನೆ ಸಂಬಂಧ ಕೃತ್ಯವೆಸಗಿದ ಶಂಕಿತ ವ್ಯಕ್ತಿಯನ್ನು ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಇದು ನಿಜವಾಗಿಯೂ ಭಯಾನಕವಾಗಿತ್ತು. ನಾನು ಮತ್ತು ನನ್ನ ಸಹೋದರಿ ಭಯಭೀತರಾಗಿದ್ದೆವು ಎಂದು 36 ವರ್ಷದ ಟಿಫಾನಿ ಡಿಫೆಲ್ ತಿಳಿಸಿದ್ದಾರೆ. ಉತ್ತರ ಮಿಚಿಗನ್‌ನಲ್ಲಿರುವ ಆಸ್ಪತ್ರೆಯಲ್ಲಿ 11 ಜನರು ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದು ಮುನ್ಸನ್ ಹೆಲ್ತ್‌ಕೇರ್ ಸಾಮಾಜಿಕ ಮಾಧ್ಯಮಗಳ ಮೂಲಕ ತಿಳಿಸಿದೆ. ಈ ರೀತಿಯ ಹಿಂಸಾಚಾರದ ಘಟನೆ ಸ್ವೀಕಾರಾರ್ಹವಲ್ಲ. ಗಾಯಗೊಂಡವರಿಗೆ ಅಗತ್ಯ ನೆರವು ಒದಗಿಸಲಾಗುವುದು ಮತ್ತು ಘಟನೆ ನಡೆದ ಕೂಡಲೇ ತ್ವರಿತ ಕ್ರಮ ತೆಗೆದುಕೊಂಡವರಿಗೆ ನಾವು ಕೃತಜ್ಞರಾಗಿರುತ್ತೇವೆ ಎಂದು ಮಿಚಿಗನ್ ಗವರ್ನರ್ ಗ್ರೆಚೆನ್ ವಿಟ್ಕರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 14 ಸಾವಿರಕ್ಕೂ ಅಧಿಕ ಪುರುಷರ ಖಾತೆಗೆ 21.44 ಕೋಟಿ ಜಮಾ

**ಮುಂಬೈ:** ಮಹಿಳೆಯರಿಗಾಗಿಯೇ ಮೀಸಲಾಗಿರುವ 'ಲಡ್ಕಿ ಬಹಿನ್' ಯೋಜನೆಯಡಿ 14,298 ಪುರುಷರು ಪ್ರಯೋಜನಗಳನ್ನು ಪಡೆದಿರುವ ಬಗ್ಗೆ ವರದಿಯಾಗಿದ್ದು, ಈ 'ಮಹಾ' ವಂಚನೆ ಬಗ್ಗೆ ತನಿಖೆ ನಡೆಸುವಂತೆ ವಿರೋಧ ಪಕ್ಷಗಳು ಆಗ್ರಹಿಸಿವೆ. ಕಳೆದ 10 ತಿಂಗಳಲ್ಲಿ 14,298 ಪುರುಷರ ಖಾತೆಗೆ 21.44 ಕೋಟಿ ಜಮೆಯಾಗಿರುವ ಬಗ್ಗೆ ಮಹಿಳಾ, ಮಕ್ಕಳ ಅಭಿವೃದ್ಧಿ ಇಲಾಖೆ ನಡೆಸಿದ ಲೆಕ್ಕಪರಿಶೋಧನೆಯಿಂದ ತಿಳಿದುಬಂದಿದೆ. ಫಲಾನುಭವಿಗಳ ಪರಿಶೀಲನಾ ಪ್ರಕ್ರಿಯೆ ವೇಳೆ ಈ ವಂಚನೆ ಬೆಳಕಿಗೆ ಬಂದಿದೆ ಎಂದು ಸರ್ಕಾರ ತಿಳಿಸಿದೆ. ಈ ಯೋಜನೆಯಡಿಯಲ್ಲಿ ವಾರ್ಷಿಕ 2.5 ಲಕ್ಷ ಕಡಿಮೆ ಆದಾಯ ಹೊಂದಿರುವ 21ರಿಂದ 65 ವರ್ಷ ವಯಸ್ಸಿನ ಮಹಿಳೆಯರ ಖಾತೆಗೆ ಮಾಸಿಕ 1,500 ಜಮಾ ಮಾಡಲಾಗುತ್ತಿದೆ. ಈ ಕುರಿತು ಮಹಾಯುತಿ ಸರ್ಕಾರವನ್ನು ಟೀಕಿಸಿರುವ ಎನ್‌ಸಿಪಿ(ಎಸ್‌ಪಿ) ಮುಖ್ಯಸ್ಥ ಶರದ್ ಪವಾರ್, ಹಲವು ತಿಂಗಳುಗಳ ನಂತರ ನಕಲಿ ಫಲಾನುಭವಿಗಳನ್ನು ಪತ್ತೆ ಮಾಡಿರುವುದು ಸರ್ಕಾರದ ಅದಕ್ಷತೆಯನ್ನು ತೋರಿಸುತ್ತದೆ ಎಂದಿದ್ದಾರೆ. ಇನ್ನು, ಈ ಬಗ್ಗೆ ಸುದ್ದಿಗಾರರಿಗೆ ಪ್ರತಿಕ್ರಿಯಿಸಿರುವ ಉಪಮುಖ್ಯಮಂತ್ರಿ ಅಜಿತ್ ಪವಾರ್, ಯೋಜನೆಯ ಲಾಭ ಪಡೆದ ಪುರುಷರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದ್ದಾರೆ.




ಬಡ ಮಹಿಳೆಯರಿಗಾಗಿ ಈ ಯೋಜನೆಯನ್ನು ತಂದಿದ್ದು, ಪುರಷರು ಈ ಯೋಜನೆ ಲಾಭ ಪಡೆಯುವುದರಲ್ಲಿ ಅರ್ಥವಿಲ್ಲ. ಅವರಿಂದ ಹಣವನ್ನು ವಸೂಲಿ ಮಾಡಲಾಗುತ್ತದೆ ಎಂದಿದ್ದಾರೆ.

**26.34 ಲಕ್ಷ ಫಲಾನುಭವಿಗಳು ತಾತ್ಕಾಲಿಕ ಅಮಾನತು:** ಲಕ್ಕಿ ಬಹಿನ್ ಯೋಜನೆಯಡಿ ಅನರ್ಹ ಎಂದು ಗುರುತಿಸಲಾಗಿರುವ 26.34 ಲಕ್ಷ ಫಲಾನುಭವಿಗಳನ್ನು ಜೂನ್ ತಿಂಗಳ ಕಂತಿನಿಂದ ತಾತ್ಕಾಲಿಕವಾಗಿ ಅಮಾನತುಗೊಳಿಸಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಅದಿತಿ ತತ್ಕರೆ ತಿಳಿಸಿದ್ದಾರೆ. ಅನರ್ಹರಾಗಿದ್ದರೂ ಸಹ, ಸುಮಾರು 26.34 ಲಕ್ಷ ಫಲಾನುಭವಿಗಳು ಲಕ್ಕಿ ಬಹಿನ್ ಯೋಜನೆಯ ಫಲಾನುಭವಿಗಳಾಗಿದ್ದಾರೆ ಎಂದು ಮಾಹಿತಿ, ತಂತ್ರಜ್ಞಾನ ಇಲಾಖೆ ವರದಿ ಮಾಡಿದೆ. ಈ ನಿಟ್ಟಿನಲ್ಲಿ ಕ್ರಮ ಕೈಗೊಳಲಾಗಿದೆ ಎಂದಿದ್ದಾರೆ. ಪರಿಶೀಲನೆಯ ನಂತರ ಅರ್ಹರೆಂದು ಕಂಡುಬಂದವರಿಗೆ ಯೋಜನೆಯನ್ನು ಪುನರಾರಂಭಿಸಲಾಗುತ್ತದೆ.

ಆದರೆ, ಸರ್ಕಾರವನ್ನು ವಂಚಿಸಿ ಅನುಚಿತ ಮಾರ್ಗಗಳ ಮೂಲಕ ಪ್ರಯೋಜನ ಪಡೆದಿರುವ ಫಲಾನುಭವಿಗಳ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳಲಾಗುವುದು ಎಂದು ಎಚ್ಚರಿಸಿದ್ದಾರೆ. ಪುರುಷರು ಈ ಯೋಜನೆಯ ಪ್ರಯೋಜನ ಪಡೆದಿರುವುದು ಪರಿಶೀಲನೆ ವೇಳೆ ಕಂಡುಬಂದಿದೆ. ಕೆಲವು ಕುಟಂಬಗಳಲ್ಲಿ ಇಬ್ಬರಿಗಿಂತ ಹೆಚ್ಚು ಫಲಾನುಭವಿಗಳು ಇರುವುದು ವರದಿಯಾಗಿದೆ. ವಯಸ್ಸಿನ ಮಿತಿ ನಿಗದಿಪಡಿಸಿದ್ದರೂ 65 ವರ್ಷಕ್ಕಿಂತ ಮೇಲ್ಪಟ್ಟವರು ಯೋಜನೆಯ ಪ್ರಯೋಜನ ಪಡೆಯುತ್ತಿದ್ದಾರೆ ಎಂದು ಹೇಳಿದ್ದಾರೆ.

## ಭಯೋತ್ಪಾದಕರಿಗೆ ಸುರಕ್ಷಿತ ತಾಣವಿಲ್ಲವೆಂದು ಆಪರೇಷನ್ ಸಿಂಧೂರ ಸಾಬೀತುಪಡಿಸಿದೆ

**ತಮಿಳುನಾಡು:** ತನ್ನ ಸಾರ್ವಭೌಮತೆಯ ಮೇಲೆ ದಾಳಿ ನಡೆದರೆ ಭಾರತ ಹೇಗೆ ಪ್ರತಿಕ್ರಿಯಿಸುತ್ತದೆ ಎಂಬುದನ್ನು 'ಆಪರೇಷನ್ ಸಿಂಧೂರ' ಜಗತ್ತಿಗೆ ತೋರಿಸಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಭಾನುವಾರ ಹೇಳಿದ್ದಾರೆ. ಚೋಳದೊರೆ ರಾಜೇಂದ್ರ ಚೋಳರ ಜಯಂತ್ಯುತ್ಸವದಲ್ಲಿ ಮಾತನಾಡಿದ ಅವರು, ಭಾರತವನ್ನು ಗುರಿಯಾಗಿಸಿಕೊಂಡಿರುವ ಶತ್ರುಗಳು ಮತ್ತು ಭಯೋತ್ಪಾದಕರಿಗೆ ಸುರಕ್ಷಿತ ತಾಣವಿಲ್ಲ ಎಂಬುದನ್ನು 'ಆಪರೇಷನ್ ಸಿಂಧೂರ' ಸಾಬೀತು ಮಾಡಿದೆ ಎಂದು ಹೇಳಿದ್ದಾರೆ. 'ಆಪರೇಷನ್ ಸಿಂಧೂರ' ದೇಶದ ಜನರಲ್ಲಿ ಜಾಗೃತಿ, ಆತ್ಮವಿಶ್ವಾಸವನ್ನು ಹೆಚ್ಚಿಸಿದೆ. ಜಗತ್ತು ಭಾರತದ ಶಕ್ತಿಯನ್ನು ಅರಿತುಕೊಳ್ಳಬೇಕು ಎಂದು ಪ್ರಧಾನಿ ಪ್ರತಿಪಾದಿಸಿದ್ದಾರೆ.



ರಾಜ ರಾಜ ಚೋಳ ಮತ್ತು ಒಂದನೇ ರಾಜೇಂದ್ರ ಚೋಳ ಹೆಸರುಗಳು ಭಾರತದ ಗುರುತು ಮತ್ತು ಹೆಮ್ಮೆಯ ಪ್ರತೀಕ. ಅವರಿಗಾಗಿ ತಮಿಳುನಾಡಿನಲ್ಲಿ ಭವ್ಯ ಪ್ರತಿಮೆಗಳನ್ನು ನಿರ್ಮಿಸಲಾಗುವುದು ಎಂದು ಮೋದಿ ಘೋಷಿಸಿದ್ದಾರೆ.


# ಪೆಹಲ್ಗಾಮ್ ದಾಳಿಯ ಅಪರಾಧಿಗಳನ್ನು ಇನ್ನೂ ನ್ಯಾಯಕ್ಕೆ ತಂದಿಲ್ಲ

### ಪೆಹಲ್ಗಾಮ್ ದಾಳಿ, ಆಪರೇಷನ್ ಸಿಂಧೂರ ಬಗ್ಗೆ ಟೀಕೆ: ವಾಜಪೇಯಿಯವರನ್ನು ಉಲ್ಲೇಖಿಸಿ ಪ್ರಧಾನಿ ವಿರುದ್ಧ ಕಾಂಗ್ರೆಸ್ ವಾಗ್ದಾಳಿ

**ಹೊಸದಿಲ್ಲಿ:** ಕಾಂಗ್ರೆಸ್ ನಾಯಕ ಜೈರಾಮ್ ರಮೇಶ್ ಅವರು ಪ್ರಧಾನಿ ನರೇಂದ್ರ ಮೋದಿ ಅವರ ಮೇಲೆ ವಾಗ್ದಾಳಿ ನಡೆಸಿದ್ದಾರೆ. ಅವರು ಪೆಹಲ್ಗಾಮ್ ಭಯೋತ್ಪಾದಕ ದಾಳಿ ಮತ್ತು ಆಪರೇಷನ್ ಸಿಂಧೂರ್ ಬಗ್ಗೆ ಟೀಕಿಸಿದ್ದಾರೆ. ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರ ಕಾಲದ ಕಾರ್ಗಿಲ್ ಯುದ್ಧದ ಸಂದರ್ಭದಲ್ಲಿ ಬಿಜೆಪಿ ಹೇಗೆ ನಡೆದುಕೊಂಡಿತ್ತು ಎಂಬುದನ್ನು ನೆನಪಿಸಿದ್ದಾರೆ. ವಾಜಪೇಯಿ ಅವರು 1999ರ ಯುದ್ಧದ ನಂತರ ನಾಲ್ವರು ಸದಸ್ಯರ ಕಾರ್ಗಿಲ್ ಪರಿಶೀಲನಾ ಸಮಿತಿಯನ್ನು ರಚಿಸಿದ್ದರು. ಆದರೆ ಈಗಿನ ಪ್ರಧಾನಿ ಮೋದಿ ಅವರು ಆ ರೀತಿ ಮಾಡುತ್ತಿಲ್ಲ ಎಂದು ರಮೇಶ್ ಟೀಕಿಸಿದ್ದಾರೆ. ಪೆಹಲ್ಗಾಮ್ ದಾಳಿಯ ಬಗ್ಗೆ ಲೋಕಸಭೆಯಲ್ಲಿ ಚರ್ಚೆ ನಡೆಯುವ ಒಂದು ದಿನದ ಮೊದಲು ರಮೇಶ್ ಈ ಹೇಳಿಕೆ ನೀಡಿದ್ದಾರೆ.

**ಆಗಿನ ಬಿಜೆಪಿಯೇ ಬೇರೆ, ಈಗಿನ ಬಿಜೆಪಿಯೇ ಬೇರೆ:** ಜೈರಾಮ್ ರಮೇಶ್ ಅವರು ವಾಜಪೇಯಿ ಅವರ ನಿರ್ಧಾರವನ್ನು ಉಲ್ಲೇಖಿಸಿದ್ದಾರೆ. 1999ರ ಯುದ್ಧದ ನಂತರ ವಾಜಪೇಯಿ ಅವರು ಕಾರ್ಗಿಲ್ ಪರಿಶೀಲನಾ ಸಮಿತಿಯನ್ನು ರಚಿಸಿದರು. ಜುಲೈ 30, 1999 ರಂದು, ಭಾರತ-ಪಾಕಿಸ್ತಾನ ಯುದ್ಧ ಮುಗಿದ ಮೂರು ದಿನಗಳ ನಂತರ, ವಾಜಪೇಯಿ ಸರ್ಕಾರವು ನಾಲ್ವರು ಸದಸ್ಯರ ಕಾರ್ಗಿಲ್ ಪರಿಶೀಲನಾ ಸಮಿತಿಯನ್ನು ರಚಿಸಿತು. ಕೆ. ಸುಬ್ರಹ್ಮಣ್ಯಂ ಅವರು ಸಮಿತಿಯ ಅಧ್ಯಕ್ಷರಾಗಿದ್ದರು. ಅವರ ಮಗ ಈಗ ಭಾರತದ ವಿದೇಶಾಂಗ ಸಚಿವರು. ಸಮಿತಿಯು ಡಿಸೆಂಬರ್ 15, 1999 ರಂದು 'ಸರ್ಪ್ರೈಸ್ ಟು ರೆಕನಿಂಗ್' ಎಂಬ ವರದಿಯನ್ನು ಸಲ್ಲಿಸಿತು. ಫೆಬ್ರವರಿ 23, 2000 ರಂದು ಸೂಕ್ತ ತಿದ್ದುಪಡಿಗಳೊಂದಿಗೆ ಅದನ್ನು ಸಂಸತ್ತಿನಲ್ಲಿ ಮಂಡಿಸಲಾಯಿತು. ಅದರ ಬಗ್ಗೆ ಚರ್ಚೆಯೂ ನಡೆಯಿತು. ಆದರೆ ಅದು ಬೇರೆಯೇ ಪ್ರಧಾನಿ, ಬೇರೆಯೇ ಬಿಜೆಪಿ ಮತ್ತು ಬೇರೆಯೇ ರಾಜಕೀಯ ವಾತಾವರಣವಾಗಿತ್ತು ಎಂದು ರಮೇಶ್ ಹೇಳಿದ್ದಾರೆ.

ಏ. 22 ರಂದು ಜಮ್ಮು, ಕಾಶ್ಮೀರದ ಪೆಹಲ್ಗಾಮ್‌ನಲ್ಲಿ ನಡೆದ ಭಯಾನಕ ಭಯೋತ್ಪಾದಕ ದಾಳಿಯ ಬಗ್ಗೆಯೂ ರಮೇಶ್ ಮಾತನಾಡಿದ್ದಾರೆ. ಆ ದಾಳಿಯ ಅಪರಾಧಿಗಳನ್ನು ಇನ್ನೂ ನ್ಯಾಯಕ್ಕೆ ತಂದಿಲ್ಲ ಎಂದು ಅವರು ಹೇಳಿದ್ದಾರೆ. ಪೆಹಲ್ಗಾಮ್ ಭಯೋತ್ಪಾದಕ ದಾಳಿಗಳು ಏಪ್ರಿಲ್ 22, 2025 ರಂದು ನಡೆದವು. ನೇರವಾಗಿ ಜವಾಬ್ದಾರರಾದ ಭಯೋತ್ಪಾದಕರನ್ನು ಇನ್ನೂ ನ್ಯಾಯಕ್ಕೆ ತಂದಿಲ್ಲ. ಅವರು ಈ ಹಿಂದೆ ಪೂಂಚ್, ಗಂಗಾಗಿರ್, ಗುಲ್ಮಾರ್ಗ್ ನಡೆದ ಭಯೋತ್ಪಾದಕ ದಾಳಿಗಳಲ್ಲಿ ಭಾಗಿಯಾಗಿದ್ದರು ಎಂದು ಅವರು ಹೇಳಿದ್ದಾರೆ. ಪೆಹಲ್ಗಾಮ್ ದಾಳಿಯ ಬಗ್ಗೆ ಸರ್ಕಾರ ಗಂಭೀರವಾಗಿಲ್ಲ ಅಲ್ಲದೆ, ಡೊನಾಲ್ಡ್ ಟ್ರಂಪ್ ಅವರು ಭಾರತ ಮತ್ತು ಪಾಕಿಸ್ತಾನದ ನಡುವೆ ಕದನ ವಿರಾಮವನ್ನು ಮಾಡಿಸಿದ್ದಾರೆ ಎಂಬ ಹೇಳಿಕೆಯ ಬಗ್ಗೆಯೂ ರಮೇಶ್ ಮೋದಿ ಸರ್ಕಾರವನ್ನು ಟೀಕಿಸಿದ್ದಾರೆ. ಪಾಕಿಸ್ತಾನದ ಸೇನಾ ಮುಖ್ಯಸ್ಥರನ್ನು ಊಟಕ್ಕೆ ಹೇಗೆ ಆಹ್ವಾನಿಸಲಾಯಿತು ಎಂದು ಅವರು ಪ್ರಶ್ನಿಸಿದ್ದಾರೆ. ವಾಜಪೇಯಿ ಅವರ ಕಾಲದಲ್ಲಿ ಹೇಗೆ ಸಮಸ್ಯೆಗಳನ್ನು ಪರಿಹರಿಸಲಾಗುತ್ತಿತ್ತು ಎಂಬುದನ್ನು ನೆನಪಿಸಿದ್ದಾರೆ. ಈಗಿನ ಸರ್ಕಾರವು ಆ ರೀತಿಯಲ್ಲಿ ಕಾರ್ಯನಿರ್ವಹಿಸುತ್ತಿಲ್ಲ ಎಂದು ಟೀಕಿಸಿದ್ದಾರೆ. ಪೆಹಲ್ಗಾಮ್ ದಾಳಿಯ ಬಗ್ಗೆ ಸರ್ಕಾರವು ಗಂಭೀರವಾಗಿಲ್ಲ ಎಂದು ಅವರು ಆರೋಪಿಸಿದ್ದಾರೆ.



> ಅಮೆರಿಕಾ ಸೆಂಟ್ರಲ್ ಕಮಾಂಡ್ ಮುಖ್ಯಸ್ಥ ಜನರಲ್ ಮೈಕೆಲ್ ಕುರಿಲ್ಲಾ, ಪಾಕಿಸ್ತಾನವನ್ನು ಭಯೋತ್ಪಾದನಾ ನಿಗ್ರಹ ಕಾರ್ಯಾಚರಣೆಗಳಲ್ಲಿ ಅದ್ಭುತ ಪಾಲುದಾರ ಎಂದು ಕರೆದಿದ್ದಾರೆ. ಅಮೆರಿಕಾ ಕಾರ್ಯದರ್ಶಿ ಪಾಕಿಸ್ತಾನದ ಉಪ ಪ್ರಧಾನಿಯನ್ನು ಭೇಟಿಯಾದಾಗ ಪಾಕಿಸ್ತಾನವನ್ನು ಹೊಗಳಿದ್ದಾರೆ
> – ಜೈರಾಮ್ ರಮೇಶ್, ಕಾಂಗ್ರೆಸ್ ನಾಯಕ

**ಸರ್ವಪಕ್ಷ ಸಭೆಗೂ ಮೋದಿ ಗೈರು**

ಪೆಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ಪ್ರಧಾನಿ ನರೇಂದ್ರ ಮೋದಿ ಅವರು ಸರ್ವಪಕ್ಷ ಸಭೆ ನಡೆಸದಿರುವ ಬಗ್ಗೆಯೂ ರಮೇಶ್ ಟೀಕಿಸಿದ್ದಾರೆ. ರಾಷ್ಟ್ರೀಯ ಬಿಕ್ಕಟ್ಟಿನ ಸಂದರ್ಭದಲ್ಲಿ ಸರ್ಕಾರವು ಒಮ್ಮತವನ್ನು ಮೂಡಿಸುವಲ್ಲಿ ಗಂಭೀರವಾಗಿಲ್ಲವೇ ಎಂದು ಅವರು ಪ್ರಶ್ನಿಸಿದ್ದಾರೆ. ಕಾಂಗ್ರೆಸ್ ಕೋರಿಕೆಯ ಮೇರೆಗೆ, ಸರ್ವಪಕ್ಷ ಸಭೆಯನ್ನು ಕರೆಯಲಾಗಿತ್ತು. ಆದರೆ ಅದು ಪ್ರಧಾನಿಯವರ ಅಧ್ಯಕ್ಷತೆಯಲ್ಲಿ ನಡೆಯಲಿಲ್ಲ. ರಕ್ಷಣಾ ಮಂತ್ರಿಯವರು ಸಭೆಯ ಅಧ್ಯಕ್ಷತೆ ವಹಿಸಿದ್ದರು. ಗುಪ್ತಚರ ವೈಫಲ್ಯಗಳ ಬಗ್ಗೆ ಪ್ರಶ್ನೆಗಳನ್ನು ಎತ್ತಲಾಯಿತು ಎಂದು ರಮೇಶ್ ಹೇಳಿದ್ದಾರೆ.

## ಮಿನಿ ನ್ಯೂಸ್

### ಸಿಆರ್‌ಪಿಎಫ್ ಯೋಧರ ಸೇವೆಯನ್ನು ಶ್ಲಾಘಿಸಿದ ಪ್ರಧಾನಿ ಮೋದಿ

**ನವದೆಹಲಿ:** ಕೇಂದ್ರ ಮೀಸಲು ಪೊಲೀಸ್ ಪಡೆಗಳು ಅತ್ಯಂತ ಪರೀಕ್ಷಾರ್ಥ ಸಂದರ್ಭಗಳಲ್ಲಿ ಉತ್ತಮ ಕರ್ತವ್ಯ, ಧೈರ್ಯ ಮತ್ತು ದೃಢ ಬದ್ಧತೆಯ ಮೂಲಕ ತಮ ಛಾಪು ಮೂಡಿಸಿವೆ ಎಂದು ಪ್ರಧಾನಿ ಮೋದಿ ಶ್ಲಾಘಿಸಿದ್ದಾರೆ. ಸಿಆರ್‌ಪಿಎಫ್ ಸಂಸ್ಥಾಪನಾ ದಿನದಂದು ಎಲ್ಲಾ ಸಿಬ್ಬಂದಿಗೆ ಶುಭಾಶಯ ತಿಳಿಸಿದ್ದಾರೆ. ಕಳೆದ 1939ರಲ್ಲಿ ಈ ದಿನದಂದು ಈ ಪಡೆಯನ್ನು ಕ್ರೌನ್ ರೆಪ್ರೆಸೆಂಟೇಟಿವ್ಸ್ ಪೊಲೀಸ್ ಎಂದು ಸ್ಥಾಪಿಸಲಾಯಿತು ಸ್ವಾತಂತ್ರ್ಯದ ನಂತರ ಅದರ ಹೆಸರನ್ನು ಬದಲಾಯಿಸಲಾಯಿತು. ಇದು ದೇಶದ ಅತಿದೊಡ್ಡ ಕೇಂದ್ರ ಪೊಲೀಸ್ ಪಡೆ, ದಂಗೆ ಸಂದರ್ಭದಲ್ಲಿ, ಅವನ್ನು ನಿಗ್ರಹಿಸಲು ನಿರ್ಣಾಯಕ ಪಾತ್ರ ವಹಿಸುತ್ತದೆ ಎಂದು ಕೊಂಡಾಡಿದ್ದಾರೆ. ಈ ಪಡೆ ನಮ ಭದ್ರತಾ ಸ್ತರದ, ವಿಶೇಷವಾಗಿ ಆಂತರಿಕ ಭದ್ರತೆಗೆ ಸಂಬಂಧಿಸಿದ ಸವಾಲಿನ ಅಂಶಗಳಲ್ಲಿ ಪ್ರಮುಖ ಪಾತ್ರ ವಹಿಸಿದೆ ಎಂದು ಮೋದಿ ಎಕ್ಸ್‌ನಲ್ಲಿ ಹೇಳಿದರು. ಸಿಆರ್‌ಪಿಎಫ್ ಸಿಬ್ಬಂದಿ ಅತ್ಯಂತ ಪರೀಕ್ಷಾರ್ಥ ಸಂದರ್ಭಗಳಲ್ಲಿ ತಮ ಕರ್ತವ್ಯಪಾಲನೆ, ಧೈರ್ಯ ಮತ್ತು ದೃಢ ಬದ್ಧತೆಗೆ ಒಂದು ಗುರುತು ಮಾಡಿದ್ದಾರೆ. ಮಾನವೀಯ ಸವಾಲುಗಳನ್ನು ನಿವಾರಿಸುವಲ್ಲಿ ಅವರ ಕೊಡುಗೆಯೂ ಶ್ಲಾಘನೀಯ ಎಂದು ಪ್ರಧಾನಿ ಹೇಳಿದರು.

### ಐಎಸ್‌ಐ ಬೆಂಬಲಿತ ಶಸ್ತ್ರಾಸ್ತ್ರ ಕಳ್ಳಸಾಗಣೆ ಜಾಲ ಪತ್ತೆ, ಐದು ಜನರ ಬಂಧನ

**ಚಂಡೀಗಢ:** ಪಾಕಿಸ್ತಾನದ ಐಎಸ್‌ಐ ಬೆಂಬಲಿತ ಹ್ಯಾಂಡ್ಲರ್‌ಗಳಿಂದ ನಿರ್ವಹಿಸಲ್ಪಡುತ್ತಿದ್ದ ಅತ್ಯಾಧುನಿಕ ಶಸ್ತ್ರಾಸ್ತ್ರಗಳ ಪ್ರಮುಖ ಗಡಿಯಾಚೆಗಿನ ಕಳ್ಳಸಾಗಣೆ ಜಾಲವನ್ನು ಅಮೃತಸರ ಗ್ರಾಮೀಣ ಪೊಲೀಸರು ಮತ್ತು ಕೇಂದ್ರ ಸಂಸ್ಥೆಗಳ ಜಂಟಿ ಕಾರ್ಯಾಚರಣೆಯಲ್ಲಿ ಭೇದಿಸಿದ್ದಾರೆ. ಈ ಕಾರ್ಯಾಚರಣೆಯಲ್ಲಿ ಐವರನ್ನು ಬಂಧಿಸಲಾಗಿದೆ ಎಂದು ಪಂಜಾಬ್‌ನ ಪೊಲೀಸ್ ಮಹಾನಿರ್ದೇಶಕ ಗೌರವ್ ಯಾದವ್ ತಿಳಿಸಿದ್ದಾರೆ.

ಆರೋಪಿಗಳಿಂದ ಎಕೆ ಸೈಗಾ 308 ಅಸಾಲ್ಟ್ ಅಸಾಲ್ಟ್ ರೈಫಲ್, ಎರಡು ಮ್ಯಾಗಜೀನ್‌ಗಳು, ಎರಡು 9 ಎಂಎಂ ಗ್ಲಾಕ್ ಪಿಸ್ತೂಲ್‌ಗಳು, ನಾಲ್ಕು ಮ್ಯಾಗಜೀನ್‌ಗಳು, ಎಕೆ ರೈಫಲ್‌ನ 90 ಲೈವ್ ಕಾರ್ಟ್ರಿಡ್ಜ್‌ಗಳು, 10 ಲೈವ್ ಪಿಸ್ತೂಲ್ ಕಾರ್ಟ್ರಿಡ್ಜ್‌ಗಳು, 7.50 ಲಕ್ಷ ರೂ. ನಗದು, ಒಂದು ಕಾರು ಮತ್ತು ಮೂರು ಮೊಬೈಲ್ ಫೋನ್‌ಗಳನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ. ಪ್ರಾಥಮಿಕ ತನಿಖೆಯಲ್ಲಿ ಆರೋಪಿಗಳು ಪಾಕಿಸ್ತಾನ ಮೂಲದ ವ್ಯಕ್ತಿಯೊಂದಿಗೆ ನೇರ ಸಂಪರ್ಕ ಹೊಂದಿದ್ದರು ಎಂದು ತಿಳಿದುಬಂದಿದೆ. ತಡೆಹಿಡಿಯಲಾದ ಸರಕನ್ನು ಗ್ಯಾಂಗ್‌ಸ್ಟರ್ ಜಗ್ಗು ಭಗವಾನ್ ಪುರಿಯಾ ಅವರ ಪರಿಚಿತ ಸಹಚರ ನವ್ ಪಂಡೋರಿಗೆ ತಲುಪಿಸಲು ಉದ್ದೇಶಿಸಲಾಗಿತ್ತು, ಇದು ವಿಶಾಲವಾದ ಭಯೋತ್ಪಾದನಾ-ದರೋಡೆಕೋರ ಸಂಬಂಧವನ್ನು ಸೂಚಿಸುತ್ತದೆ ಎಂದು ಯಾದವ್ ತಿಳಿಸಿದ್ದಾರೆ. ಆರೋಪಿಗಳನ್ನು ರಂಗರ್ ಗ್ರಾಮದ ಸ್ಥಳೀಯರಾದ ಜೋಬನ್‌ಜಿತ್ ಸಿಂಗ್ ಅಲಿಯಾಸ್ ಜೋಬನ್ ಮತ್ತು ಗೋರಾ ಸಿಂಗ್, ಅಮೃತಸರದ ರಸೂಲ್‌ಪುರ್ ಕಲ್ಲಾರ್‌ನ ಶೆನ್ಸನ್ ಆಲಿಯಾಸ್ ಶಾಲು, ಸನ್ನಿ ಸಿಂಗ್, ರೂಪನಗರದ ಮುಗಲ್ ಮಾಂಗ್ರಿಯ ಜಸ್ಟೀತ್ ಸಿಂಗ್ ಅಲಿಯಾಸ್ ಮೋಟು ಎಂದು ಗುರುತಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

### 13 ದಿನಗಳ ನಂತರ ಸಮಾಧಿಯಿಂದ ಶವ ಮೇಲೆತ್ತಿ ಮರಣೋತ್ತರ ಪರೀಕ್ಷೆ

**ರಾಂಪುರ:** ಶವ ಸಂಸ್ಕಾರದ ನಡೆದ 13 ದಿನಗಳ ನಂತರ ಸಮಾದಿಯಿಂದ ಮಹಿಳೆ ಶವ ಮೇಲೆತ್ತಿ ಮರಣೋತ್ತರ ಪರೀಕ್ಷೆಗೆ ಮುಂದಾದ ಘಟನೆ ಉತ್ತರ ಪ್ರದೇಶದಲ್ಲಿ ನಡೆದಿದೆ. ಮಹಿಳೆಯನ್ನು ಆಕೆಯ ಪತಿಯೇ ಕೊಂದಿದ್ದಾರೆ ಎಂದು ಆಕೆಯ ಕುಟುಂಬ ಆರೋಪಿಸಿದ ನಂತರ, ಸಮಾಧಿ ಮಾಡಿದ 13 ದಿನಗಳ ನಂತರ ಮರಣೋತ್ತರ ಪರೀಕ್ಷೆಗಾಗಿ ಮಹಿಳೆಯ ಶವವನ್ನು ಹೊರತೆಗೆಯಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಮೌಲಾನಾ ಬಶೀರ್ ಎಂಬುವವರನ್ನು 12 ವರ್ಷಗಳ ಹಿಂದೆ ವಿವಾಹವಾಗಿದ್ದ ಸಲ್ಮಾ ಬೇಗಂ(37) ಎಂಬಾಕೆ ಕಳೆದ ಹದಿನೈದು ದಿನಗಳ ಹಿಂದೆ ರಾಂಪುರದಲ್ಲಿರುವ ಹಳ್ಳಿಯೊಂದರಲ್ಲಿ ಶವವಾಗಿ ಪತ್ತೆಯಾದ್ದಳು. ನಂತರ ಯಾವುದೇ ಮಾಹಿತಿ ನೀಡದೆ ಶವ ಸಂಸ್ಕಾರ ನಡೆಸಲಾಗಿತ್ತು. ಈ ನಡುವೆ ನೆರೆಯ ಛತ್ತೀಸ್‌ಗಢದ ಬಿಲಾಸ್‌ಪುರದಲ್ಲಿರುವ ಸಲ್ಮಾ ಬೇಗಂ ಕುಟುಂಬವು ಪತಿ ಬಶೀರ್ ಮೇಲೆ ಕೊಲೆ ಆರೋಪ ಮಾಡಿದ್ದಾರೆ ಎಂದು ರಾಂಪುರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವಿದ್ಯಾಸಾಗರ್ ಮಿಶ್ರಾ ತಿಳಿಸಿದ್ದಾರೆ. ಪೊಲೀಸರ ಪ್ರಕಾರ, ರಾಂಪುರ ಮೂಲದ ಬಶೀರ್ ಅವರು ಛತ್ತೀಸ್‌ಗಢದಲ್ಲಿ ವ್ಯವಹಾರವನ್ನು ಹೊಂದಿದ್ದಾರೆ ಮತ್ತು ಮದರಸಾವನ್ನು ಸಹ ನಡೆಸುತ್ತಿದ್ದಾರೆ. ಛತ್ತೀಸ್‌ಗಢದಲ್ಲಿರುವ ಅವರ ಕುಟುಂಬವು ಈ ವಿಷಯದ ಬಗ್ಗೆ ತನಿಖೆ ನಡೆಸಲು ಸ್ಥಳೀಯ ಪೊಲೀಸರನ್ನು ಸಂಪರ್ಕಿಸಿತು, ಅವರು ರಾಂಪುರದಲ್ಲಿರುವ ತಮ್ಮ ಪೊಲೀಸರಿಗೆ ಮಾಹಿತಿ ರವಾನಿಸಲಾಗಿತ್ತು. ರಾಂಪುರ ಜಿಲ್ಲಾ ಮ್ಯಾಜಿಸ್ಟ್ರೇಟ್ ನಿರ್ದೇಶನದ ಮೇರೆಗೆ ಪೊಲೀಸರು ಆಕೆಯ ಶವವನ್ನು ಹೊರತೆಗೆಸಿ ಮರಣೋತ್ತರ ಪರೀಕ್ಷೆಗೆ ಕಳುಹಿಸಿದ್ದಾರೆ. ವರದಿ ಬಂದ ಮೇಲೆ ಪೊಲೀಸರು ಮುಂದಿನ ಕ್ರಮ ಕೈಗೊಳ್ಳಲು ಕಾಯುತ್ತಿದ್ದಾರೆ ಎಂದು ಮಿಶ್ರಾ ಹೇಳಿದರು.

### ಹಸಿವಿನಿಂದ ಸಾವು ಹೆಚ್ಚಳ: 3 ಕಡೆ ದಾಳಿಗೆ ತಾತ್ಕಾಲಿಕ ಬ್ರೇಕ್; ಇಸ್ರೇಲ್



**ಟೆಲ್ ಅವಿವ್:** ಹದಗೆಡುತ್ತಿರುವ ಮಾನವೀಯ ನೆರವಿನ ಪರಿಸ್ಥಿತಿಯನ್ನು ಪರಿಹರಿಸುವ ಕ್ರಮಗಳ ಭಾಗವಾಗಿ ಗಾಜಾದ ಮೂರು ಪ್ರದೇಶಗಳಲ್ಲಿ ದಾಳಿಗೆ ಯುದ್ಧತಂತ್ರದ ವಿರಾಮವನ್ನು ಪ್ರಾರಂಭಿಸುವುದಾಗಿ ಇಸ್ರೇಲ್ ಸೇನೆ ಭಾನುವಾರ ತಿಳಿಸಿದೆ.ಭಾನುವಾರದಿಂದ ಪ್ರಾರಂಭವಾಗಿ ಮುಂದಿನ ಸೂಚನೆ ಬರುವವರೆಗೆ ಸ್ಥಳೀಯ ಸಮಯ ಬೆಳಿಗ್ಗೆ 10:00 ರಿಂದ ರಾತ್ರಿ 8:00 ರವರೆಗೆ ಮುವಾಸಿ, ದೇರ್ ಅಲ್-ಬಲಾ ಮತ್ತು ಗಾಜಾ ನಗರದಲ್ಲಿ ಮಿಲಿಟರಿ ಚಟುವಟಿಕೆಯನ್ನು ಸ್ಥಗಿತಗೊಳಿಸುವುದಾಗಿ ಸೇನೆ ತಿಳಿಸಿದೆ.

ಗಾಜಾದಾದ್ಯಂತ ಜನರಿಗೆ ಆಹಾರ, ಇತರ ಸರಬರಾಜುಗಳನ್ನು ತಲುಪಿಸಲು ವಿಶ್ವಸಂಸ್ಥೆಯ ನೆರವು ಸಂಸ್ಥೆಗಳಿಗೆ ಸಹಾಯ ಮಾಡಲು ಸುರಕ್ಷಿತ ಮಾರ್ಗಗಳನ್ನು ಸಹ ಗೊತ್ತುಪಡಿಸುವುದಾಗಿ ಸೇನೆ ತಿಳಿಸಿದೆ. ರಾತ್ರಿ ಗಾಜಾದಲ್ಲಿ ವಾಯು ಮಾರ್ಗದ ಮೂಲಕ ಮಾನವೀಯ ನೆರವು ಕಾರ್ಯ ಆರಂಭವಾಗಲಿದೆ. ವಿಶ್ವಸಂಸ್ಥೆಯ ಏಜೆನ್ಸಿಗಳಿಗೆ ಮಾನವೀಯ ಕಾರಿಡಾರ್‌ಗಳನ್ನು ಸ್ಥಾಪಿಸಲಾಗುವುದು ಎಂದು ಹೇಳಿದೆ. ಗಾಜಾದಲ್ಲಿ ಹಸಿವಿನಿಂದ ಸಾವಿಗೀಡಾಗುತ್ತಿರುವವರ ಸಂಖ್ಯೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಇಸ್ರೇಲ್‌ನಿಂದ ಈ ಹೇಳಿಕೆ ಬಂದಿದೆ. ಇತ್ತೀಚೆಗೆ ನೆರವು ಪಡೆಯುತ್ತಿರುವಾಗಲೇ ಇಸ್ರೇಲ್ ದಾಳಿಗೆ ತುತ್ತಾಗಿ ನೂರಾರು ಪ್ಯಾಲೆಸ್ಟೀನಿಯನ್ನರು ಸಾವಿಗೀಡಾದ ಬಳಿಕ ಅಂತರರಾಷ್ಟ್ರೀಯ ವಲಯದಲ್ಲಿ ಭಾರಿ ಟೀಕೆ ವ್ಯಕ್ತವಾಗಿತ್ತು. ಆದರೆ, ಹಮಾಸ್ ವಿರುದ್ಧ ಗಾಜಾದಲ್ಲಿ ಯುದ್ಧ ಕಾರ್ಯಾಚರಣೆಗಳು ನಿಂತಿಲ್ಲ ಎಂದು ಮಿಲಿಟರಿ ಒತ್ತಿ ಹೇಳಿದೆ.

